# ಲೋಕ ಅದಾಲತ್ ಇದರ ಸದುಪಯೋಗ ಪಡೆದುಕೊಳ್ಳಬೇಕು

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು 2ನೇ ಮಧ್ಯಸ್ಥಿಕೆ ಅಭಿಯಾನ ಹಾಗೂ ವಿಶೇಷ ಲೋಕ ಅದಾಲತ್ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಹೇಳಿದರು.ಶನಿವಾರದಂದು ಜಿಲ್ಲಾ ನ್ಯಾಯಾಲಯ ಆವರಣದಲ್ಲಿರುವ ಎ.ಡಿ.ಆರ್. ಕಟ್ಟಡದ ಸಭಾಂಗಣದಲ್ಲಿ ದೇಶಕ್ಕಾಗಿ ಮಧ್ಯಸ್ಥಿಕೆ ಅಭಿಯಾನ 2.0 ಮತ್ತು ವಿಶೇಷ ಲೋಕ ಅದಾಲತ್ ಅಭಿಯಾನ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಮಧ್ಯಸ್ಥಿಕೆ ಹಾಗೂ ಸಂಧಾನ ಯೋಜನಾ ಸಮಿತಿ ನವದೆಹಲಿ ಇವರು ಜನವರಿ 2 ರಿಂದ 90 ದಿನಗಳ ದೇಶಕ್ಕಾಗಿ ಮಧ್ಯಸ್ಥಿಕೆ ಅಭಿಯಾನ ಭಾಗ –2 ನಡೆಸಲು ತೀರ್ಮಾನಿಸಿರುತ್ತಾರೆ. ಈ 90 ದಿನಗಳ ಮಧ್ಯಸ್ಥಿಕೆ ಅಭಿಯಾನ ಜನವರಿ 2 ರಿಂದ ನಡೆಯಲಿದೆ ಎಂದು ಅವರು ಹೇಳಿದರು. ಮಧ್ಯಸ್ಥಿಕೆಗಾಗಿ ಸೂಕ್ತವಾಗಿರುವ ಪ್ರಕರಣಗಳನ್ನು ಮಧ್ಯಸ್ಥಿಕೆಗಾರರ ಮೂಲಕ ರಾಜಿಪಡಿಸಿಕೊಂಡು ಅಭಿಯಾನ ಯಶಸ್ವಿಗೊಳಿಸಬೇಕೆಂದು ಅವರು ಹೇಳಿದರು. ಮಧ್ಯಸ್ಥಿಕೆ ಕೇಂದ್ರದಲ್ಲಿ ಮಧ್ಯಸ್ಥಿಕೆಗಾರರ ಮೂಲಕ ಪಕ್ಷಗಾರರು ಪ್ರಕರಣವನ್ನು ಇತ್ಯರ್ಥಪಡಿಸಿಕೊಂಡು ಅಭಿಯಾನದ ಸದುಪಯೋಗ ಪಡೆಸಿಕೊಳ್ಳಬೇಕೆಂದು ಅವರು ಮನವಿ ಮಾಡಿದರು. ಕೌಟುಂಬಿಕ ಪ್ರಕರಣಗಳು ಚೆಕ್ ಬೌನ್ಸ್ ಪ್ರಕರಣಗಳು ಮೋಟಾರು ಅಪಘಾತ ಪ್ರಕರಣಗಳು, ಭೂ ಸ್ವಾಧೀನ ಪ್ರಕರಣಗಳು ಪಾಲು ವಿಭನೆಗೆಗೆ ಸಲ್ಲಿಸಿದ ಪ್ರಕರಣಗಳು ಕಾರ್ಮಿಕರಿಗೆ ಸಂಬಂಧಿಸಿದಂತೆ ಪ್ರಕರಣಗಳು ಮತ್ತು ಇತರೆ ಸಿವ್ಹಿಲ್ ವ್ಯಾಜ್ಯಗಳನ್ನು ಮಧ್ಯಸ್ಥಿಕೆ ಮೂಲಕ ಬಗೆಹರಿಸಿಕೊಳ್ಳುವುದು ಪಕ್ಷಗಾರರಿಗೆ ಸೂಕ್ತ ಆಗಿರುತ್ತದೆ ಜಿಲ್ಲೆಯಲ್ಲಿ ಎಲ್ಲಾ ಪಕ್ಷಗಾರರು ಸದರಿ ಅಭಿಯಾನದಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡು ಹಣ ಮತ್ತು ಸಮಯವನ್ನು ಉಳಿಸಿ ನೆಮ್ಮದಿಯಿಂದ ಇರುವಂತೆ ಕಕ್ಷಿದಾರರಿಗೆ ಕೋರಲಾಗಿದೆ ಎಂದು ಹೇಳಿದರು.

# ಪುತ್ಥಳಿ ಅನಾವರಣ ಹಾಗೂ ಕೆಎಸ್‌ಪಿ ಶಿಕ್ಷಣ ಸಂಸ್ಥೆಯ ಸುವರ್ಣ ಮಹೋತ್ಸವ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ನ್ಯಾಯವಾದಿಯಾಗಿ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯನ್ನುಂಟು ಮಾಡಿ,ಸಾವಿರಾರು ಬಡ ಮಕ್ಕಳ ಬಾಳಿನಲ್ಲಿ ವಿದ್ಯೆಯ ಬೆಳಕು ಚೆಲ್ಲಿದ ಕಿಸಾನ ಶಿಕ್ಷಣ ಪ್ರಸಾರಕ ಮಂಡಳದ ಅಧ್ಯಕ್ಷ ದಿ.ಬಾಬಾರಾವ ಶಿಂದೆ ಹೊನ್ನಾಳಿಕರ್ ಅವರ ಪುತ್ಥಳಿ ಅನಾವರಣ ಹಾಗೂ ಕೆಎಸ್‌ಪಿ ಶಿಕ್ಷಣ ಸಂಸ್ಥೆಯ ಸುವರ್ಣ ಮಹೋತ್ಸವ 2026ರ ಜನೇವರಿ 18ಕ್ಕೆ ಅದ್ದೂರಿಯಾಗಿ ಜರುಗಿಸಲಾಗುವುದು ಎಂದು ಅರಣ್ಯ,ಜೀವಿಶಾಸ್ತ್ರ ಹಾಗೂ ಪರಿಸರ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಶಿವಾಜಿ ಪದವಿ ಪೂರ್ವ ಕಾಲೇಜಿನಲ್ಲಿ ಕೆಎಸ್‌ಪಿ ಮಂಡಳದ ಅಧ್ಯಕ್ಷ ದಿ.ಬಾಬಾರಾವ ಶಿಂದೆ ಹೊನ್ನಾಳಿಕರ್ ಅವರ ಪುತ್ಥಳಿ ಅನಾವರಣದ ಅಂಗವಾಗಿ ಕರೆದ ಪೂರ್ವಭಾವಿ ಸಭೆಯಲ್ಲಿ ಛತ್ರಪತಿ ಶಿವಾಜಿ ಮಾಹಾರಾಜರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ,ಅವರು ಮಾತನಾಡಿದರು.

ದಿ.ಬಾಬಾರಾವ ಶಿಂದೆ ಹೊನ್ನಾಳಿಕರ್ ಗಡಿ ಭಾಗದಲ್ಲಿ ಶಿಕ್ಷಣ ಸಂಸ್ಥೆ ತೆರೆದು ಕನ್ನಡ,ಮರಾಠಿ ಮಾಧ್ಯಮದ ಮಕ್ಕಳಿಗೆ ಗುಣಾತ್ಮಕ,ಸಂಸ್ಕಾರಭರಿತ ಶಿಕ್ಷಣ ಕೊಡಿಸುವ ವ್ಯವಸ್ಥೆ ಮಾಡಿದ್ದಾರೆ.ಅವರ ಸ್ಮರಣಾರ್ಥವಾಗಿ ಕಾಲೇಜಿನ ಆವರಣದಲ್ಲಿ ಪಂಚಲೋಹದಿಂದ ತಯ್ಯಾರಿಸಿದ ದಿ.ಬಾಬಾರಾವ ಶಿಂದೆ ಹೊನ್ನಾಳಿಕರ್ ಅವರ ಪುತ್ಥಳಿ ಜ.18ಕ್ಕೆ ಅನಾವರಣಗೊಳಿ

> ಅತ್ಯಂತ ಹಿಂದುಳಿದ ಹಾಗೂ ಯಾವುದೇ ಸೌಲಭ್ಯವಿಲ್ಲದ ಆ ಕಾಲದ ಕ–ಕ ಭಾಗದಲ್ಲಿ ಡಾ.ಚನ್ನಬಸವ ಪಟ್ಟದ್ದೇವರು,ಡಾ.ಭೀಮಣ್ಣ ಖಂಡ್ರೆ ಹಾಗೂ ಕಿಸಾನ ಶಿಕ್ಷಣ ಪ್ರಸಾರಕ ಮಂಡಳದ ಅಧ್ಯಕ್ಷ ದಿ.ಬಾಬಾರಾವ ಶಿಂದೆ ಹೊನ್ನಾಳಿಕರ್ ಅವರು ಈ ಭಾಗದ ಶೈಕ್ಷಣಿಕ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ.ದಿ.ಬಾಬಾರಾವ ಶಿಂದೆ ಹೊನ್ನಾಳಿಕರ್ ಅವರ ಪುತ್ಥಳಿ ಅನಾವರಣ ಜ.18ಕ್ಕೆ ನಡೆಯಲಿದೆ.
>
> **ಈಶ್ವರ ಖಂಡ್ರೆ**
>
> **ಸಚಿವರು ಬೆಂಗಳೂರು.**

ಸುತ್ತಿರುವುದು ಅತ್ಯಂತ ಖುಷಿಯ ಮತ್ತು ಅಭಿಮಾನದ ಸಂಗತಿಯಾಗಿದೆ .ಕಾರ್ಯಕ್ರಮದ ಯಶಸ್ವಿಗೆ ಅಗತ್ಯ ನೆರವು ನೀಡಲು ನಾನು ಸದಾ ಸಿದ್ಧನಿದ್ದೇನೆ ಎಂದು ಹೇಳಿ,ಕಾಲೇಜಿನ ಸುತ್ತ ರಸ್ತೆ ,ಚರಂಡಿ ನಿರ್ಮಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸ್ಥಳದಲ್ಲಿಯೇ ಸೂಚಿಸಿದರು.

ಕೆಎಸ್‌ಪಿ ಮಂಡಳದ ಅಧ್ಯಕ್ಷ ಅನೀಲ ಶಿಂದೆ ಮಾತನಾಡಿ,ನಮ್ಮ ತಂದೆ ದಿ.ಬಾಬಾರಾವ ಶಿಂದೆ ಅವರು ಹುಟ್ಟು ಹಾಕಿದ ಶಿಕ್ಷಣ ಸಂಸ್ಥೆಯಲ್ಲಿ ಕಲಿತವರು ದೇಶ,ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಸಂತಸದ ಸಂಗತಿ. ಪಕ್ಷಾತೀತವಾಗಿ,

ರಾಜಕೀಯರಹಿತವಾಗಿ ನಡೆಯುವ ಪುತ್ಥಳಿ ಉದ್ಘಾಟನೆ ಕಾರ್ಯಕ್ರಮಕ್ಕೆ ಕರ್ನಾಟಕ,ಮಹಾರಾಷ್ಟ್ರದ ಪೂಜ್ಯರನ್ನ,ರಾಜಕೀಯಧುರಿಣರನ್ನ ಆಮಂತ್ರಿಸಲಾಗುವುದು.



ಕಾರ್ಯಕ್ರಮದ ಯಶಸ್ವಿಗೆ ವಿವಿಧ ಸಮಿತಿಗಳನ್ನು ರಚಿಸಲಾಗುವುದು .ಪ್ರತಿಯೊಬ್ಬರೂ ತಮಗೆ ನೀಡಿದ ಹೊಣೆಗಾರಿಕೆ ಚಾಚು ತಪ್ಪದೆ ನಿರ್ವಹಿಸಬೇಕು ಎಂದರು.

ಸಂಸ್ಥೆಯ ಉಪಾಧ್ಯಕ್ಷ ರಾಮರಾವ ವರವಟ್ಟಿಕರ್ ಮಾತನಾಡಿ,ಶಿಕ್ಷಣ ಸಂಸ್ಥೆಯಲ್ಲಿ ವಿವಿಧ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮೇಲೆ ಒತ್ತಡ ತರಬೇಕು ಎಂದು ಸಚಿವರಿಗೆ ಆಗ್ರಹಿಸಿದರು.

ಸಂಸ್ಥೆ ಕಾರ್ಯದರ್ಶಿ ಡಾ.ಪ್ರಕಾಶ ಪಾಟೀಲ್ ಪ್ರಾಸ್ತಾವಿಕ ಮಾತನಾಡಿದರು.

ಸಭೆಯಲ್ಲಿ ಉಪಾಧ್ಯಕ್ಷರಾದ ರಘುನಾಥರಾವ ಜಾಧವ,ಪ್ರಮುಖರಾದ ಡಿಗಂಬರರಾವ ಮಾನಕರಿ, ಅಶೋಕರಾವ ಸೂರ್ಯವಂಶಿ,ಪ್ರತಾಪರಾವ ಪಾಟೀಲ,ಗೋವಿಂದರಾವ ಘಾಟಗೆ,ಶಿವಾಜಿರಾವ ಪಾಟೀಲ,ವಿಜಯಕುಮಾರ ಪಾಟೀಲ,ಕೃಷ್ಣಕಾಂತ ಶಿಂದೆ,ಡಾ.ದಿನಕರರಾವ ಮೋರೆ,ಅಶೋಕರಾವ ಪಾಟೀಲ್,ವಾಮನರಾವ ಕಾಳೆ,ಡಾ.ರಾಜೇಂದ್ರ ಜಾಧವ, ಅನಂತ ಪವಾರ, ವೆಂಕಟರಾವ ನೆಲವಾಡೆ, ಮಾಣಿಕರಾವ ಜಾಧವ,ರಮೇಶ ಪಾಟೀಲ ,ನಿವೃತ್ತ ಕಾರ್ಯ ನಿರ್ವಾಹಕ ಅಭಿಯಂತರ ವಿಲಾಸ ಮಾಶಟ್ಟೆ,ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ,

ಉಪಾಧ್ಯಕ್ಷವಿಜಯಕುಮಾರರಾಜಭವನ,ಇಂಜಿನೀಯರ್ ಮಹಾದೇವ ಮಮ್ಮಾಡಿ.ಜಿ.ಬಿರಾದಾರ,ನೀಲಕಂಠ ಕಾಳೆ,ಎಮ್.ಶಿಂದೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.ವಿಶ್ರಾಂತ ಪ್ರಾಂಶುಪಾಲ ಪ್ರೊ. ಚಂದ್ರಕಾಂತ ಬಿರಾದಾರ ಸ್ವಾಗತಿಸಿದರು.

# ರಕ್ತದಾನವೂ ಜಗತ್ತಿನ ಸರ್ವ ಶ್ರೇಷ್ಠದಾನ: ಶ್ರೀರಂಗ ಪರಿಹಾರ



• **ಮಲ್ಲಮ್ಮ ನುಡಿ ವಾರ್ತೆ ಕಮಲನಗರ:**

ರಕ್ತದಾನವೂ ಜಗತ್ತಿನ ಸರ್ವ ಶ್ರೇಷ್ಠದಾನ, ಇನ್ನೊಬ್ಬರ ಜೀವವನ್ನು ಉಳಿಸುವ ಮಹಾಕಾರ್ಯ ರಕ್ತದಾನವಾಗಿದೆ ಎಂದು ತಾ.ಪಂ ಮಾಜಿ ಅಧ್ಯಕ್ಷರಾದ ಶ್ರೀರಂಗ ಪರಿಹಾರ ಹೇಳಿದರು.

ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ರವಿವಾರ ಜಗದ್ಗುರು ಶ್ರೀಮದ ರಾಮಾನಂದಚಾರ್ಯ ನರೇಂದ್ರಚಾರ್ಯಜಿ ರಾಮಾನಂದಚಾರ್ಯ ದಕ್ಷಿಣಪೀಠ ,ನಾಣಿಜಧಾಮ ವತಿಯಿಂದ ಆಯೋಜನೆ ಮಾಡಿದ ರಕ್ತದಾನ ಶಿಬಿರವನ್ನು ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ರಕ್ತದಾನ ಜೀವನದಾನ ಮಹಾಕುಂಭ 2026 ಎಂಬ ಧ್ಯೇಯವಾಕ್ಯದಡಿಯಲ್ಲಿ ರಕ್ತದಾನ ಶಿಬಿರವನ್ನು ನರೇಂದ್ರಚಾರ್ಯಜಿ ಮಹಾರಾಜ ಹೆಸರಿನಲ್ಲಿ ಲಕ್ಷಾಂತರ ಜನ ರಕ್ತದಾನಿ ಮಾಡಿ ಸಮಾಜಕ್ಕೆ ಬೆಲೆ ಕಟ್ಟಲಾರದ ಉಡುಗೊರೆ ಕೂಡುತ್ತಿದ್ದಾರೆ ಎಂದು ಹೇಳಿದರು.ಮಹಾದೇವ ಮಡಿವಾಳ ಮಾತನಾಡಿ, ಮತ್ತೊಂದು ಜೀವವನ್ನು ಉಳಿಸಲು ಕೇವಲ ರಕ್ತದಾನದಿಂದ ಮಾತ್ರ ಸಾಧ್ಯವಿದ್ದು,

> ನಮ್ಮ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಆಯೋಜನೆ ಮಾಡಿದ, ರಕ್ತದಾನ ಕಾರ್ಯಕ್ರಮದಲ್ಲಿ ನಮ್ಮ ನಿರೀಕ್ಷೆ ಮೀರಿ ರಕ್ತದಾನಿಗಳು ಮುಂದೆ ಬಂದು ರಕ್ತದಾನಿ ಮಾಡಿ ಮತ್ತೊಂದು ಜೀವ ಉಳಿಸಲು ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು."
>
> **ಶ್ರೀಮಂತ ಮಡಿವಾಳ,**
>
> **ವೈದ್ಯಧಿಕಾರಿಗಳು, ಸಮುದಾಯ ಆಸ್ಪತ್ರೆ**
>
> **ಕಮಲನಗರ**

ರಕ್ತ ತಪಾಸಣೆ ಮಾಡಿಸಿದ ಆರೋಗ್ಯವಂತ ಯುವಕರು, ತುರ್ತಾಗಿ ರಕ್ತದ ಅವಶ್ಯಕತೆಯಿರುವ ಸಂದರ್ಭದಲ್ಲಿ ರಕ್ತದಾನಕ್ಕೆ ಮುಂದಾಗಬೇಕು ಎಂದರು. ಗ್ರಾಮ ಪಂಚಾಯಿತಿ ಅಧ್ಯಕ್ಷರರಾದ ಸುಶೀಲಾ ಮಹೇಶ್ ಸಜ್ಜನ ದಂಪತಿಗಳು ನರೇಂದ್ರಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಕಾರ್ಯಕ್ರಮ ಮುಖ್ಯ ಅತಿಥಿ ಲಿಂಗಾನಂದ ಮಹಾಜನ ಮತ್ತು ಶ್ರೀರಂಗ ರಕ್ತದಾನ ಶಿಬಿರವನ್ನು ರಿಬ್ಬಿನ್ ಕಟ್ ಮಾಡುವುದರೊಂದಿಗೆ ಉದ್ಘಾಟನೆ ಮಾಡಿದರು. ರವಿವಾರ ನಡೆದ ರಕ್ತದಾನ

> **ದಾಖಲೆಯ ರಕ್ತ ಸಂಗ್ರಹ**
>
> ಕಳೆದ ವರ್ಷವು ಸಹ ಪೂಜ್ಯರ ಮಾರ್ಗದರ್ಶನದಲ್ಲಿ ಕೇವಲ 15 ದಿನಗಳಲ್ಲಿ ದಾಖಲೆಯ ಪ್ರಮಾಣದಲ್ಲಿ 136372 ಯುನಿಟ್ ಗಳ ರಕ್ತವು ದಾನಿಗಳಿಂದ ಸಂಗ್ರಹವಾಗಿದ್ದು ,ಅದು ಬಡವರಿಗೆ ಉಪಯೋಗಕ್ಕೆ ಬರಲಿ ಎನ್ನುವ ಕಾರಣದಿಂದ ಸರಕಾರಿ ಆಸ್ಪತ್ರೆಗಳಿಗೆ ನೀಡಲಾಗುವುದು.
>
> **ಧನರಾಜ ಬೋರಕರ,**
>
> **ಅಧ್ಯಕ್ಷರು ಔರಾದ (ಬಿ)**

ಶಿಬಿರದಲ್ಲಿ ಸುಮಾರು 65 ಕ್ಕೂ ಜನ ಸ್ವಯಂ ಪೇರಿತವಾಗಿ ರಕ್ತದಾನವನ್ನು ಮಾಡಿದರು. ಈ ಸಂದರ್ಭದಲ್ಲಿ ಬೀದರ ಜಿಲ್ಲೆಯ ಮೇಲ್ವಿಚಾರಕರಾದ ವಿಠಲ ಮೂಳೆ, ಜಿಲ್ಲಾ ಅಧ್ಯಕ್ಷರಾದ ಶ್ರೀಪಾದ ಕಪ್ಪಿಕೇರಿ, ಜಿಲ್ಲಾ ಸಚಿವರಾದ ಸಂಜೀವಕುಮಾರ ಟೆಕೊಳೆ,ಮಹಿಳಾ ಅಧ್ಯಕ್ಷರಾದ ಕೋಮಲ ಹಾವಗೊಂಡ,ಚಾಂಡೇಶ್ವರ ಸೇವಾ ಕೇಂದ್ರ ಅಧ್ಯಕ್ಷರಾದ ಮಲ್ಲಮ್ಮಾ,ವ್ಯವಸ್ಥಾಪಕರಾದ ರವಿಶಂಕರ ಪಟ್ನೆ,ರಕ್ತದಾನದ ಶಿಬಿರದ ಆಪರೇಟರಗಳಾಗಿ ಸೇವೆ ಸಲ್ಲಿಸಿದ ಆರತಿ ಜಾಧವ, ಐಶ್ವರ್ಯ ಕಾಳೆ,ಮಹಾದೇವ ಮಡಿವಾಳ,ಔರಾದ ತಾಲೂಕಿನ ಸೇವಕರಾದ ಬಾಬುರಾವ ಗೌಳಿ,ಸಂಗಪ್ಪಾ ಉಪ್ಪೆ,ಸಂಜು ಪವಾರ,ಪಿಂಟು ರಾಮಪೂರ, ಯುವ ಪತ್ರಕರ್ತ ಪರಮೇಶ ರಾಂಪುರೆ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಆರೋಗ್ಯವಂತರಾಗಿರಲು ಪೌಷ್ಟಿಕ ಆಹಾರ ಸೇವಿಸಿ : ಬಿರಾದಾರ



• **ಮಲ್ಲಮ್ಮ ನುಡಿ ವಾರ್ತೆ ಬೀದರ:**

ವಿದ್ಯಾರ್ಥಿಗಳಷ್ಟೆ ಅಲ್ಲ ನಾವು ನೀವು ಎಲ್ಲರೂ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ನಿಯಮಿತ ಯೋಗ ಧ್ಯಾನದ ಜೊತೆಗೆ ಪೌಷ್ಟಿಕ ಆಹಾರ ಸೇವಿಸುವುದು ಮುಖ್ಯ, ಸಾಧ್ಯವಾದಷ್ಟು ಮನೆಯಲ್ಲೆ ಮಾಡಿದ ಅಡುಗೆ, ಹಣ್ಣು, ತರಕಾರಿ ಸೇವಿಸಬೇಕು ಎಂದು ಸೂರ್ಯ ಫೌಂಡೇಶನ್ ರಾಷ್ಟ್ರೀಯ ಉಪಾಧ್ಯಕ್ಷ ಅನಂತ ಬಿರಾದಾರ ಹೇಳಿದರು.

ಬೀದರ ನಗರದ ದತ್ತಗಿರಿ ಮಹಾರಾಜ ಇಂಗ್ಲಿಷ್ ಮಾಧ್ಯಮದ ಶಾಲೆಯಲ್ಲಿ ಸೂರ್ಯ ಫೌಂಡೇಶನ್, ಇಂಟರ್ನ್ಯಾಷನಲ್ ನ್ಯಾಚುರೋಪತಿ ಆರ್ಗನೈಜೇಶನ್ ಹಾಗೂ ಪತಂಜಲಿ ಯೋಗ ಸಮಿತಿ ಜಿಲ್ಲಾ ಘಟಕದ ವತಿಯಿಂದ ಅನುಭವ ಮಂಟಪದ ಅದ್ಯಕ್ಷರು ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಾಗೂ ಸೂರ್ಯ ಫೌಂಡೇಶನ್ ಸಂಸ್ಥಾಪಕರಾದ ಪದ್ಮಶ್ರೀ ಜೈಪ್ರಕಾಶ ಅಗ್ರವಾಲ್ ಅವರ ಅಮೃತ ಮಹೋತ್ಸವ 75ನೇ ಜನುಮದಿನದ ಪ್ರಯುಕ್ತ ಜಿಲ್ಲೆಯಾದ್ಯಂತ 75 ಸ್ಥಳಗಳಲ್ಲಿ ಆರೋಗ್ಯ ಜನ–ಜಾಗರಣ ಅಭಿಯಾನ ಕಾರ್ಯಕ್ರಮ ಹಮ್ಮಿಕೊಂಡಿದ್ದು ಇದರ 50ನೇ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.ವಿದ್ಯಾರ್ಥಿಗಳು ದೈಹಿಕವಾಗಿ ಬೆಳೆಯುತ್ತಿರುವ ಹಂತದಲ್ಲಿದ್ದು, ಈ ಹಂತದಲ್ಲಿ ಬೀದಿ ಬದಿ ತಯಾರಿಸುವ ಜಂಕ್ಫುಡ್, ಕರಿದ ಮಸಾಲೆ ಪದಾರ್ಥಗಳ ಸೇವನೆ ತ್ಯಜಿಸಬೇಕು ಆರೋಗ್ಯ ಕೈ ಕೊಟ್ಟರೆ ಶಿಕ್ಷಣ, ಜ್ಞಾನ ಪಡೆಯಲು ಸಾಧ್ಯವಾಗುವುದಿಲ್ಲ. ಇದರಿಂದ ಭವಿಷ್ಯ ಮುಸುಕಾಗಲಿದೆ ದೈನಂದಿನವಾಗಿ ಯೋಗದ ಜೊತೆಗೆ ಪೌಷ್ಟಿಕ ಆಹಾರ ಸೇವಿಸಿ ಆರೋಗ್ಯದೊಂದಿಗೆ ಉತ್ತಮ ಬದುಕು ಬದುಕಬೇಕು ಈ ದಿಶೆಯಲ್ಲಿ ಸ್ವಾಮಿ ವಿವೇಕಾನಂದರ ವಿಚಾರಗಳನ್ನ ಆದರ್ಶವನ್ನಾಗಿಸಿಕೊಂಡು ಸೂರ್ಯ ಫೌಂಡೇಶನ್ ಕಳೆದ ನಾಲ್ಕು ದಶಕಗಳಿಂದ ದೇಶಾದ್ಯಂತ ಜನಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ ಎಂದರು.

ಇಂಟರ್ನ್ಯಾಷನಲ್ ನ್ಯಾಚುರೋಪತಿ ಆರ್ಗನೈಜೇಶನ್ ಜಿಲ್ಲಾದ್ಯಕ್ಷ ಗೋರಖನಾಥ ಕುಂಬಾರ ಮಾತನಾಡಿ ವಿದ್ಯಾರ್ಥಿಗಳು ಶಿಸ್ತು, ಸಂಯಮದಿಂದ ಜೀವನ ರೂಪಿಸಿಕೊಳ್ಳಬೇಕು ತಮ್ಮ ಅಧ್ಯಯನ ಜೊತೆಗೆ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಪ್ರತಿದಿನ ಯೋಗ, ಧ್ಯಾನವನ್ನ ಮಾಡಬೇಕು ಈ ನಿಟ್ಟಿನಲ್ಲಿ ಪೂಜ್ಯರ ಅಮೃತ ಮಹೋತ್ಸವದ ಅಂಗವಾಗಿ ಜಿಲ್ಲೆಯಾದ್ಯಂತ ಆರೋಗ್ಯ ಜನಜಾಗರಣ ಅಭಿಯಾನದ ಮೂಲಕ ಜನಜಾಗೃತಿ ಕಾರ್ಯಕ್ರಮಗಳನ್ನ ಹಮ್ಮಿಕೊಂಡಿದ್ದೆವೆ ಎಂದರು.

ಸೂರ್ಯ ಫೌಂಡೇಶನ್ ರಾಜ್ಯ ಸಂಯೋಜಕ ಗುರುನಾಥ ರಾಜಗೀರಾ ಮಾತನಾಡಿ ಸಮಾಜದ ಏಳಿಗೆಗಾಗಿ ತಮ್ಮ ಬದುಕನ್ನೆ ಮುಡಿಪಾಗಿಟ್ಟ ನಾಡೋಜ

ಡಾ.ಬಸವಲಿಂಗ ಪಟ್ಟದ್ದೇವರ ಹಾಗೂ ಪದ್ಮಶ್ರೀ ಜೈಪ್ರಕಾಶ ಅಗ್ರವಾಲ ಅವರ ಕೊಡುಗೆ ಅಪಾರವಾದದ್ದು ಇವರಿಬ್ಬರ ಅಮೃತ ಮಹೋತ್ಸವದ ನಿಮಿತ್ತ ಜಿಲ್ಲೆಯಾದ್ಯಂತ ಜನಜಾಗೃತಿ ಕಾರ್ಯಕ್ರಮಗಳ ಮೂಲಕ ಇವರ ಸೇವೆಯನ್ನು ಮಕ್ಕಳಿಗೆ ತಿಳಿಸುತ್ತಾ ವಿವಿಧ ಕಾರ್ಯಕ್ರಮಗಳ ಮೂಲಕ ಗೌರವಿಸುವ ಕೆಲಸ ಮಾಡುತ್ತಿದ್ದೆವೆ ಎಂದರು.ಈ ಸಂದರ್ಭದಲ್ಲಿ ಐ.ಎನ್.ಓ ರಾಜ್ಯ ಕಾರ್ಯದರ್ಶಿ ಯೋಗೇ–ಂದ್ರ ಯದಲಾಪುರೆ, ಶಾಲೆಯ ಮುಖ್ಯಗುರುಗಳಾದ

ರೂಪಾ ಜೋಶಿ, ಉಪ ಪ್ರಾಂಶುಪಾಲರಾದ ಸಂಜಿವಕುಮಾರ ನೇಳಗೆ, ರಾಜಕುಮಾರ ನೆಮತಬಾದೆ, ಆನಂದರೆಡ್ಡಿ ಸೇರಿದಂತೆ ಇತರರಿದ್ದರು.

# ಸಂಗಮೇಶ್ವರ ದೇವರ ಪಾದಯಾತ್ರೆ ಭಕ್ತರಿಗೆ ಸ್ವಾಗತ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ನೆರೆಯ ತೆಲಂಗಾಣ ರಾಜ್ಯದ ಝರಾ ಸಂಗಮ ಸಂಗಮೇಶ್ವರ ದೇವರ ದರುಶನಕ್ಕೆ ಕೈಗೊಂಡ ಭಕ್ತರ ಪಾದಯಾತ್ರೆಗೆ ಸ್ವಾಗತ ಕೋರಲಾಯಿತು. ತಾಲೂಕಿನ ಕೋನಮೇಳಕುಂದಾ ಗ್ರಾಮದಲ್ಲಿ ನೆರೆಯ ಮಹಾರಾಷ್ಟ್ರ ರಾಜ್ಯದ ನೀಲಂಗಾ ಸೇರಿ ಮುಂತಾದ ಕಡೆಗಳಿಂದ ಆಗಮಿಸಿದ್ದ ನೂರಾರು ಭಕ್ತರನ್ನು ಗ್ರಾಮದ ಮುಖಂಡ ಮಲ್ಲಿಕಾರ್ಜುನ ತುಗಶೆಟ್ಟೆ ಪರಿವಾರದ ಸದಸ್ಯರು ಆರತಿ ಬೆಳಗಿ, ಪಾದಪೂಜೆ ನೆರವೇರಿಸಿ ಬರಮಾಡಿಕೊಂಡರು.

ನಂತರ ಭಕ್ತರು ಚಕ್ರಿ ಭಜನೆ, ಹಾಡುಗಳನ್ನು ಹಾಡಿ ಎಲ್ಲರ ಗಮನ ಸೆಳೆದರು. ಮಲ್ಲಿಕಾರ್ಜುನ ತುಗಶೆಟ್ಟೆ ಅವರು ಆಗಮಿಸಿದ್ದ ಭಕ್ತರಿಗೆ ಪ್ರಸಾದ, ವಸತಿ ವ್ಯವಸ್ಥೆ ಕೈಗೊಂಡಿದ್ದರು.ನೀಲಂಗಾದಿಂದ ಕಳೆದ ಎರಡು ದಿನಗಳಿಂದ ಪಾದಯಾತ್ರೆ ಕೈಗೊಂಡಿದ್ದ ಭಕ್ತರು ಸೋಮವಾರ ಝರಾ ಸಂಗಮಕ್ಕೆ ತಲುಪಿ ಸಂಗಮೇಶ್ವರ ದೇವರ ದರುಶನ ಪಡೆಯಲಿದ್ದಾರೆ.

# ಬಸವಣ್ಣನವರ ಹೆಸರಿನ ಉದ್ಯಾನ ನಿರ್ಮಾಣ ಸಂತಸದ ಸಂಗತಿ: ಪಟ್ಟದ್ದೇವರು



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಬಸವಣ್ಣನವರ ಹೆಸರಿನಲ್ಲಿ ಬೆಂಗಳೂರಿನ ಯಲಹಂಕದಲ್ಲಿ ಉದ್ಯಾನ ನಿರ್ಮಾಣ ಮಾಡಲು ಸಚಿವ ಸಂಪುಟ ಸಭೆ ಅನುಮೋದನೆ ನೀಡಿರುವುದು ಸಂತಸ ತರಿಸಿದೆ ಎಂದು ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ತಿಳಿಸಿದ್ದಾರೆ.ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಪತ್ರ ಬರೆದಿರುವ ಅವರು, ವಿಶ್ವಗುರು ಬಸವಣ್ಣನವರ ತತ್ವಾದರ್ಶಗಳನ್ನು ಜನಮಾನಸದಲ್ಲಿ ಅಚ್ಚಳಿಯದೇ ಇರಲು, ಬೆಂಗಳೂರು ಮಹಾನಗರದಲ್ಲಿ ಅರಣ್ಯ ಇಲಾಖೆಯಿಂದ 153 ಎಕರೆ ಪ್ರದೇಶದಲ್ಲಿ ವಿಶ್ವಗುರು ಬಸವಣ್ಣ ಜೀವವೈವಿಧ್ಯ ಉದ್ಯಾನ ಯೋಜನೆಗೆ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಿ ಬೆಂಗಳೂರು ಮಹಾನಗರದಲ್ಲಿ ಅತ್ಯಗತ್ಯವಾದ ಶ್ವಾಸತಾಣ ಹಾಗೂ ಮನೋಲ್ಲಾಸ ಕೇಂದ್ರವಾಗಿ ಈ ಉದ್ಯಾನವನ್ನು ಅಭಿವೃದ್ಧಿಪಡಿಸಲು ರೂ.50 ಕೋಟಿ ಅನುದಾನ ಮಂಜೂರು ಮಾಡಿರುವುದು ನಮಗೆ ಅತ್ಯಂತ ಸಂತೋಷ ತಂದಿದೆ. ಒಂದೂವರೆ ಶತಮಾನಗಳ ಬಳಿಕ ಬೆಂಗಳೂರಿನಲ್ಲಿ ಮತ್ತೊಂದು ಬೃಹತ್ ಉದ್ಯಾನವನ ನಿರ್ಮಾಣವಾಗುತ್ತಿರುವುದು ಹೆಮ್ಮೆಯ ವಿಷಯ.ತಮ್ಮ ಸರಕಾರದ ವತಿಯಿಂದ ಅನೇಕ ಬಸವಪರ ಕಾರ್ಯಗಳು ನಿರಂತರ ನಡೆಯುತ್ತಿವೆ. ತಮಗೆ ಮತ್ತು ಎಲ್ಲ ಸಚಿವರಿಗೆ ಹಾಗೂ ಮಾನ್ಯ ಮುಖ್ಯಮಂತ್ರಿಗಳಿಗೆ ಅಂಗಾಯತ ಮಠಾಧಿಪತಿಗಳ ಒಕ್ಕೂಟ ವತಿಯಿಂದ ಹೃತ್ಪೂರ್ವಕ ಅಭಿನಂದನೆಗಳು ಸಲ್ಲಿಸುವುದಾಗಿ ಅಭಿನಂದನಾ ಪತ್ರದಲ್ಲಿ ತಿಳಿಸಿದ್ದಾರೆ.

**ಸನ್ಮಾನ :** ಅರಣ್ಯ ಇಲಾಖೆಗೆ ಸೇರಿದ 153 ಎಕರೆ ಪ್ರದೇಶದಲ್ಲಿ ವಿಶ್ವಗುರು ಬಸವಣ್ಣ ಜೀವವೈವಿಧ್ಯ ಉದ್ಯಾನ ನಿರ್ಮಿಸಲು ನಿರಂತರ ಪರಿಶ್ರಮ ವಹಿಸಿದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸನ್ಮಾನಿಸಿ, ಅಭಿನಂದಿಸಿದರು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ ಕೋಸಂಬೆ ಇದ್ದರು.

# ಯುವ ಶಕ್ತಿ ದೇಶದ ಅಮೂಲ್ಯ ಆಸ್ತಿ : ಅನಂತ ಬಿರಾದಾರ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಯುವಶಕ್ತಿ ದೇಶದ ಅಮೂಲ್ಯ ಆಸ್ತಿ, ಆ ಶಕ್ತಿಯನ್ನು ಸುಮ್ಮನೆ ಹರಿದು ಹೋಗಲು ಬಿಡಬಾರದು ಯುವಕರು, ಜೀವನದಲ್ಲಿ ಶಿಸ್ತನ್ನು ಅಳವಡಿಸಿಕೊಂಡಾಗ ಮಾತ್ರ ಗುರಿ ತಲುಪಲು ಸಾಧ್ಯವಾಗುತ್ತದೆ ಎಂದು ಸೂರ್ಯ ಫೌಂಡೇಶನ್ ರಾಷ್ಟ್ರೀಯ ಉಪಾಧ್ಯಕ್ಷ ಅನಂತ ಬಿರಾದಾರ ಹೇಳಿದರು. ಭಾಲ್ಕಿ ತಾಲ್ಲೂಕಿನ ಸರಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಮಾಜಿ ಪ್ರಧಾನಿ ಅಟಲ ಬಿಹಾರಿ ವಾಜಪೇಯಿ ಹಾಗೂ ಸ್ವಾಮಿ ವಿವೇಕಾನಂದರ ಜಯಂತಿ ಅಂಗವಾಗಿ ಸೂರ್ಯ ಫೌಂಡೇಶನ್ ವತಿಯಿಂದ ಹಮ್ಮಿಕೊಂಡ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ಹಾಗೂ ಪ್ರಶಸ್ತಿ ಪತ್ರ ವಿತರಿಸಿ ಅವರು ಮಾತನಾಡಿದರು.

ಯುವಕರು ಈ ಸಮಾಜದಲ್ಲಿ ಬದಲಾವಣೆ ತರುವಂತಾಗಬೇಕು ಆಗಲೆ ಅವರ ಜೀವನ ಸಾಕಾರಗೊಂಡಂತಾಗುತ್ತದೆ, ಹಾದಿ ತಪ್ಪುವ ಈ ಹದಿ ಹರೆಯದಲ್ಲಿ ಧೈರ್ಯ, ಶಿಸ್ತು, ಆತ್ಮವಿಶ್ವಾಸ, ಸ್ವಾಭಿಮಾನ, ನಾಯಕತ್ವ ಗುಣಗಳನ್ನು ಅಳವಡಿಸಿಕೊಂಡು ಶಿಕ್ಷಣದ ಜೊತೆಗೆ ಕ್ರೀಡೆ ಹಾಗೂ ರಚನಾತ್ಮಕ ಚಟುವಟಿಕೆಗಳ ಮೂಲಕ ಸಾಮಾಜಿಕ ಸೇವೆಯಲ್ಲಿ ತೊಡಗಿದರೆ ರಾಷ್ಟ್ರವನ್ನು ರಕ್ಷಿಸುವ ಸತ್ಪಜೆಗಳಾಗುವುದರಲ್ಲಿ ಸಂದೇಹವಿಲ್ಲ ಎಂದು ತಿಳಿಸಿದರು. ಧನ್ನೂರಾ ಪೋಲಿಸ್ ಠಾಣೆಯ ಇನ್ಸಪೇಕ್ಟರ್ ರವಿ ಹಾಲವರ ಮಾತನಾಡಿ ಸಮಾಜದಲ್ಲಿ ಉತ್ತಮ ಬದುಕು ನಡೆಸಿ ಇತರರಿಗೆ ಮಾದರಿಯಾಗಬೇಕು ಜೊತಗೆ ತಮಗಿಷ್ಟವಾದ ಕ್ರೀಡೆಯನ್ನು ಸರಿಯಾದ ಕ್ರಮದಲ್ಲಿ ಅಭ್ಯಾಸ ಮಾಡಿದರೆ ಉತ್ತಮ ಭವಿಷ್ಯವಿದೆ ಎಂದರು. ಕೆಎಫ್ ಮಾಜಿ ನಿರ್ದೇಶಕರಾದ ಶ್ರೀಕಾಂತ ದಾನಿ ಮಾತನಾಡಿ ಯುವಕರು ಅಧ್ಯಯನದ ಜೊತೆಗೆ ಕ್ರೀಡಾಭ್ಯಸದಲ್ಲಿ ತೊಡಗಿಸಿಕೊಂಡಲ್ಲಿ ಭವಿಷ್ಯದ ದಿನಗಳಲ್ಲಿ ಉತ್ತಮ ಅವಕಾಶವಿದ್ದು ಮೊಬೈಲ್ ಬಳಕೆ



ಆದಷ್ಟು ಕಡಿಮೆ ಮಾಡಬೇಕು ಎಂದರು.ಸೂರ್ಯ ಫೌಂಡೇಶನ್ ರಾಜ್ಯ ಸಂಯೋಜಕ ಗುರುನಾಥ ರಾಜಗೀರಾ ಮಾತನಾಡಿ ಕ್ರೀಡಾ ಸಾಧನೆಗೆ ನಿರಂತರ ಪ್ರಯತ್ನ ಕಠಿಣ ಪರಿಶ್ರಮ ಅಗತ್ಯವಿದೆ ಯುವ ಜನತೆ ಆರೋಗ್ಯವಂತರಾಗಿದ್ದರೆ ನಮ್ಮ ದೇಶವು ಸುಭದ್ರವಾಗಿರುತ್ತದೆ

ಈ ದಿಶೆಯಲ್ಲಿ ಸೂರ್ಯ ಫೌಂಡೇಶನ್ ಸಂಸ್ಥಾಪಕರಾದ ಪದ್ಮಶ್ರೀ ಜಯಪ್ರಕಾಶ್ ಅಗ್ರವಾಲ್ ಅವರ ದೂರದೃಷ್ಟಿಯಲ್ಲಿ ದೇಶಾದ್ಯಂತ ಹಾಗೂ ಫೌಂಡೇಶನ್ ರಾಷ್ಟ್ರೀಯ ಉಪಾಧ್ಯಕ್ಷರಾದ ಅನಂತ ಬಿರಾದಾರ ಅವರ ಮಾರ್ಗದರ್ಶನದಲ್ಲಿ ಬೀದರ ಜಿಲ್ಲೆಯಲ್ಲಿ ಶೈಕ್ಷಣಿಕ, ಕ್ರೀಡೆ ಮತ್ತು ಸಾಮಾಜಿಕ ಚಟುವಟಿಕೆಗಳು ನಿರಂತರವಾಗಿ ನಡೆಯುತ್ತಲಿವೆ ಎಂದು ತಿಳಿಸಿದರು.ಶಾಲೆಯ ಮುಖ್ಯಗುರುಗಳಾದ ಅರುಣಾಬಾಯಿ ಬಿರಾದಾರ ಮಾತನಾಡಿ ಗ್ರಾಮೀಣ ಭಾಗದಲ್ಲಿ ಮಕ್ಕಳ ಬೆಳವಣಿಗೆಗೆ ಸೂರ್ಯ ಫೌಂಡೇಶನ್ ಅವರು ಸಲ್ಲಿಸುತ್ತಿರುವ ಸೇವೆ ಶ್ಲಾಘನೀಯವಾದದ್ದು ಎಂದರು.ಶೈಕ್ಷಣಿಕ ಕ್ಷೇತ್ರದಲ್ಲಿ ಕ್ರಾಂತಿಗೈದ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನದ ಪ್ರಯುಕ್ತ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಬಳಿಕ ಕಬ್ಬಡ್ಡಿ, ವಾಲಿವಾಲ್, ರನ್ನಿಂಗ್, ಹಗ್ಗ ಜಗ್ಗಾಟ, ಪ್ರಬಂಧ, ರಂಗೋಲಿ ಸ್ಪರ್ದೆಗಳಲ್ಲಿ ಭಾಗವಹಿಸಿದ ಧನ್ನುರಾ, ಬಸವನಗರ, ದಾದೋಡಿ ತಾಂಡಾ ಸೇರಿದಂತೆ ಇತರೆ ಗ್ರಾಮಗಳ ಕ್ರೀಡಾಪಟುಗಳಲ್ಲಿ ಪ್ರಥಮ, ದ್ವಿತೀಯವಾಗಿ ವೀಜೆತರಿಗೆ ಬಹುಮಾನದ ಜೊತೆಗೆ ಪದಕ ಹಾಗೂ ಪ್ರಶಸ್ತಿಗಳನ್ನು ವಿತರಿಸಲಾಯಿತು.ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಸಂತೋಷಿ ರಮೇಶ,ಐ.ಎನ್.ಓ ಜಿಲ್ಲಾಧ್ಯಕ್ಷರಾದ ಗೋರಖನಾಥ ಕುಂಬಾರ, ರಾಜ್ಯ ಕಾರ್ಯದರ್ಶಿ ಯೋಗೆಂದ್ರ ಯದಲಾಪುರೆ, ಪ್ರಧಾನ ಕಾರ್ಯದರ್ಶಿ ಸಂತೋಷ ಪಾಟೀಲ, ಸಂಚಾಲಕಿ ಡಾ.ಮಂಜುಳಾ ಮುಚಳಂಬೆ ಪ್ರಮುಖರಾದ ಸಿದ್ದು ಕಾಡೊದೆ, ರಮೇಶ ಅರಾಳೆ, ಸಂಗಮೇಶ ದಾನಿ, ಆಕಾಶ ಪಟ್ನೆ ಸೇರಿದಂತೆ ಇತರರಿದ್ದರು.

# ಶ್ರೀಗಳಿಗೆ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಬರುವ ಏಪ್ರಿಲ್ 20,21 ಹಾಗೂ 22 ರಂದು ನಡೆಯಲಿರುವ ಅನುಭವ ಮಂಟಪದ ಅಧ್ಯಕ್ಷರಾದ ಪರಮ ಪೂಜ್ಯ ಶ್ರೀ ನಾಡೋಜ ಡಾ ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭಕ್ಕೆ ಆಗಮಿಸುವಂತೆ ಆದಿಚುಂಚನಗಿರಿ ಮಠದ ಪೂಜ್ಯ ಶ್ರೀ ಡಾ ನಿರ್ಮಲಾನಂದನಾಥ ಮಹಾಸ್ವಾಮಿಗಳಿಗೆ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ಆಹ್ವಾನ ನೀಡಿದರು. ಈ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಶಶಿಧರ ಕೋಸಂಬೆ ಇದ್ದರು.



# ಫಲಿತಾಂಶಕ್ಕೆ ಕಠಿಣ ಪರಿಶ್ರಮದ ಅಗತ್ಯ: ಖಂಡ್ರೆ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**

ಜಿಲ್ಲೆಯ ಎಸ್ಎಸ್ಎಲ್‌ಸಿ ,ಪಿಯುಸಿ ಫಲಿತಾಂಶ ವೃದ್ಧಿಸಲು ವಿದ್ಯಾರ್ಥಿಗಳು ಏಕಾಗ್ರತೆಯಿಂದ ಕಠಿಣ ಪರಿಶ್ರಮದ ಮೂಲಕ ಅಧ್ಯಯನ ಮಾಡುವುದು ಅಗತ್ಯ ಎಂದು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಾಕೀತು ಮಾಡಿದರು.

ಪಟ್ಟಣದ ಶಿವಾಜಿ ಪದವಿ ಪೂರ್ವ ಕಾಲೇಜಿಗೆ ಸಚಿವ ಈಶ್ವರ ಖಂಡ್ರೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ,ಫಲಿತಾಂಶ ಹೆಚ್ಚಿಸಲು ಟಿಪ್ಸಗಳನ್ನು ತಿಳಿಸಿ ಸಲಹೆ ನೀಡಿದರು.

ಪೈಪೋಟಿ ಯುಗದಲ್ಲಿ ಗರಿಷ್ಠ ಅಂಕಗಳೊಂದಿಗೆ ಉತ್ತೀರ್ಣರಾದರೆ ಮಾತ್ರ ವಿದ್ಯಾರ್ಥಿಗಳು ಜೀವನದಲ್ಲಿ ಉಜ್ವಲ ಭವಿಷ್ಯ ಕಾಣಬಹುದು .ಮಕ್ಕಳು ದುಶ್ಚಟ,ದುರ್ಗುಣಗಳಿಂದ ದೂರ ಉಳಿದು ಸಚ್ಚಾರಿತ್ರ್ಯವಂತ ಜೀವನ ಸಾಗಿಸಲು ಅಣಿಯಾಗಬೇಕು.

ಆಯಾ ವಿಷಯದ ಉಪನ್ಯಾಸಕರು ನಿಗದಿತ ಅವಧಿಯಲ್ಲಿ ಪಠ್ಯಕ್ರಮ ಮುಗಿಸಿ,ಮಕ್ಕಳಲ್ಲಿನ ಪರೀಕ್ಷೆಯ ಭಯ ಓಡಿಸಬೇಕು ಎಂದು ಹೇಳಿ,ಮಕ್ಕಳಿಗೆ ನೀವು ಭವಿಷ್ಯದಲ್ಲಿ ಏನಾಗಬೇಕು ಎಂದು ಭಾವಿಸಿದ್ದೀರಿ ಎಂದು ಪ್ರಶ್ನೆ ಕೇಳಿದಾಗ ,

ನಾವು ನಿಮ್ಮ ಹಾಗೆ ಅಭಿವೃದ್ಧಿ ಚಿಂತಕ ಮಂತ್ರಿ,ಕೆಲವರು ಐಎಎಸ್,ಐಪಿಎಸ್ ಅಧಿಕಾರಿ ಆಗಬೇಕು ಎಂಬ ಆಸೆಯಿದೆ ಎಂದು ಉತ್ತರಿಸಿದರು.ಈ ಸಂದರ್ಭದಲ್ಲಿ .

ಸಂಸ್ಥೆ ಅಧ್ಯಕ್ಷ ಅನೀಲ ಶಿಂದೆ,ಕಾರ್ಯದರ್ಶಿ ಡಾ.ಪ್ರಕಾಶ ಪಾಟೀಲ್,ವಿಶ್ರಾಂತ ಪ್ರಾಂಶುಪಾಲ ಚಂದ್ರಕಾಂತ ಬಿರಾದಾರ ಸೇರಿದಂತೆ ಅನೇಕರಿದ್ದರು.

# ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವದ ಸಭೆ: ಪ್ರಕಾಶ ಕುದರೆ



• ಮಲ್ಲಮ್ಮ ನುಡಿ ವಾರ್ತೆಹುಮನಾಬಾದ್,

ಇಲ್ಲಿನ ಐತಿಹಾಸಿಕ ದೇವಸ್ಥಾನವಾದ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವವು ಅತಿ ವಿಜ್ರಂಭಣೆಯಿಂದ ಆಚರಿಸುವ ನಿಮಿತ್ಯ ಸೋಮವಾರ ದೇವಸ್ಥಾನದ ಬಳಿ ಇರುವ ಶ್ರೀ ದಿ. ಬಸವರಾಜ ಎಚ್. ಪಾಟೀಲ ರವರ ಕಲ್ಯಾಣ ಮಂಟಪದಲ್ಲಿ ಸಂಜೆ 7:30 ಕ್ಕೆ ಸಭೆ ಆಯೋಜಿಸಲಾಗಿದೆ ಎಂದು ದೇವಸ್ಥಾನದ ಕಾರ್ಯನಿರ್ವಾಕ ಅಧಿಕಾರಿಗಳು ಹಾಗೂ ಸಹಾಯಕ ಆಯುಕ್ತರು ಆದ ಪ್ರಕಾಶ ಕುದರೆ ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆದ್ದರಿಂದ ಜಾತ್ರಾ ಮಹೋತ್ಸವ ಯಶಸ್ವಿಗೆ, ಗಣ್ಯ ವ್ಯಕ್ತಿಗಳು, ಜನಪ್ರತಿನಿಧಿಗಳು, ಸಂಘ ಸಂಸ್ಥೆಯವರು. ಅಗಮಿಸಿ ಸಲಹೆ ಸೂಚನೆ ಗಳನ್ನು ನೀಡಬೇಕೆಂದು ಮನವಿ ಮಾಡಿದ್ದಾರೆ. ಈ ಸಭೆಯು ಜಾತ್ರೆಗೆ ಮಾತ್ರ ಸಿಮಿತವಾಗಿದ್ದು, ಜಾತ್ರೆಗೆ ಸಂಬಂಧಿಸಿದ ವಿಷಯಗಳು ಮಾತ್ರ ಚರ್ಚೆಗೆ ಅವಕಾಶ ಇರುತ್ತದೆ ಎಂದು ಪ್ರಕಾಶ ಕುದರೆ ರವರು ತಿಳಿಸಿದ್ದಾರೆ



ಕಾರ್ಮಿಕ ಸಚಿವ ಸಂತೋಷಲಾಡ ಅವರಿಗೆ ಪಟ್ಟಣದ ಡಿಎಸ್ ಹೂಲಗೇರಿ ನಿವಾಸದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಮುದಗಲ್ ಬ್ಲಾಕ್ ಅಧ್ಯಕ್ಷ ಶಿವಶಂಕರಗೌಡ, ಪರಮೇಶ್ ಕನ್ನಾಪುರ್ ಹಟ್ಟಿ, ಮಂಜುನಾಥ್ ಬನ್ನಿ ಗೋಳ್ಕರ್, ಬಸವರಾಜ್ ಜಲ್ಲಿ, ಮಹಾಂತೇಶ್ ಭೋವಿ, ಮೌನೇಶ ಶಿವನಗುತ್ತಿ, ರಮೇಶ ಕನ್ನಾಪುರ ಹಟ್ಟಿ ಸೇರಿದಂತೆ ಇತರರಿದ್ದರು.

# ಭಾಗ್ಯನಗರ ಪಪಂ ಅಧ್ಯಕ್ಷ ರಮೇಶ ಹ್ಯಾಟಿ ಪದಗ್ರಹಣ



• ಮಲ್ಲಮ್ಮ ನುಡಿವಾರ್ತೆಕೊಪ್ಪಳ:

ಇಲ್ಲಿನ ಭಾಗ್ಯನಗರ ಪಟ್ಟಣ ಪಂಚಾಯತಿಯ ಮೊದಲಾರ್ಧದ ಎರಡನೇ ಅವಧಿಗೆ ಪಟ್ಟಣ ಪಂಚಾಯತಿ ಅಧ್ಯಕ್ಷರಾಗಿ ರಮೇಶ ಲಕ್ಷ್ಮಪ್ಪ ಹ್ಯಾಟಿ ಅಧಿಕಾರ ಸ್ವೀಕರಿಸಿದರು. ಪಟ್ಟಣ ಪಂಚಾಯತಿಯ ತಮ್ಮ ಅಧಿಕೃತ ಕೊಠಡಿಯಲ್ಲಿ ಸರಳವಾಗಿ ಪೂಜೆ ನೆರವೇರಿಸಿದ ನಂತರ ಹಿರಿಯರ ಸಮ್ಮುಖದಲ್ಲಿ ಅಧಿಕಾರವಹಿಸಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರ ನೇತೃತ್ವದಲ್ಲಿ ಸನ್ಮಾನ ಮಾಡಿ, ಕೊಪ್ಪಳದ ಶ್ರೀ ಗವಿಮಠದ ಜಾತ್ರೆಯೂ ಸೇರಿದಂತೆ ವಿವಿಧ ಕಾರ್ಯಗಳನ್ನು ಅಚ್ಚುಕಟ್ಟಾಗಿ ಮಾಡುವ ಮೂಲಕ ಜನರಿಗೆ ಹತ್ತಿರವಾಗಿ ಕೆಲಸ ಮಾಡುವಂತೆ ಮತ್ತು ಜಾತ್ರೆಯ ನಂತರ ಭಾಗ್ಯನಗರದ ಪ್ರಮುಖ ಸಮಸ್ಯೆಗಳಿಗೆ ಪರಿಹಾರ ನೀಡುವಂತೆ ಮನವಿ ಮಾಡಿದರು. ಜನರಿಗೆ ಮೂಲಭೂತ ಸಮಸ್ಯೆಗಳಾದ ಚರಂಡಿ ಸ್ವಚ್ಛತೆ, ಬೀದಿ ದೀಪ, ಸಾರ್ವಜನಿಕ ಶೌಚಾಲಯ, ರಸ್ತೆ ಸ್ವಚ್ಛತೆ, ಬೀದಿ ನಾಯಿ ಹಾಗೂ ಧನಕರುಗಳ ಸಮಸ್ಯೆ ಹಾಗೂ ಫಾರಂ 3 ಸಮಸ್ಯೆಗಳಿಗೆ ಮುಕ್ತಿ ಕೊಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಪ.ಪಂ. ಉಪಾಧ್ಯಕ್ಷ ಹೊನ್ನೂರಸಾಬ ಭೈರಾಪೂರ, ಸದಸ್ಯೆ ಸವಿತಾ ಗೋರಂಟ್ಲಿ, ನಗರಾಭಿವೃದ್ಧಿ ಪ್ರಾಧಿಕರದ ಅಧ್ಯಕ್ಷ ಶ್ರೀನಿವಾಸ ಗುಪ್ತಾ, ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಾ ಇಟ್ಟಂಗಿ, ನಿಕಟಪೂರ್ವ ಅಧ್ಯಕ್ಷ ತುಕಾರಾಮಪ್ಪ ಗಡಾದ, ಮುಖ್ಯಾಧಿಕಾರಿ ಸುರೇಶ ಬಬಲಾದ ಅನೇಕರು ಇದ್ದರು.



ಭಾಲ್ಕಿ ತಾಲ್ಲೂಕಿನ ಹಲಬರ್ಗಾ ಗ್ರಾಮದ ಸಿದ್ದರಾಮೇಶ್ವರ ಜಾತ್ರೆಯ ವಾಲ್ ಪೋಸ್ಟರ್ ಗಳನ್ನು ರಾಚೋಟೇಶ್ವರ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ಬಿಡುಗಡೆಗೊಳಿಸಿದರು. ವಿವಿಧಸಂಘಟನೆಗಳ ಪ್ರಮುಖರಾದ ಸತೀಶ ಮಡಿವಾಳ, ಜಯರಾಜ ಕೊಳ್ಳಾ, ಸಂಗಮೇಶ ಭೂರೆ, ಚಂದು ಸಂಪಂಗೆ, ದಯಾನಂದ ಸಜ್ಜನ್, ಸಂತೋಷ ನಾಟೇಕರ್, ಅಮರ ಮಡಿವಾಳ, ಆನಂದ ಕುಪ್ಪೆ, ವೀರೇಶ ಮಡಿವಾಳ, ಶಿವಕುಮಾರ ಗುಮ್ತಾ, ರಾಜೇಂದ್ರ ಪಾಟೀಲ ಇದ್ದರು

# ದಿ. ಪುನೀತ್ ರಾಜ್‌ಕುಮಾರ್ ಅಭಿನಯದ 'ಆಕಾಶ್' ಚಿತ್ರ ಮತ್ತೆ ತೆರೆಗೆ

ಸ್ಯಾಂಡಲ್‌ವುಡ್‌ನ 'ಪವರ್ ಸ್ಟಾರ್' ದಿವಂಗತ ಪುನೀತ್ ರಾಜ್‌ಕುಮಾರ್ ಅಭಿನಯದ ಆಕಾಶ್ ಚಿತ್ರದ ಮತ್ತೆ ಬಿಡುಗಡೆಯಾಗಲಿದೆ. ಮಾರ್ಚ್ 17ರಂದು ಪುನೀತ್ ಅವರ ಹುಟ್ಟುಹಬ್ಬದ ಪ್ರಯುಕ್ತ 'ಆಕಾಶ್' ಚಿತ್ರ ಮಾರ್ಚ್ 13ರಂದು ಮರು ಬಿಡುಗಡೆಯಾಗುತ್ತಿದೆ.




ಸ್ಯಾಂಡಲ್‌ವುಡ್‌ನ 'ಪವರ್ ಸ್ಟಾರ್' ದಿವಂಗತ ಪುನೀತ್ ರಾಜ್‌ಕುಮಾರ್ ಅಭಿನಯದ ಆಕಾಶ್ ಚಿತ್ರದ ಮತ್ತೆ ಬಿಡುಗಡೆಯಾಗಲಿದೆ. ಮಾರ್ಚ್ 17ರಂದು ಪುನೀತ್ ಅವರ ಹುಟ್ಟು ಹಬ್ಬದ ಪ್ರಯುಕ್ತ 'ಆಕಾಶ್' ಚಿತ್ರ ಮಾರ್ಚ್ 13ರಂದು ಮರು ಬಿಡುಗಡೆಯಾಗುತ್ತಿದೆ. ನೀನೆ ನೀನೆ ನನಗೆಲ್ಲಾ ನೀನೆ... ಮಾತು ನೀನೆ ಮನಸೆಲ್ಲಾ ನೀನೆ ಎಂದು ಅಡಿಬರಹ ಬರೆದು 'ಆಕಾಶ್' ಚಿತ್ರದ ಪೋಸ್ಟರ್ ಹಂಚಿಕೊಂಡಿರುವ ಪುನೀತ್ ಪತ್ನಿ ಅಶ್ವಿನಿ ಅವರು, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಚಿತ್ರದ ಬಿಡುಗಡೆ ಕುರಿತಂತೆ ಮಾಹಿತಿ ನೀಡಿದ್ದಾರೆ.

# ಡೀಮ್ಡ್ ಅರಣ್ಯದ ಪ್ರಮಾಣ ಪತ್ರದಲ್ಲೂ ದೋಷ

• ಮಲ್ಲಮ್ಮ ನುಡಿ ವಾರ್ತೆ

ಚಿಕ್ಕಬಳ್ಳಾಪುರ:

ಸುಪ್ರೀಂಕೋರ್ಟ್‌ಗೆ 2022ರಲ್ಲಿ ಸಲ್ಲಿಸಿರುವ ಡೀಮ್ಡ್ ಅರಣ್ಯದ ಪ್ರಮಾಣ ಪತ್ರದಲ್ಲಿಯೂ ಸಾಕಷ್ಟು ಲೋಪದೋಷವಿದ್ದು, ಇದನ್ನು ಪರಿಹರಿಸಲು ನಡೆಸಲಾಗುತ್ತಿರುವ ಜಂಟಿ ಸಮೀಕ್ಷೆ ಶೇ.70ರಷ್ಟು ಪೂರ್ಣಗೊಂಡಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರದ ಉಪ ಅರಣ್ಯ ಸಂರಕ್ಷಣಾಧಿಕಾರಿಯವರ ಕಚೇರಿಯಲ್ಲಿ ಪ್ರಗತಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಿ ಕಟ್ಟಡ, ಪಟ್ಟಾಭೂಮಿಯೂ ಈ ಪಟ್ಟಿಯಲ್ಲಿ ಸೇರಿದ್ದು, ಅರಣ್ಯ ಹಾಗೂ ಕಂದಾಯ ಅಧಿಕಾರಿಗಳು ಜಂಟಿ ಸರ್ವೆಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ ವರದಿ ಸಲ್ಲಿಸಲು ಸೂಚಿಸಲಾಗಿದೆ.

ಸುಪ್ರೀಂಕೋರ್ಟ್ ಈ ಲೋಪ ದೋಷ ಪರಿಹರಿಸಲು ಅವಕಾಶ ನೀಡಿದ್ದು, ರಾಜ್ಯಮಟ್ಟದಲ್ಲಿ, ಜಿಲ್ಲಾಮಟ್ಟದಲ್ಲಿ ಹಾಗೂ ವಿಭಾಗೀಯ ಮಟ್ಟದಲ್ಲಿ ಸಮಿತಿಗಳನ್ನು ರಚಿಸಿ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಾಗುತ್ತಿದೆ ಎಂದರು.

ಸೆಕ್ಷನ್ 4 ಶೀಘ್ರ ಇತ್ಯರ್ಥ, ಒತ್ತುವರಿ ತೆರವಿಗೆ ಸೂಚನೆ: ಸೆಕ್ಷನ್ 4 ಆಗಿರುವ ಭೂಮಿಯಲ್ಲಿನ ಸಮಸ್ಯೆಯನ್ನೂ ಬೇಗ ಬಗೆಹರಿಸಿ, ಸೆಕ್ಷನ್ 17 ಮಾಡಲು ಕ್ರಮ ವಹಿಸುವಂತೆಯೂ ಸೂಚಿಸಲಾಗಿದೆ. ಅದೇ ರೀತಿ 2015ರ ನಂತರ ಆಗಿರುವ ಅರಣ್ಯ ಒತ್ತುವರಿ ಮತ್ತು 2015ರ ಪೂರ್ವದಲ್ಲಿ ಪಟ್ಟಾ ಜಮೀನು ಸೇರಿ 3 ಎಕರೆಗಿಂತ ಹೆಚ್ಚಿನ ಅರಣ್ಯ ಭೂಮಿ ಒತ್ತುವರಿ ಆಗಿದ್ದಲ್ಲಿ ಅದ್ಯತೆಯ ಮೇಲೆ ತೆರವು ಮಾಡಲು ಸೂಚಿಸಲಾಗಿದೆ. ಚಿಕ್ಕಬಳ್ಳಾಪುರದ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹದ್ದಾರಿ, ಜಿಲ್ಲಾ ಮುಖ್ಯರಸ್ತೆ, ಗ್ರಾಮೀಣ ರಸ್ತೆ ಸೇರಿ ಅಂದಾಜು 4 ಸಾವಿರ ಕಿ.ಲೋ ಮೀಟರ್ ರಸ್ತೆ ಇದ್ದು ರಸ್ತೆಯ ಎರಡೂ ಬದಿ ಎತ್ತರದ ಸಸಿಗಳನ್ನು ನೆಟ್ಟು ಪೋಷಿಸಿ ಹಸಿರುಹೊದಿಕೆ ಹೆಚ್ಚಿಸಲು ನಿರ್ದೇಶನ ನೀಡಲಾಗಿದೆ ಎಂದು ಹೇಳಿದರು.

# ಆರದ ಬ್ಯಾನರ್ ಬೆಂಕಿ

## ಪ್ರಕರಣ ದಿನಕ್ಕೊಂದು ತಿರುವು, ಫೈರಿಂಗ್ ವಿಚಾರವೇ ಬಿಜೆಪಿಗೆ ಅಸ್ತ್ರ, ಆಡಳಿತರೂಢ ಕಾಂಗ್ರೆಸ್ಗೆ ತಲೆನೋವು

• ಮಲ್ಲಮ್ಮ ನುಡಿವಾರ್ತೆ, ಬಳ್ಳಾರಿ

ಇಲ್ಲಿ ನಡೆದಿದ್ದ ಬ್ಯಾನರ್ ಕಟ್ಟುವ ವಿಷಯವೇ ಬಿಜೆಪಿಗೆ ಅಸ್ತ್ರವಾಗಿ ಪರಿಣಮಿಸಿದೆ. ಇದೇ ವಿಚಾರಕ್ಕೆ ಎಸ್ಪಿ ತಲೆದಂಡವಾಗಿದ್ದನ್ನು ಕಮಲದ ನಾಯಕರು ಪದೇ ಪದೆ ಕಿಡಿ ಕಾರುತ್ತಿದ್ದಾರೆ.ಏತನ್ಮಧ್ಯೆ, ಶಾಸಕರಾದ ಗಾಲಿ ಜನಾರ್ಧನ ರೆಡ್ಡಿ ಮತ್ತು ಭರತ್ ರೆಡ್ಡಿ ಬೆಂಬಲಿಗರ ಗಲಾಟೆ ಹಾಗೂ ಫೈರಿಂಗ್ ಪ್ರಕರಣದಲ್ಲಿ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ಸಾವು ಪ್ರಕರಣ ಬಗ್ಗೆ ಬಳ್ಳಾರಿ ಬ್ರೂಸ್ ಪೇಟೆ ಠಾಣೆ ಪೊಲೀಸರು ಭರತ್ ರೆಡ್ಡಿ ಆಪ್ತ ಸತೀಶ್ ರೆಡ್ಡಿಯ ಮೂವರು ಖಾಸಗಿ ಗನ್ ಮ್ಯಾನ್ ಗಳನ್ನು ಬಂಧಿಸಿದ್ದಾರೆ. ಪಂಜಾಬ್ ಮೂಲದವರಾದ ಬಲ್ಜಿತ್ ಸಿಂಗ್, ಮಹೇಂದ್ರ ಸಿಂಗ್ ಹಾಗೂ ಗುರುಚರಣ ಸಿಂಗ್ ಬಂಧಿತ ಗನ್ ಮ್ಯಾನ್‌ಗಳು.ಜನವರಿ 1ರಂದು ಬಳ್ಳಾರಿಯಲ್ಲಿ ನಡೆದಿದ್ದ ಗಲಾಟೆ ವೇಳೆ ಈ ಮೂವರು ಗನ್ ಮ್ಯಾನ್ ಗಳು ಗಾಳಿಯಲ್ಲಿ ಫೈರಿಂಗ್ ಮಾಡಿದ್ದರು. ಮೂವರು ಗನ್ಮ್ಯಾನ್ಗಳು ಸೇರಿ ಒಟ್ಟು 26 ಜನರನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸಿದ್ದಾರೆ. ಇನ್ನು ಇದೇ ಪ್ರಕರಣ ಸಂಬಂಧ 10 ಬಿಜೆಪಿ ಕಾರ್ಯಕರ್ತರನ್ನೂ ಬಂಧಿಸಲಾಗಿದೆ. ಬಂಧಿತ ಗನ್ ಮ್ಯಾನ್ ಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರನ್ನು ಬ್ರೂಸ್ ಪೇಟೆ ಠಾಣೆಯಲ್ಲಿ ವಿಚಾರಣೆ ನಡೆಸಲಾಗುತ್ತಿದೆ.



### ಪ್ರಕರಣ ಸಿಐಡಿಗೆ ಚಿಂತನೆ: ಪರಂ

ಬಳ್ಳಾರಿಯಲ್ಲಿ ನಡೆದ ಹಿಂಸಾತ್ಮಕ ಘರ್ಷಣೆಯಲ್ಲಿ ಒಬ್ಬ ವ್ಯಕ್ತಿ ಸಾವಿಗೀಡಾದ ಪ್ರಕರಣದ ತನಿಖೆಯನ್ನು ಸಿಐಡಿಗೆ ಹಸ್ತಾಂತರಿಸಲು ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ಗೃಹ ಸಚಿವ ಜಿ ಪರಮೇಶ್ವರ ತಿಳಿಸಿದ್ದಾರೆ.ಜನವರಿ 1 ರಂದು ವಾಲ್ಮೀಕಿ ಪ್ರತಿಮೆ ಅನಾವರಣ ಕಾರ್ಯಕ್ರಮಕ್ಕಾಗಿ ಬಿಜೆಪಿ ಶಾಸಕ ಜಿ ಜನಾರ್ದನ ರೆಡ್ಡಿ ಅವರ ನಿವಾಸದ ಬಳಿ ಬ್ಯಾನರ್ ಅಳವಡಿಸುವ ವಿಚಾರವಾಗಿ ನಡೆದ ಗಲಾಟೆಯು ವಿಕೋಪಕ್ಕೆ ತಿರುಗಿ ಘರ್ಷಣೆ ಭುಗಿಲೆದ್ದಿದ್ದನ್ನು ಸ್ಮರಿಸಿಕೊಳ್ಳಬಹುದು.

### ಹೈ ನ್ಯಾಯಾಧೀಶರಿಂದ ತನಿಖೆಗೆ ಆಗ್ರಹ

ಬಳ್ಳಾರಿ: ಮಾಜಿ ಸಚಿವ ಜನಾರ್ದನ ರೆಡ್ಡಿಯವರ ನಿವಾಸ ಮುಂದೆ ಜ. 1ರಂದು ರಾತ್ರಿ ನಡೆದಿದ್ದ ಗುಂಡಿನ ದಾಳಿ ಹಾಗೂ ಕಾಂಗ್ರೆಸ್ನ ಕಾರ್ಯಕರ್ತ ಸಾವನ್ನಪ್ಪಿದ ಪ್ರಕರಣ ಕುರಿತು ಹಾಲಿ ಹೈ ಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕು ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.ನ್ಯಾಯಾಧೀಶರಿಂದ ತನಿಖೆ ಮಾಡಿಸದೇ ಇದ್ದರೆ ಸಿಬಿಐಗೆ ನೀಡಿ, ಇಲ್ಲದಿದ್ದರೆ ಬಳ್ಳಾರಿಯಿಂದಲೇ ಅಧಿಕಾರಕ್ಕೆ ಬಂದ ನಿಮಗೆ ನಿಮ್ಮ ಆಡಳಿತಕ್ಕೆ ಕೆಟ್ಟ ಹೆಸರು ಬರಲಿದೆ ಎಂದು ಕಾಂಗ್ರೆಸ್ಗೆ ಎಚ್ಚರಿಸಿದ್ದಾರೆ.

### ದ್ವೇಷ ಭಾಷಣ ಕಾಯ್ದೆಯಡಿ ಕೇಸ್: ಆಗ್ರಹ

ಬಳ್ಳಾರಿಯಲ್ಲಿ ಭರತ್ ರೆಡ್ಡಿಯವರು ಮಾಡಿರುವುದು ದ್ವೇಷ ಭಾಷಣವಲ್ಲವೇ? ಜನಾರ್ದನ ರೆಡ್ಡಿ ಅವರ ಮನೆಯನ್ನು ನೆಲಸಮ ಮಾಡಿ ಮುಗಿಸುತ್ತೇನೆ ಎಂದು ಭರತ್ ರೆಡ್ಡಿ ಬೆದರಿಕೆ ಹಾಕಿದ್ದಾರೆ. ಇದು ಪ್ರಚೋದನಕಾರಿ ಭಾಷಣವಲ್ಲದಿದ್ದರೆ ಇನ್ನೇನು ಎಂದು ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಪ್ರಶ್ನಿಸಿದ್ದಾರೆ. ಜನಾರ್ದನ ರೆಡ್ಡಿ ಮನೆಯನ್ನು ನೆಲಸಮ ಮಾಡಿ ಮುಗಿಸುತ್ತೇನೆ ಎಂದು ಭರತ್ ಬೆದರಿಕೆ ಹಾಕಿದ್ದು, ಇದು ಪ್ರಚೋದನಕಾರಿ ಭಾಷಣವಲ್ಲ? ಎಂದು ಪ್ರಶ್ನಿಸಿದ್ದಾರೆ.

### ಝಡ್ ಶ್ರೇಣಿ ಭದ್ರತಗಾಗಿ ಒತ್ತಾಯ

ಬೆಂಗಳೂರು: ಬಳ್ಳಾರಿಯಲ್ಲಿ ತಮ್ಮ ಮೇಲೆ 'ಪೂರ್ವ ಯೋಜಿತ ಹತ್ಯೆ ಯತ್ನ' ನಡೆದಿದೆ ಎಂದು ಆರೋಪಿಸಿರುವ ಬಿಜೆಪಿ ಶಾಸಕ ಜಿ ಜನಾರ್ದನ ರೆಡ್ಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪ್ರತ್ಯೇಕ ಪತ್ರಗಳನ್ನು ಬರೆದಿದ್ದು, ತಮಗೆ ತಕ್ಷಣವೇ ಝಡ್ ಶ್ರೇಣಿಯ ಭದ್ರತೆ ನೀಡಬೇಕೆಂದು ಒತ್ತಾಯಿಸಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ' ಎಂದು ದೂರಿದ್ದಾರೆ.

# ರಾಮದಾಸ್ ರಾಜಕೀಯದಿಂದ ನಿವೃತ್ತಿ

ಮೈಸೂರು: ಬಿಜೆಪಿ ನಾಯಕ, ಮಾಜಿ ಸಚಿವ ಎಸ್.ಎ.ರಾಮದಾಸ್ ಅವರು ಚುನಾವಣಾ ರಾಜಕೀಯದಿಂದ ನಿವೃತ್ತಿ ಘೋಷಿಸಿದ್ದಾರೆ. ಜ. 4ರಂದು ಮೈಸೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, "ಸಕ್ರಿಯ ರಾಜಕೀಯದಲ್ಲಿ ಮುಂದುವರೆಯುವಂತೆ ಎಲ್ಲರೂ ಕೇಳುತ್ತಿದ್ದಾರೆ. ಆದರೆ, ನನಗೆ ಚುನಾವಣಾ ರಾಜಕಾರಣ ಸಾಕು ಎನಿಸಿದೆ" ಎಂದು ತಿಳಿಸಿದರು.

ಇದೇ ವೇಳೆ, ಬಿಜೆಪಿಯ ನಾಯಕತ್ವ, ಹೈಕಮಾಂಡಿಗೆ ತಾಕುವಂತೆ ಎರಡು ನುಡಿಗಳನ್ನಾಡುವ ಮೂಲಕ ತಮ್ಮಲ್ಲಿನ ಅಸಮಾಧಾನವನ್ನು ಹೇಳಿಕೊಳ್ಳುವ ಪ್ರಯತ್ನವನ್ನು ಮಾಡಿದ್ದಾರೆ ರಾಮದಾಸ್.

ಕಳೆದ ಚುನಾವಣೆಯಲ್ಲಿ ತಮಗೆ ಟಿಕೆಟ್ ಸಿಗದೆ ಹೋದ ಸಂದರ್ಭವನ್ನು ಅವರು, ರಾಮಾಯಣದ ರಾಮನ ಕಥೆಗೆ ಹೋಲಿಸಿ, "ಈ ಹಿಂದೆ ರಾಮನಿಗೆ ಪಟ್ಟಾಭಿಷೇಕ ಆಗಬೇಕಿತ್ತು. ಆದರೆ ದಶರಥನ ಮೂಲಕ ರಾಮನನ್ನು ಕಾಡಿಗೆ ಕಳುಹಿಸಬೇಕಾಯಿತು. ಶ್ರೀರಾಮನೇ ಮರು ಮಾತನಾಡದೆ ಕಾಡಿಗೆ ಹೋದ. ಇನ್ನು ನಾನು ರಾಮದಾಸ, ನಾನೇನು ಮಾಡಲಿ?" ಎಂದು ಹೇಳುವ ಮೂಲಕ ತಮ್ಮ ಪರೋಕ್ಷವಾಗಿ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದರು.

# ಬಸ್ ನಿಲ್ಲಿಸದೇ ಇದ್ದಿಕ್ಕೆ ಪ್ರಯಾಣಿಕರ ಅಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ:

ತಾಲ್ಲೂಕಿನ ಬಸವಕಲ್ಯಾಣನಿಂದ ಬರುವ ಹುಮನಾಬಾದ್ ಘಟಕದ ಬಸ್ ಸಂಖ್ಯೆ ಕೆಎ 38 ಎಫ್ 0704 ಈ ಸಂಖ್ಯೆಯ ಬಸ್ ನ ಚಾಲಕ ಮತ್ತು ಕಂಡಕ್ಟರ್ ಇವರು ಬಸ್ ನಿಲ್ಲಿಸದೇ ಇದ್ದಿದಕ್ಕೆ ಪ್ರಯಾಣಿಕರು ಅಕ್ರೋಶಿಸಿದ್ದಾರೆ. ಇವರ ಮೇಲೆ ಸೂಕ್ತ ಕಾನೂನು ಕ್ರಮ ಮತ್ತು ಸೇವೆಯಿಂದ ವಜಾ ಗೊಳಿಸಬೇಕೆಂದು ಆಶ್ರಯ ದೀಪ ಚಾರಿಟೇಬಲ್ ಅಧ್ಯಕ್ಷ ಬಸ್ ಡಿಪೊ ವ್ಯವಸ್ಥಾಪಕರಿಗೆ ಮನವಿ ಪತ್ರದಲ್ಲಿ ಆಗ್ರಹಿಸಿದ್ದಾರೆ.



ಮೊಳಕೇರಾ ಗ್ರಾಮದಲ್ಲಿ ಬಸ್ ನಿಲ್ಲಿಸದ ಕಾರಣಕ್ಕಾಗಿ ಗ್ರಾಮಸ್ಥರು ಚಾಲಕ ಮತ್ತು ಕಂಡಕ್ಟರ್ ಅವರನ್ನು ಗ್ರಾಮಸ್ಥರು ಪ್ರಶ್ನೆ ಮಾಡಿದಕ್ಕೆ, ಕಂಡಕ್ಟರ್ ಅವರು ಪ್ರಯಾಣಿಕರನ್ನು ರೇಗಿಸಿದಲ್ಲದೆ ಅವಾಚ್ಯಶಬ್ದಗಳಿಂದ ನಿಂದಿಸಿದ್ದಾರೆ. ಈ ಸಮಸ್ಯೆ ಕುರಿತು ಬಸ್ ನಿಲ್ದಾಣಕ್ಕೆ ಹೋಗಿ ಸಹಾಯಕರನ್ನು ಕೇಳಲು ಹೋದಾಗ ಸಹಾಯಕರು ಕೂಡ ನೀವೇನು ಮಾಡ್ಕೊಳ್ತೀರಿ ಮಾಡ್ಕೊಳ್ಳಿ ಹೋಗಿ ಅಂತ ಆಕ್ರೋಶದಿಂದ ಹೇಳುತ್ತಿದ್ದಾರೆ. ಇವರ ಮೇಲೆ ಕಠಿಣ ಕಾನೂನು ಕ್ರಮ ಕೈಗೊಂಡು ಸೇವೆಯಿಂದ ತಕ್ಷಣ ವಜಾ ಗೊಳಿಸಬೇಕು. ಒಂದು ವೇಳೆ ಇವರ ಮೇಲೆ ಕ್ರಮ ಕೈಗೊಳ್ಳದಿದ್ದರೆ ಆಶ್ರಯ ದೀಪ ಚಾರಿಟೇಬಲ್ ಟ್ರಸ್ಟ್ ರಿ ಹುಮನಾಬಾದ್ ವತಿಯಿಂದ ಹುಮನಾಬಾದ್ ಬಸ್ ನಿಲ್ದಾಣದಲ್ಲಿ ಹೋರಾಟ ಕೈಗೊಳ್ಳಬೇಕಾಗುತ್ತದೆ ಎಂದು ಆಶ್ರಯ ಟ್ರಸ್ಟ್ ಅಧ್ಯಕ್ಷ ಭೀಮರೆಡ್ಡಿ ಸಿಂಧನಕೇರಾ ಆಗ್ರಹಿಸಿದ್ದಾರೆ. ಈ ಸಂದರ್ಭದಲ್ಲಿ ಆಶ್ರಯ ಟ್ರಸ್ಟ್ ಉಪಾಧ್ಯಕ್ಷ ಅರವಿಂದ ಜೋಗಿರೆ, ಬೀದರ ಪಂಚ ಗ್ಯಾರಂಟಿ ಉಪಾಧ್ಯಕ್ಷ ಉದಯ್ ಕುಮಾರ್ ವಾರದ್, ಆಶ್ರಯ ದೀಪ ಟ್ರಸ್ಟ್ ಸದಸ್ಯರಾದ ಯುವರಾಜ್ ಎಸ್ ಐಹೊಳ್ಳಿ, ಸಾಮಾಜಿಕ ಕಾರ್ಯಕರ್ತ ಅನಿಲ್ ದೊಡ್ಡಿ ಇದ್ದರು.

# ಉಭಯ ಮಠಗಳ ಶ್ರೀಗಳು ಒಡಂಬಡಿಕೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:

ಮಾಧ್ವಪರಂಪರೆಯ ಎರಡು ಪ್ರಮುಖ ಮಠಗಳಾದ ಉತ್ತರಾದಿ ಮಠ ಮತ್ತು ಶ್ರೀ ರಾಘವೇಂದ್ರ ಸ್ವಾಮಿ ಮಠಗಳ ನಡುವೆ ಹಲವು ದಶಕಗಳಿಂದ ನಡೆದುಕೊಂಡು ಬಂದಿದ್ದ ವಿವಾದಗಳು ಮತ್ತು ವ್ಯಾಜ್ಯಗಳನ್ನು ಸೌಹಾರ್ದಯುತ ಮಾತುಕತೆ ಮೂಲಕ ಬಗೆಹರಿಸಿಕೊಳ್ಳಲು ಉಭಯ ಮಠಗಳು ಒಪ್ಪಿಕೊಂಡಿವೆ. ಇದರೊಂದಿಗೆ ಕೊಪ್ಪಳ ಜಿಲ್ಲೆಯ ಆನೆಗೊಂದಿಯ ನವವೃಂದಾವನ ಗಡ್ಡೆಯಲ್ಲಿನ ಪೂಜಾ ವಿವಾದಕ್ಕೂ ತೆರೆ ಬಿದ್ದಿದೆ. ಶನಿವಾರ ಬೆಂಗಳೂರಿನಲ್ಲಿ ನಡೆದ ಸೌಹಾರ್ದ ಸಮಾಗಮದಲ್ಲಿ ಉಭಯ ಮಠಗಳ ಶ್ರೀಗಳು ಒಡಂಬಡಿಕೆ ಪತ್ರಕ್ಕೆ ಸಹಿ ಹಾಕಿದರು.

ಉತ್ತರಾದಿ ಮಠದ ಶ್ರೀ ಸತ್ಯಾತ್ಮತೀರ್ಥ ಸ್ವಾಮೀಜಿ ಮತ್ತು ಶ್ರೀ ರಾಘವೇಂದ್ರ ಸ್ವಾಮಿ ಮಠದ ಶ್ರೀ ಸುಬುಧೇಂದ್ರತೀರ್ಥ ಸ್ವಾಮೀಜಿ ಅವರು ಬೆಂಗಳೂರಿನಲ್ಲಿ ಭೇಟಿಯಾಗಿ, ಪರಸ್ಪರ ಭಿನ್ನಾಭಿಪ್ರಾಯಗಳಿಗೆ ಅಂತ್ಯ ಹಾಡಿ, ಸೌಹಾರ್ದಯುತವಾಗಿ ಮುಂದುವರೆಯುವ ನಿರ್ಧಾರಕ್ಕೆ ಬಂದರು. ಈ ಒಡಂಬಡಿಕೆಯ ನಂತರ, ಎರಡೂ ಮಠಗಳಲ್ಲಿ ಸಮಾವೇಶಗಳನ್ನು ನಡೆಸಿ, ಭಕ್ತರಿಗೆ ಸ್ನೇಹ ಮತ್ತು ಸೌಹಾರ್ದದಿಂದ ಬಾಳುವಂತೆ ಕರೆ ನೀಡಿದರು. ಸನಾತನ ಧರ್ಮವನ್ನು ಉಳಿಸಲು ಎಲ್ಲ ಮಠಗಳು ಒಂದಾಗಬೇಕು ಮತ್ತು ಹಿಂದೂ ಸಮಾಜದ ಸಂಘಟನೆಯೇ ನಮ್ಮ ಮೂಲಮಂತ್ರವಾಗಬೇಕು ಎಂದು ಶ್ರೀಗಳು ಹೇಳಿದರು. ಈ ನಿಟ್ಟಿನಲ್ಲಿ, ಎಲ್ಲ ವ್ಯಾಜ್ಯಗಳನ್ನು ಬದಿಗೊತ್ತಿ, ವಿವಾದಗಳಿಗೆ ತೆರೆ ಎಳೆಯಲಾಗಿದೆ

# ಅಬ್ಯಾಕಸ್ ಸ್ಪರ್ಧೆ:ಕು. ನಿಹಾರಿಕ ಚಾಂಪಿಯನ್

ಮಲ್ಮನ ನುಡಿ ವಾರ್ತೆ ಮಸ್ಕಿ :

ಪಟ್ಟಣದ ಜೀನಿಯಸ್ ಎಜುಕೇಷನ್ ಸೆಂಟರ್, ಮಸ್ಕಿ ವತಿಯಿಂದ *2025ರ ನ್ಯಾಷನಲ್ ಲೆವೆಬ್ಯಾಕಸ್ ಮತ್ತು ಸ್ಟೇಟ್ ಲೆವೆಲ್ ಅಬ್ಯಾಕಸ್ ಸ್ಪರ್ಧೆಯಲ್ಲಿ ಭಾಗವಹಿಸಿ ,ಚಾಂಪಿಯನ್ ಸ್ಥಾನವನ್ನು ಸಂಸ್ಥೆಯ ವಿದ್ಯಾರ್ಥಿನಿಯಾದ ಕುಮಾರಿ ನಿಹಾರಿಕ ತಂದೆ ಸೋಮಶೇಖರ್, ಮಸ್ಕಿ ಇವರು ಚಾಂಪಿಯನ್ನಾಗಿ ವಿಜೇತಳಾಗಿ ಸಂಸ್ಥೆಗೆ ಕೀರ್ತಿಯನ್ನು ತಂದಿರುತ್ತಾಳೆ ಎಂದು ವೀರಯ್ಯ ಸ್ವಾಮಿ ಮೂಲಿಮಠ ಅವರು ಸಂತೋಷ ವ್ಯಕ್ತಪಡಿಸಿದರು.

ಸಂಸ್ಥೆಯ ಪರವಾಗಿ ಧನ್ಯವಾದಗಳನ್ನು ತಿಳಿಸುತ್ತಾ ಉಳಿದ ವಿಜೇತ ಮಕ್ಕಳಿಗೆ ಪ್ರಶಸ್ತಿ ಪ್ರಧಾನ ಹಾಗೂ ಪ್ರಮಾಣಪತ್ರ ವಿತರಣೆಯನ್ನು ಸಂಸ್ಥೆಯ ಅಧ್ಯಕ್ಷ ಶ್ರೀ ವೀರಯ್ಯ ಸ್ವಾಮಿ ಮೂಲಿಮಠ ಹಾಗೂ ಸಂಸ್ಥೆಯ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯನಿರ್ವಾಹರಾದ ಶ್ರೀಮತಿ ಶ್ರೀದೇವಿ ಮೂಲಿಮಠ ಇವರು ನೆರವೇರಿಸಿದರು. ಸಂಸ್ಥೆಯ ಸಹಶಿಕ್ಷರಾದ ಬಸವರಾಜ ಶೆಟ್ಟರ್, ಸಹಶಿಕ್ಷಕಿಯರಾದ ಕುಮಾರಿ ಅಂತರ ರಾಯ್ಕರ್ & ಕುಮಾರಿ ಶ್ರೀದೇವಿ ಗೋನ್ವಾರ್ ಇವರು ಹಾಗೂ ಪಾಲಕರು ಉಪಸ್ಥಿತರಿದ್ದರು.




# ಕರ್ನಾಟಕದಲ್ಲಿ 1,464 ಕೋಟಿ ರೂಪಾಯಿಗಳ ನಕಲಿ ಬಿಲ್ಲಿಂಗ್ ಜಾಲ ಪತ್ತೆ: ನಾಲ್ವರ ಬಂಧನ

ಕರ್ನಾಟಕ ಮತ್ತು ತಮಿಳುನಾಡಿನಲ್ಲಿ ದೊಡ್ಡ ತೆರಿಗೆ ವಂಚನೆ ಜಾಲವನ್ನು ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು ಪತ್ತೆಹಚ್ಚಿದ್ದಾರೆ. ನಕಲಿ ದಾಖಲೆಗಳನ್ನು ಬಳಸಿ ಜಿಎಸ್‌ಟಿ ನೋಂದಣಿ ಪಡೆದು, ನಕಲಿ ಇನ್‌ವಾಯ್ಸ್‌ಗಳ ಮೂಲಕ ತೆರಿಗೆ ವಂಚನೆ ಎಸಗಲಾಗಿದೆ. ಬೆಂಗಳೂರು, ಚೆನ್ನೈ ಸೇರಿದಂತೆ ಹಲವೆಡೆ ದಾಳಿ ನಡೆಸಿ ಮಹತ್ವದ ಸಾಕ್ಷ್ಯಗಳನ್ನು ವಶಪಡಿಸಿಕೊಳ್ಳಲಾಗಿದೆ. ನಾಲ್ವರು ಪ್ರಮುಖ ಸೂತ್ರಧಾರಿಗಳನ್ನು ಬಂಧಿಸಲಾಗಿದೆ. ತನಿಖೆ ಮುಂದುವರಿದಿದೆ.

• **ವಂಚನೆಯ ವಿಧಾನ ಬಯಲಾಗಿದ್ದು ಹೇಗೆ?**

ತನಿಖೆಯ ವರದಿಯ ಪ್ರಕಾರ, ಆರೋಪಿಗಳು ಅತ್ಯಂತ ವ್ಯವಸ್ಥಿತವಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಈ ಬೃಹತ್ ವಂಚನೆ ಎಸಗಿದ್ದಾರೆ. ಆನ್‌ಲೈನ್‌ನಲ್ಲಿ ಖರೀದಿಸಿದ ಸ್ಟಾಂಪ್ ಪೇಪರ್‌ಗಳು, ನಕಲಿ ಬಾಡಿಗೆ ಒಪ್ಪಂದಗಳು, ಜಮೀನು ಮಾಲೀಕರು ಮತ್ತು ಬಾಡಿಗೆದಾರರ ಖೋಟಾ ಸಹಿ ಹಾಗೂ ನಕಲಿ ನೋಟರಿ ದೃಢೀಕರಣಗಳನ್ನು ಬಳಸಿ ಕಾನೂನುಬಾಹಿರವಾಗಿ ಜಿಎಸ್‌ಟಿ ನೋಂದಣಿಗಳನ್ನು ಪಡೆಯಲಾಗಿತ್ತು. ಈ ರೀತಿ ಸೃಷ್ಟಿಸಿದ ಶೆಲ್ ಕಂಪನಿಗಳ ಮೂಲಕ ನಕಲಿ ಇನ್‌ವಾಯ್ಸ್‌ಗಳನ್ನು ಸಿದ್ಧಪಡಿಸಿ, ಯಾವುದೇ ಸರಕು ಅಥವಾ ಹಣದ ನೈಜ ಚಲನೆಯಿಲ್ಲದೆ ಕೇವಲ

• **ಹೈಲೈಟ್ಸ್:**
• **ಕರ್ನಾಟಕ ಮತ್ತು ತಮಿಳುನಾಡಿನಲ್ಲಿ ಹರಡಿದ್ದ 1,464 ಕೋಟಿ ರೂ. ಮೌಲ್ಯದ ಅಂತರರಾಜ್ಯ ನಕಲಿ ಜಿಎಸ್‌ಟಿ ಬಿಲ್ಲಿಂಗ್ ದಂದೆ ಬೆಳಕಿಗೆ**
• **ಶೆಲ್ ಕಂಪನಿಗಳ ಮೂಲಕ ನಕಲಿ ಇನ್‌ವಾಯ್ಸ್ ಸೃಷ್ಟಿಸಿ 355 ಕೋಟಿ ರೂ. ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಅಕ್ರಮವಾಗಿ ಪಡೆದಿರುವ ಆರೋಪ**
• **ಸುಧಾರಿತ ಜಿಎಸ್‌ಟಿ ಅನಾಲಿಟಿಕ್ಸ್ ಮತ್ತು NGTP ಮಾಡ್ಯೂಲ್ ಬಳಸಿ ಬೆಂಗಳೂರು, ಚೆನ್ನೈ ಸೇರಿದಂತೆ ಹಲವೆಡೆ ಏಕಕಾಲದಲ್ಲಿ ತೆರಿಗೆ ಇಲಾಖೆ ದಾಳಿ**

'ಆವರ್ತನದ ವಹಿವಾಟು' ತೋರಿಸಿ ಕೋಟ್ಯಂತರ ರೂಪಾಯಿಗಳ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಅನ್ನು ಅಕ್ರಮವಾಗಿ ಪಡೆಯಲಾಗುತ್ತಿತ್ತು. ವಂಚನೆಯ ಮೂಲಕ ಗರಿಷ್ಠ ತೆರಿಗೆ ಲಾಭ ಪಡೆದ ನಂತರ, ಆಡಿಟ್ ತನಿಖೆ ಮತ್ತು ಅಧಿಕಾರಿಗಳ ಕಣ್ಣಿಗೆ ಸಿಗದಂತೆ ತಪ್ಪಿಸಿಕೊಳ್ಳಲು ಈ ಕಂಪನಿಗಳ ಜಿಎಸ್‌ಟಿ ನೋಂದಣಿಯನ್ನು ತಾವಾಗಿಯೇ ರದ್ದುಗೊಳಿಸಿ ದಾಖಲೆಗಳನ್ನು ಮರೆಮಾಚುತ್ತಿದ್ದರು.

• **ಕಾರ್ಯಾಚರಣೆ ನಡೆಸಿದ್ದು ಹೇಗೆ?**

ವಾಣಿಜ್ಯ ತೆರಿಗೆ ಇಲಾಖೆಯ ಅಧಿಕಾರಿಗಳು ಬೆಂಗಳೂರು, ಚೆನ್ನೈ, ವೆಲ್ಲೂರು ಮತ್ತು ಪೆರ್ನಾಂಪಟ್ಟು ಸೇರಿದಂತೆ ವಿವಿಧ ಆಯಕಟ್ಟಿನ ಸ್ಥಳಗಳಲ್ಲಿ ಏಕಕಾಲದಲ್ಲಿ ಭರ್ಜರಿ ದಾಳಿ ನಡೆಸಿದ್ದು,

ಈ ಜಾಲಕ್ಕೆ ಸಂಬಂಧಿಸಿದ ಮಹತ್ವದ ಸಾಕ್ಷ್ಯಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಕಾರ್ಯಾಚರಣೆಯ ಸಮಯದಲ್ಲಿ 24 ಮೊಬೈಲ್ ಫೋನ್‌ಗಳು, 51 ಸಿಮ್ ಕಾರ್ಡ್‌ಗಳು, ಎರಡು ಪೆನ್ ಡ್ರೈವ್‌ಗಳು, ಹಲವಾರು ಬ್ಯಾಂಕ್ ಸ್ಟೇಟ್‌ಮೆಂಟ್‌ಗಳು ಮತ್ತು ಹತ್ತಾರು ನಕಲಿ ಕಂಪನಿಗಳ ಅಧಿಕೃತ ಸೀಲುಗಳನ್ನು ಜಪ್ತಿ ಮಾಡಲಾಗಿದೆ. ವಶಪಡಿಸಿಕೊಂಡ ಈ ತಾಂತ್ರಿಕ ಉಪಕರಣಗಳು ಮತ್ತು ದಾಖಲೆಗಳು ಈ ವ್ಯವಸ್ಥಿತ ವಂಚನೆಯ ಜಾಲ ಹಾಗೂ ಹಣ ವರ್ಗಾವಣೆಯ ಹಾದಿಯನ್ನು ಪತ್ತೆಹಚ್ಚಲು ಪ್ರಮುಖ ಆಧಾರವಾಗಲಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಸಾವಿತ್ರಿಬಾಯಿ ಫುಲೆ ಜಯಂತಿ ಆಚರಣೆ



ವರದಿ: ಡಿ.ಕೆ ದೇವಿಂದ್ರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

ನಗರದ ಡಿ ದೇವರಾಜ ಅರಸ್ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ (ಕನ್ನಡ ಮಾಧ್ಯಮ) ಯಾದಗಿರಿಯಲ್ಲಿಂದು ಭಾರತದಲ್ಲಿ ಅಕ್ಷರ ಕ್ರಾಂತಿ ಆರಂಭಿಸಿ ಶಿಕ್ಷಣ ಮಾತೆ ಎಂಬ ಕೀರ್ತಿಗೆ ಪಾತ್ರರಾದ, ಸಮನ್ವಯತೆ ಸಹಬಾಳ್ವೆಯ ಹರಿಕಾರಿಣಿ, ಭಾರತದ ಮೊದಲ ಮಹಿಳಾ ಶಿಕ್ಷಕಿ, ಅಕ್ಷರದವ್ವ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನವನ್ನು ನಮ್ಮ ಶಾಲೆಯಲ್ಲಿ ಆಚರಿಸಲಾಯಿತು. ಸಾವಿತ್ರಿಬಾಯಿ ಫುಲೆ ಅವರ ಕುರಿತು ಶಾಲೆ ವಿದ್ಯಾರ್ಥಿನಿಯರಾದ ಸೌಜನ್ಯ ಹಾಗೂ ಎಲಿಜಬೆತ್ ರಾಣಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರುಗಳಾದ ವೆಂಕಟೇಶ ಪೂಜಾರಿ, ಶಿಕ್ಷಕರಾದ ಕವಿತಾ ಪಾಟೀಲ್, ಹುಚ್ಚಪ್ಪ ದೇವರಗೋನಾಲ, ಅಯ್ಯಣ್ಣ ಕೆ, ಪ್ರಭುಮೈಲಾರಿ, ಸರೀತಾಕುಮಾರಿ, ನಸರೀನ್ ಬೇಗಂ, ಮಹಮ್ಮದ್ ಸೌದಾಗರ, ಈರಮ್ಮ ಹಾಗೂ ಮಕ್ಕಳು ಮತ್ತು ಯಲ್ಲಮ್ಮ ಇನ್ನಿತರರು ಉಪಸ್ಥಿತರಿದ್ದರು.

# ಫುಲೆ ದಿಕ್ಕಿಲ್ಲದವರಿಗೆ ಆಸರೆ: ಶಿಲ್ಪಾ ಬಿ ಕೆ




ವರದಿ: ಡಿ.ಕೆ ದೇವಿಂದ್ರ.

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಒಂದೆಡೆ ಬೆಂಕಿ, ಮತ್ತೊಂದೆಡೆ ಹೂವು: ಎರಡನ್ನೂ ಸಮಾನವಾಗಿ ಸ್ವೀಕರಿಸಿದ ತಾಯಿ ಸಾವಿತ್ರಿಬಾಯಿ ಫುಲೆ ಅವರ ಜನ್ಮ ದಿನವನ್ನು ಇಂದು ಯಾದಗಿರಿಯ ಂಖಆ-ಖಔ ಜಿಲ್ಲಾ ಕಛೇರಿ, ಸರ್ಕಾರಿ ಕನ್ಯಾ ಪ್ರಾಢಶಾಲೆ ಸೇರಿದಂತೆ ಹಲವೆಡೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಂಖಆಖಔ ಜಿಲ್ಲಾ ಸಂಚಾಲಾಕಿ ಶಿಲ್ಪಾ ಬಿ ಕೆ ರವರು ಸಾವಿತ್ರಿಬಾಯಿ ಫುಲೆಯವರನ್ನು ಕೇವಲ ಶಿಕ್ಷಕಿ ಎಂದು ನೆನಪಿಸಿಕೊಳ್ಳುವುದೆಂದರೆ, ಅವರಲ್ಲಿದ್ದ ಹೋರಾಟಗಾರ್ತಿಯನ್ನು ಮರೆತಂತೆ. ಅವರು ಕೇವಲ ಶಾಲೆಯನ್ನು ತೆರೆಯಲಿಲ್ಲ, ಬದಲಾಗಿ ಸಾವಿರಾರು ವರ್ಷಗಳ ಶೋಷಣೆಯ ವಿರುದ್ಧ, ಕೇವಲ ಒಂದು ಪುಸ್ತಕ ಮತ್ತು ಎದೆಯತುಂಬಾ ಧೈರ್ಯವನ್ನು ಅಸ್ತ್ರವನ್ನಾಗಿ ಮಾಡಿಕೊಂಡು ಯುದ್ಧವನ್ನೇ ಸಾರಿದರು. ದಲಿತರಿಗೆ ಪಾಠ ಮಾಡುವುದನ್ನು ಅವರ ಸ್ವಂತ ಸಹೋದರರನೇ ವಿರೋಧಿಸಿದಾಗ ಮತ್ತು ಧರ್ಮದ ಹೆಸರಿನಲ್ಲಿ ಪ್ರಶ್ನಿಸಿದಾಗ ಅವರು ತಲೆಬಾಗಲಿಲ್ಲ. ಬದಲಾಗಿ ಅದನ್ನು ಮೆಟ್ಟಿನಿಂತರು. ಅವರು ಕೇವಲ ಮೌನವಾಗಿ ಸಹಿಸಿಕೊಳ್ಳುವವರಾಗಿರಲಿಲ್ಲ, ಎದುರಾಳಿ ಸ್ವಂತ ಕುಟುಂಬದವರೇ ಆಗಿದ್ದರೂ, ಅವರ ಡಾಂಭಿಕತೆಯನ್ನು ತರ್ಕಬದ್ಧವಾಗಿ ಪ್ರಶ್ನಿಸುವ ಎದೆಗಾರಿಕೆ ಅವರಲ್ಲಿತ್ತು. ಅವರು ಕೇವಲ ಶಿಕ್ಷಕಿಯಲ್ಲ, ದಿಕ್ಕಿಲ್ಲದವರಿಗೆ ಆಸರೆಯಾಗಿದ್ದರು. ಹೀಗೆ ಒಮ್ಮೆ ಅನ್ಯಜಾತಿಯ ವಿವಾಹವಾದ ಕಾರಣಕ್ಕೆ ಒಬ್ಬ ಬ್ರಾಹ್ಮಣ ಹುಡುಗ ಮತ್ತು ದಲಿತ ಹುಡುಗಿಯನ್ನು ಕೊಲ್ಲಲು ಊರಿನ ಜನ ಮುಂದಾಗಿದ್ದರು. ಊರಿನ ಜನರೆಲ್ಲಾ ಮೂಕ ಪ್ರೇಕ್ಷಕರಾಗಿದ್ದಾಗ, ಸಾವಿತ್ರಿಬಾಯಿ ಆ ರಕ್ತಪಿಪಾಸು ಗುಂಪಿನ ಮಧ್ಯೆ ನುಗ್ಗಿ, ಕಾನೂನಿನ ಭಯ ಹುಟ್ಟಿಸಿ ಆ ಜೋಡಿಯನ್ನು ರಕ್ಷಿಸಿದರು. ಆದರೆ ಆ ತಾಯಿ ಅಂದು ಮಾಡಿದ ಹೋರಾಟ ಇಂದಿಗೂ ನಿಂತಿಲ್ಲ. ಇತ್ತೀಚಿಗೆ ನಮ್ಮ ರಾಜ್ಯದಲ್ಲಿ ನಡೆದ ಮರ್ಯಾದೆ ಗೇಡು ಹತ್ಯೆ ಇಡೀ ನಾಗರಿಕ ಸಮಾಜವೇ ನಾಚಿಕೆಯಿಂದ ತಲೆ ತಗ್ಗಿಸುವಂತೆ ಮಾಡಿದೆ. ಇಂದಿಗೂ ಈ ಜಾತಿ, ಧರ್ಮಗಳು ಸಮಾಜದಲ್ಲಿ ಜೀವಂತವಾಗಿದೆ. ಈ ಗೊಡ್ಡು ಆಚರಣೆಗಳ ವಿರುದ್ಧ ಸಾವಿತ್ರಿಬಾಯಿ ಅವರಿಂದ ನಾವೆಲ್ಲರೂ ಸ್ಫೂರ್ತಿ ಪಡೆದು ಸಮರ ಸಾರಬೇಕಿದೆ ಎಂದರು. ಈ ಸಂದರ್ಭದಲ್ಲಿ ಂಖಆಖಔ ಜಿಲ್ಲಾ ಸಮಿತಿ ಸದಸ್ಯರಾದ ನಾಗರಾಜ್, ಕಾವೇರಿ, ವಿಕ್ರಮ್, ವಿನಾಯಕ್, ಶಿವಾಜಿ, ನಿತೇಶ್, ದರ್ಶನ್, ಭಗವಾನ್, ಸುದೀಪ್ ಭೀಮು, ಸೇವಾಗ್ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

# ಅಕ್ಷರ ನೀಡಿದ ಮಹಾತಾಯಿ: ಕೋಟಗಾರ



ವರದಿ: ಡಿ.ಕೆ ದೇವಿಂದ್ರ.

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ.

ಜಗತ್ತಿನಲ್ಲಿರುವ ಮಹಿಳೆರಿಗೆ ಮೊಟ್ಟಮೊದಲ ಅಕ್ಷರ ಕ್ರಾಂತಿಯನ್ನು ಮೂಡಿಸಿದ ಮಹಾ ನಾಯಕಿ, ಬ್ರಿಟಿಷ್ ಸರ್ಕಾರದಲ್ಲಿ ಅಕ್ಷರ ಜ್ಞಾನ ಇಲ್ಲದ ಜನರಿಂದ ಅವಮಾನವನ್ನು ಸಹಿಸಿಕೊಂಡು ಮೆಟ್ಟಿನಿಂತ ಮಹಾ ಮಹಿಳೆ ಎಂದು ಜ್ಞಾನದೀಪ ಹಿರಿಯ ಪ್ರಾಥಮಿಕ ಶಾಲೆಯ ಅಧ್ಯಕ್ಷ ಭೀಮರಾಯ ಕೋಟಗಾರ್ ಹೇಳಿದರು. ತಾಲೂಕಿನ ಬಳಿಚಕ್ರ ಗ್ರಾಮ ಜ್ಞಾನದೀಪ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶ್ರೀಮತಿ ಸಾವಿತ್ರಿಬಾಯಿ ಫುಲೆ ರವರ 195ನೇ ಜಯಂತಿ ಆಚರಣೆ ಕುರಿತು ಮಾತನಾಡಿದರು. ಭಾರತ ದೇಶಕ್ಕೆ ಸಂವಿಧಾನ ಬಂದರು ನಮ್ಮ ಜನರ ಮೂಢನಂಬಿಕೆ ಸಂಪ್ರದಾಯ ದಲ್ಲಿ ಮುಳಗಿ ಮಹಿಳೆಯರನ್ನು ಶೋಷಣೆಗೆ ಒಳಗಾಗಿದ್ದರು, ಮಹಿಳೆಯರು ಶಿಕ್ಷಣದಿಂದ ವಂಚಿತರಾಗಿರುವುದರಿಂದ ಪ್ರತಿಯೊಬ್ಬರು ಶಿಕ್ಷಣವಂತರಾಗಲು ಭಾರತದ ಪ್ರಪ್ರಥಮವಾಗಿ ಶ್ರೀಮತಿ ಸಾವಿತ್ರಿಬಾಯಿ ಫುಲೆ ರವರು ಮಹಿಳೆಯರನ್ನು ಸಂಘಟಿಸಿ ವಿದ್ಯಾಧಾನ ಮಾಡಿ ಅಕ್ಷರವನ್ನು ಕಲಿಸಿ ಸಂವಿಧಾನದ ಪ್ರಕಾರ ಅವಕಾಶಗಳನ್ನು ಸದುಪಯೋಗ ಪಡೆಯುವಲ್ಲಿ ಇವರ ಪಾತ್ರ ಮಹತ್ವವಾಗಿದೆ ಎಂದರು.

ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ರಾಜು ಕೋಟಗಾರ್, ಮುಖ್ಯಗುರುಗಳಾದ ಶ್ರೀ ಮತಿ ಅಶ್ವಿನಿ ಬಿ.ಕೋಟಗಾರ್, ಸಹ ಶಿಕ್ಷಕಿ ಕು. ಗೌರಮ್ಮ ಪಾರ್ವತಿ ಮತ್ತು ಗ್ರಾಮದ ಯುವಕರು ಮತ್ತು ಪೋಷಕರು, ವಿದ್ಯಾರ್ಥಿಗಳು ಇದ್ದರು.

# ಮನದ ಮುಂದಿನ ಆಸೆಯೆ ಮಾಯೆ



• ಮಲ್ಲಮ್ಮ ನುಡಿ ವಾರ್ತೆ,ಕೆಂಭಾವಿ:

'ಆಸೆ' ಎಂದರೆ ಬಯಕೆ, ಮೋಹ, ಹಂಬಲ, ಆಕಾಂಕ್ಷೆ, ಇಚ್ಛೆ, ಅಪೇಕ್ಷೆ, ಮನಸ್ಸಿನಲ್ಲಿ ಉಂಟಾಗುವ ತೀವ್ರವಾದ ಹಾತೊರೆಯುವಿಕೆ ಆಸೆ ಎಂದು ಚಿಂಚೋಳಿ ತಾಲೂಕಿನ ಐನಾಪುರದ ಮಲ್ಲಿಕಾರ್ಜುನ ಶಾಸ್ತ್ರಿ ಹೇಳಿದರು.

ಪಟ್ಟಣದ ಶ್ರೀ ಗುರು ಕಾಂತೇಶ್ವರ ಜನ ಕಲ್ಯಾಣ ಸೇವಾ ಪ್ರತಿಷ್ಠಾನದ ವತಿಯಿಂದ ಶನಿವಾರ ಸಂಜೆ ಹಮ್ಮಿಕೊಂಡಿದ್ದ ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿ ಉದ್ಘಾಟಿಸಿ ಉಪನ್ಯಾಸ ನೀಡಿದ ಅವರು ಒಬ್ಬ ವ್ಯಕ್ತಿ, ವಸ್ತುವಿಗಾಗಿ, ಐಹಿಕ ಸುಖಕ್ಕಾಗಿ ಅಥವಾ ಗುರಿಗಾಗಿ ಮನಸ್ಸಿನಲ್ಲಿ ಉಂಟಾಗುವ ಚಂಚಲ ಭಾವನೆಯನ್ನು ಸೂಚಿಸುತ್ತದೆ. ಅತಿಯಾದ ಆಸೆ ಗತಿಗೇಡು ಎಂದವರು. ಮನದ ಮುಂದಿನ ಆಸೆಯೇ ಮಾಯೆ, ಆಸೆಗೆ ಕೊನೆಯಿಲ್ಲ, ಸದ್ಗುಣಕ್ಕೆ ಸಾವಿಲ್ಲ, ಅಂತಹ ಸದ್ಗುಣ, ಸದ್ಬುದ್ಧಿ, ಸದಾಚಾರ, ಧಾರಾಳವಾಗಿ ಧಾರೆ ಎರೆಯುವ, ಷ ಬ್ರ ಚನ್ನಬಸವ ಶಿವಾಚಾರ್ಯರು ಮುನ್ನೆಡೆಸುವ ಮಾಸಿಕ ಹುಣ್ಣಿಮೆಯ ಸತ್ಸಂಗ ಸುತ್ಯಾರ್ಹವಾದುದ. ಸದ್ಭಕ್ತರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಷ ಬ್ರ ಚನ್ನಬಸವ ಶಿವಾಚಾರ್ಯರು ಕಾಯಕ ದಾಸೋಹ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಡು, ಸದ್ಗುರುವಿನ ಸನ್ನಿಧಿಯಲ್ಲಿ ಸೇರಿದಾಗಲೇ ಜೀವನ ಸಾರ್ಥಕ ಎಂದು ಆಶಿಸಿದರು.

ಸೋಮನಾಥ ಯಾಳಗಿ ಹಾಗೂ ಯಮನೇಶ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು, ಡಾ ಯಂಕನಗೌಡ ಎಸ್ ಪಾಟೀಲ ನಿರೂಪಿಸಿ ವಂದಿಸಿದರು. ಪ್ರಮುಖರಾದ ಸಾಹಿತಿ ನಿಂಗನಗೌಡ ದೇಸಾಯಿ, ಮುದಕಣ್ಣ ಸಾಹು ಹುಣಸಗಿ, ಪ್ರಶಾಂತ ಹಿರೇಮಠ, ಅಭಿಷೇಕ್ ಪಾಟೀಲ್ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಸದ್ಭಕ್ತರು ಮಹಿಳೆಯರುಮಕ್ಕಳುಉಪಸ್ಥಿತರಿದ್ದರು

# ಸೋಮನಾಥ ದರ್ಶನ ತದ್ರೂಪ ಮಂದಿರ ನಿರ್ಮಾಣ ಮಾಡಲು ಗುದ್ದಲಿ ಪೂಜೆ






ಮಲ್ಲಮ್ಮ ನುಡಿ ವಾರ್ತೆ ಮೈಸೂರು:

ಅಂತರಾ ಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ವತಿಯಿಂದ ಮಹಾ ಶಿವರಾತ್ರಿಯ ಅಂಗವಾಗಿ ಹುಣಸೂರು ರಸ್ತೆ ಯಲ್ಲಿರುವ ಐಶ್ವರ್ಯ ಪೆಟ್ರೋಲ್ ಬಂಕ್ ಎದುರಿಗೆ ಇರುವ 50/80 ಮುಡಾ ನಿವೇಶನದಲ್ಲಿ, ಗುಜರಾತ್ ನಲ್ಲಿರುವ ಸೋಮನಾಥ ಮಂದಿರದ ತದ್ರೂಪ ನಿರ್ಮಾಣವಾಗಿ ಫೆಬ್ರವರಿ 8 ರಿಂದ 22 ರವರೆಗೆ ಸಾರ್ವಜನಿಕ ವಾಗಿ ತೆರೆಯಲಾಗಿರುತ್ತದೆ. ಇದರಲ್ಲಿ ಪ್ರತಿನಿತ್ಯ ವೇದಿಕೆ ಸಭೆಗಳು, ಸಾಂಸ್ಕೃತಿಕ, ನೃತ್ಯ, ಹಾಡುಗಾರಿಕೆ, ಸನ್ಮಾನಗಳು,ನವ ಚೈತನ್ಯ ದುರ್ಗೆಯರ ದರ್ಶನ, ಮೈಂಡ್ ಸ್ಪಾ, ಸಾಹಿತ್ಯ ಪ್ರದರ್ಶನ, ಮುಂತಾದ ಕಾರ್ಯಕ್ರಮ ಗಳಿರುತ್ತವೆ. ಇದರ ಪೂರ್ವಭಾವಿ ಸಭೆಯು ಇಂದು ಹುಣಸೂರು ರಸ್ತೆಯಲ್ಲಿರುವ ರಾಜಯೋಗ ರಿಟ್ರೀಟ್ ಸೆಂಟರ್ ನಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಮೈಸೂರು ಭಾಗದ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ ಪ್ರಾಂಶುಪಾಲರಾದ ಬಿಕೆ ರಂಗನಾಥ್, ಚಾಮರಾಜನಗರ ಜಿಲ್ಲಾ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಪ್ರಭಾಮಣೀಜಿ, ಬಿಕೆ ದಾನೇಶ್ವರೀಜೀ, ಮಾಜಿ ಶಾಸಕಿ ಪರಿಮಳ ನಾಗಪ್ಪ, ರಾಜು ಉಪವಿಭಾಗದ ರಾ-ಜಯೋಗ ಶಿಕ್ಷಕಿಯರು ಹಾಗೂ ರಾಜಯೋಗ ವಿದ್ಯಾರ್ಥಿಗಳು ಹಾಜರಿದ್ದರು.



ಬಸವಕಲ್ಯಾಣ :- ತಾಲೂಕಿನ ಗದಲೇಗಾಂವ ಗ್ರಾಮದ ಶಿಕ್ಷಣ ಮತ್ತು ಸಾಮಾಜಿಕ ಚಿಂತಕರಾದ ಡಾ. ಶರಣಪ್ಪ ಗದಲೇಗಾಂವ ಅವರು ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನಪತ್ರಿಕೆ ವೀಕ್ಷಿಸುತಿರುವ ದೃಶ್ಯ ಕಾಣಬಹುದು. ಈ ಸಂದರ್ಭದಲ್ಲಿ ವರದಿಗಾರರಾದ ಡಿ.ಕೆ.ಪ್ರಹ್ಲಾದ ವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ.)

# ಸ್ವಸ್ಥ ಸಮಾಜಕ್ಕೆ ಉತ್ತಮ ಸಂಸ್ಕೃತಿ ಬಹಳ ಮುಖ್ಯ: ಡಾ. ಅಭಿನವ ಶ್ರೀಗಳು.




• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:

ಸ್ವಸ್ಥ ಸಮಾಜಕ್ಕೆ ಉತ್ತಮ ಸಂಸ್ಕೃತಿ ಬಹಳ ಮುಖ್ಯವಾಗಿದ್ದು ಅಂತಹ ಉತ್ತಮ ಸಂಸ್ಕಾರ ಮಕ್ಕಳಲ್ಲಿ ಬಿತ್ತಿದಾಗ ಸ್ವಸ್ಥ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದು ತ್ರಿಪುರಾಂತನ ಗವಿ ಮಠದ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ತಿಳಿಸಿದರು.

ಇಲ್ಲಿನ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಅಭಿನವ ಪ್ರಕಾಶನ ಹಾಗೂ ಪ್ರತಿಮಾ ಪ್ರಕಾಶನ ಸಹಯೋಗದಲ್ಲಿ ತಿಪುರಾಂತಿನ ಗವಿಮಠದಲ್ಲಿ ನಡೆದ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿ ಹುಟ್ಟು ಹಬ್ಬಗಳು ಸಾರ್ಥಕವಾಗಬೇಕಾದರೆ ಸಂಸ್ಕಾರ ಮತ್ತು ಸಂಸ್ಕೃತಿಯ ಮುಖೇನ ನಡೆಯಬೇಕು. ಪುನಿತರಾಜಕುಮಾರ ಕನ್ನಡ ನಾಡು ಕಂಡ ಅದ್ಭುತ ಪ್ರತಿಭೆಯಾಗಿದ್ದು ಅವರು ಸಮಾಜಕ್ಕಾಗಿ ತಮ್ಮ ಬದುಕನ್ನು ಮೀಸಲಿಟ್ಟು ಕಡು ಬಡವರ ಬಾಳಿಗೆ ಬೆಳಕಾದವರು ಅಂಥವರ ಬಗ್ಗೆ ಗ್ರಂಥ ಸಂಪಾದನೆ ಮಾಡಿದ ವೀರಶಟ್ಟಿ ಪಾಟೀಲರು ಕಳೆದ 8 ವರ್ಷಗಳಿಂದ ತಮ್ಮ ಮಗನ ಹುಟ್ಟು ಹಬ್ಬದ ಪ್ರಯುಕ್ತ ಪುಸ್ತಕ ಪ್ರಕಟಣೆ ಮಾಡುವ ಮೂಲಕ ಇತಿಹಾಸ ರಚನೆ ಮಾಡಿದ್ದಾರೆ ಎಂದರು. ಪುಸ್ತಕದ ಪರಿಚಯ ಮಾಡಿದ ಭಾಲ್ಕಿಯ ಸಾಹಿತಿಗಳಾದ ಮುಕ್ತುಂಬಿ ಎಂ ರವರು ಮಾತನಾಡಿ ಪುನಿತ ಪುನರ್ಜನ್ಮ ಪುಸ್ತಕ ತುಂಬಾ ಚನ್ನಾಗಿ ಮೂಡಿಬಂದಿದೆ. ಇಲ್ಲಿಯ ಕಾವ್ಯಗಳು ಅರ್ಥಗರ್ಭಿತವಾಗಿದ್ದು ಪುನಿತರು ಮಾಡಿದ ಸಾಧನೆಗಳಿಗೆ ಕನ್ನಡಯಂತೆ ಈ ಪುಸ್ತಕ ಇದೆ ಎಂದರು .

ಮುಖ್ಯ ಅತಿಥಿಗಳಾಗಿ ಭಾರ್ಗವ ಚಾರಿ ಮತ್ತು ಸಂತೋಷ ಕೊರಳ್ಳಿ. ತೋಟಗಾರಿಕೆ ಇಲಾಖೆಯ ಎಂ.ಡಿ. ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಯ ಮುಖ್ಯಗುರುಗಳಾದ ಮಹಾನಂದಾ ಮೇಡಂ. ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಡಾ.ರುದ್ರಮಣಿ ಮಠಪತಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ವೀರಶಟ್ಟಿ ಪಾಟೀಲ ಪ್ರತಿಮಾ ಪಾಟೀಲ ದಂಪತಿಗಳು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರುಗಳಾದ ಸಂತೋಷ ಕೊರಳ್ಳಿ. ಮೋಹಮ್ಮದ ಇಸ್ಮಾಯಿಲ. ಸಚೀನ . ಅಶೋಕ ಕೋಳಿ. ವಿವೇಕಾನಂದ ವಸ್ತ್ರದ. ಗೋವಿಂದ ರೆಡ್ಡಿ ಕೋತಾಪಲ್ಲೆ ಸೇರಿದಂತೆ ಅನೇಕರಿಗೆ ದಾನ ಧರ್ಮಾಮೃತ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಡಾ.ಬಸವರಾಜ ಖಂಡಾಳೆ ಸ್ವಾಗತಿಸಿ ಪ್ರಾಸ್ತಾವಿಕ ಮಾತನಾಡಿದರು. ಪ್ರತಿಮಾ ಪಾಟೀಲ ವಂದಿಸಿದರು. ನಾಗೇಂದ್ರ ಬಿರಾದರ ನಿರೂಪಿಸಿದರು.

# ದರಪಟ್ಟಿ ಆಹ್ವಾನ

ಕಲಬುರಗಿ ಕಮಲಾಪೂರ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಪಾಲನೆ ಮತ್ತು ಪ್ರಾಣಿ ಸಂರಕ್ಷಣಾ ಸೇವೆಗಳನ್ನು ನೀಡಲು ಅನುಭವ ಹೊಂದಿರುವ ಅರ್ಹ ಸರ್ಕಾರೇತರ ಸಂಸ್ಥೆ (ಎನ್.ಜಿ.ಓ.) ಗಳಿಂದ ಮುಚ್ಚಿದ ಲಕೋಟೆಯಲ್ಲಿ (ಕೊಟೇಷನ್) ದರಪಟ್ಟಿ ಆಹ್ವಾನಿಸಲಾಗಿದೆ ಎಂದು ಕಮಲಾಪುರ ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಬೀದಿ ನಾಯಿಗಳಿಗೆ ಪ್ರತಿನಿತ್ಯ ಆಹಾರ ಮತ್ತು ನೀರು ಪೂರೈಕೆ, ಬೀದಿ ನಾಯಿಗಳ ಲಸಿಕೆ, ನಿಯಮಿತ ಆರೋಗ್ಯ ಪರಿಶೀಲನೆ ಮತ್ತು ಪ್ರಾಥಮಿಕ ಚಿಕಿತ್ಸಾ ವ್ಯವಸ್ಥೆ, ಆಶ್ರಯ ಕೇಂದ್ರದ ನಿರ್ವಹಣೆ ಹಾಗೂ ದಾಖಲಾತಿ ಸಂರಕ್ಷಿಸಿ ಪಟ್ಟಣ ಪಂಚಾಯತ ಆರೋಗ್ಯ ವಿಭಾಗಕ್ಕೆ ದೈನಂದಿನ ವರದಿ ನೀಡುವುದು ಸೇವಾ ಕಾರ್ಯ ವ್ಯಾಪ್ತಿ ಹೊಂದಿದೆ. ಪ್ರಾಣಿ ಪಾಲನೆ ಮತ್ತು ಎ.ಬಿ.ಸಿ. ಕಾರ್ಯಕ್ರಮಗಳಲ್ಲಿ ಕನಿಷ್ಟ ವರ್ಷದ ಅನುಭವ ಹೊಂದಿರುವ ಮತ್ತು ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿಯಿಂದ ಪ್ರಮಾಣಪತ್ರ ಹೊಂದಿರುವ ನೋಂದಾಯಿತ ಸರ್ಕಾ-ರೇತ ಸಂಸ್ಥೆಗಳು ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ್, ಕಮಲಾಪುರ ಕಚೇರಿಗೆ ಈ ಪ್ರಕಟಣೆ ಹೊರಡಿಸಿದ 15 ದಿನದೊಳಗೆ ದರಪಟ್ಟಿಯನ್ನು ಸಲ್ಲಿಸಬೇಕು. ಷರತ್ತು, ನಿಬಂಧನೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿಗೆ ಕಮಲಾಪುರ ಪಟ್ಟಣ ಪಂಚಾಯತಿ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಶಿಲ್ಪಕಲಾ ಕೌಶಲ್ಯಕ್ಕೆ ಅಮರಶಿಲ್ಪಿ ಜಕಣಾಚಾರಿಯವರು

ಕೊಡುಗೆ ಅಪಾರ: ತಹಶಿಲ್ದಾರ್ ಸುರೇಶ್ ವರ್ಮ

ರಾಯಚೂರು ಜನವರಿ 03 (ಕರ್ನಾಟಕ ವಾರ್ತೆ): ಸದಾಕಾಲಕ್ಕೂ ಜೀವಂತವಾಗಿರುವ ಭಾರತೀಯ ಶಿಲ್ಪಕಲಾ ಕೌಶಲ್ಯಕ್ಕೆ ಅಮರಶಿಲ್ಪಿ ಜಕಣಾಚಾರಿಯವರು ಕೊಡುಗೆ ಅಪಾರವಾಗಿದೆಂದು ಎಂದು ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮಾ ಅವರು ಹೇಳಿದರು.

ಜನವರಿ 03ರ ಶನಿವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಯಚೂರು ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತ ಸೇರಿದಂತೆ ವಿಶ್ವದ ವಿವಿಧ ಕಡೆ ಜಕಣಾಚಾರಿಯವರ ಶಿಲ್ಪಕಲೆಗಳು ಇಂದಿಗೂ ಜೀವಂತವಾಗಿದೆ. ಶಿಲ್ಪಕಲೆಗೆ ಅವರು ನೀಡಿರುವ ಕೊಡುಗೆಗೆ ಇವುಗಳೇ ಸಾಕ್ಷಿ. ಬೇಲೂರು, ಹಳೇಬೀಡು, ಸೋಮನಾಥಪುರ ದೇವಾಲಯಗಳಲ್ಲಿನ ಶಿಲ್ಪಕಲೆ ವಿಶ್ವಕರ್ಮರ ಪ್ರಸ್ತುತತೆಯನ್ನು ಬಿಂಬಿಸುತ್ತಿದೆ. ನಶಿಸಿಹೋಗುತ್ತಿರುವ ವಿಶ್ವಕರ್ಮರ ಕುಲಕಸುಬುಗಳನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸಿ, ಮುಂದುವರಿಸಲು ಎಲ್ಲರೂ ಪ್ರಯತ್ನಿಸಬೇಕು ಎಂದರು.

ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಆಚಾರ ವಿಚಾರಗಳನ್ನು ಸಮಾಜದ ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು. ಇಂದಿನ ಮಕ್ಕಳಿಗೆ ಅವರ ಆಚಾರ, ವಿಚಾರಗಳ




ಮಾಹಿತಿಯನ್ನು ಒದಗಿಸುವ ಕೆಲಸವನ್ನು ಪೋಷಕರು ಮಾಡಬೇಕೆಂದರು.

ಈ ವೇಳೆ ಉಪನ್ಯಾಸಕರಾಗಿ ಎಸ್. ಆರ್.ಕೆ. ಶಿಕ್ಷಣ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಪಕರಾದ ಡಾ.ಸವಿತಾ ಪಂಪಾಪತಿ ಬಡಿಗೇರ್ ಅವರು ಮಾತನಾಡಿ, ಶಿಲ್ಪಕಲೆಗೆ ಅಮರಶಿಲ್ಪಿ ಜಕಣಾಚಾರಿ ಅವರ ಕೊಡುಗೆ ಅಪಾರ. ಆ ನಿಟ್ಟಿನಲ್ಲಿ ಸಮಾಜಕ್ಕೆ ಒಳ್ಳೆಯ ಶಿಲ್ಪಕಲೆಗಳನ್ನು ನೀಡಿದ್ದು, ಇವರ ಏಕಾಗ್ರತೆ, ಸಾಧನೆ ಸದಾ ಸ್ಮರಣೀಯ ಎಂದರು.

ಇಂದು ವಿಶ್ವವಿಖ್ಯಾತ ಶಿಲ್ಪಿಯ ಸಂಸ್ಮರಣೆ ಎಲ್ಲೆಡೆ ನಡೆಯುತ್ತಿದೆ. ಸೃಷ್ಟಿಯ ಮೂಲಕರ್ತೃವಾಗಿರುವ ಜಕಣಾಚಾರಿಯವರ ಶಿಲ್ಪಕಲಾ ಕುಶಲತೆ ಇಂದು ಜಗತ್ತಿನ ಎಲ್ಲೆಡೆ ಪಸರಿಸಿದೆ.

ಪ್ರಪಂಚದ ಎಲ್ಲ ವಿದ್ಯೆಗಳ ಮೂಲವಾಗಿರುವ ಜಕಣಾಚಾರಿ ಅವರನ್ನು ಜಗತ್ತಿನ ಮೊದಲ ಮುಖ್ಯ ಎಂಜಿನಿಯರ್ ಎನ್ನಬಹುದು.

ಜಕಣಾಚಾರಿಯವರು ಸಾಮಾನ್ಯ ಜನರಿಗೆ ದೇವರ ಪರಿಕಲ್ಪನೆ ನೀಡುವ ಮಧ್ಯಸ್ಥಿಕೆದಾರರಾಗಿದ್ದರು. ವಿಶ್ವಕರ್ಮರ ಶಿಲ್ಪಕಲೆ ಅಮರವಾಗಿದೆ ಎಂದರು. ಶಿಲ್ಪಕಲೆಯಲ್ಲಿ ಶ್ರೀಮಂತ ಪರಂಪರೆ ಹೊಂದಿರುವ ವಿಶ್ವಕರ್ಮ ಸಮುದಾಯ ತಮ್ಮ ಕುಲಕಸುಬುಗಳ ಜೊತೆಗೆ ಶಿಕ್ಷಣ ಪಡೆದು ಸಂಘಟಿತರಾಗಬೇಕು.

ಶೈಕ್ಷಣಿಕವಾಗಿ ಮುಖ್ಯವಾಹಿನಿಗೆ ಬರಬೇಕು. ಸಮುದಾಯದ ಇತರರಲ್ಲೂ ಜಾಗೃತಿ ಮೂಡಿಸಬೇಕು. ಜೀವನ ಸಾರ್ಥಕ ಪಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ಸಮುದಾಯ ಎಚ್ಚೆತ್ತುಕೊಳ್ಳಬೇಕಾಗಿದೆ ಎಂದರು.

ಶಾಸಕರಿಂದ ಮಾಲಾರ್ಪಣೆ: ಇದಕ್ಕೂ ಮುಂಚೆ ನಗರದ ಕಾಳಿದೇವಿ ಆವರಣದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಅವರ ಅದ್ದೂರಿ ಭಾವಚಿತ್ರ ಮೆರವಣಿಗೆಗೆ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಹಾಗೂ ವಿಧಾನ ಪರಿಷತ್ ಸದಸ್ಯರಾದ ಎ.ವಸಂತ ಕುಮಾರ್ ಅವರು ಚಾಲನೆ ನೀಡಿ, ಮಾಲಾರ್ಪಣೆ ಸಲ್ಲಿಸಿ ಗೌರವ ಅರ್ಪಿಸಿದರು.

ಈ ವೇಳೆ ವಿವಿಧ ಗಣ್ಯರು ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರಿಗೆ ಸಾಥ್ ನೀಡಿದರು. ಇದೇ ಸಂದರ್ಭದಲ್ಲಿ ದೇವದುರ್ಗದ ಮೂಲ ಪೀಠದ ವಿಶ್ವಕರ್ಮ ಶ್ರೀಮದ್ ಮದಾನೆಗುಂದಿ ಸರಸ್ವತಿ ಸಂಸ್ಥಾನದ ಶ್ರೀಶ್ರೀ ಮೌನೇಶ್ವರ ಮಹಾಸ್ವಾಮಿಗಳು, ಸೂರ್ಯ ನಾರಾಯಣ ಸ್ವಾಮಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಎ. ಈರಣ್ಣ ಬಡಿಗೇರ,

ವಕೀಲರಾದ ಬ್ರಹ್ಮ ಗಣೇಶ್, ಕೆ.ರಾಮು ಗಾಣಧಾಳ, ಹಿರಿಯ ಪತ್ರಕರ್ತರಾದ ಮಾರುತಿ ಬಡಿಗೇರ, ನಾಗರಾಜ ಪತ್ತಾರ್, ಡಾ.ವೆಂಕಟೇಶ ಅನ್ವರಿ, ಗಿರೀಶ್ ಆಚಾರಿ, ಜಯಂತ್ ಆಚಾರಿ,

ಕೆ.ನರಸಪ್ಪ, ಮಲೇಶ, ಪ್ರಕಾಶ್ ಗುಂಜಹಳ್ಳಿ, ಸುರೇಶ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

# ಸ್ವರೂಪದ ಪ್ಲಾನ್ ವೀಕ್ಷಣೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಜನವರಿ 29, 30 ಹಾಗೂ 31ರಂದು ನಿಗದಿಯಾದ ರಾಯಚೂರು ಉತ್ಸವ–2026ರ ವೇದಿಕೆಯ ಹಾಗೂ ನಾನಾ ಕಾರ್ಯಕ್ರಮಗಳ ಸಮಗ್ರ ಸ್ವರೂಪದ ಪ್ರಾತ್ಯಕ್ಷಿಕೆಯನ್ನು ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಎನ್ ಎಸ್ ಬೋಸರಾಜು, ಶಾಸಕರಾದ ಹಂಪನಗೌಡ ಬಾದರ್ಲಿ, ಬಸನಗೌಡ ದದ್ದಲ್, ಡಾ.ಎಸ್.ಶಿವರಾಜ ಪಾಟೀಲ, ಬಸನಗೌಡ ತುರವಿಹಾಳ, ಹಂಪಯ್ಯ ನಾಯಕ, ಎ ವಸಂತಕುಮಾರ ಹಾಗೂ ಇನ್ನಿತರರು ವೀಕ್ಷಣೆ ನಡೆಸಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜನವರಿ 4ರಂದು ನಡೆದ ಜನಪ್ರತಿನಿಧಿಗಳೊಂದಿಗಿನ ಸಭೆಯಲ್ಲಿ ಸಚಿವರು ಹಾಗೂ ಶಾಸಕರು ಮಾತನಾಡಿ, ಉತ್ಸವಕ್ಕೆ ಸಂಬಂಧಿಸಿದಂತೆ ನಾನಾ ಸಲಹೆಗಳು ಮತ್ತು ಸೂಚನೆಗಳನ್ನು ನೀಡಿದರು.ಎಲ್ಲ ಸಮಿತಿಗಳ ಮೇಲೆ ಮೇಲ್ವಿಚಾರಣಾ ಸಮಿತಿಯೊಂದನ್ನು ರಚಿಸಿ ಪ್ರತಿ ನಿತ್ಯ ಎಲ್ಲ ತಯಾರಿಯ ಮೇಲ್ವಿಚಾರಣೆ ಆಗಬೇಕು.

ಕೂಡಲೇ ಜಿಲ್ಲೆಯ ಎಲ್ಲ ಸಂಘ–ಸಂಸ್ಥೆಗಳ, ಅಂಗಡಿಕಾರರ ಸಭೆ ನಡೆಸಿ ಅವರ ಸಲಹೆ ಪಡೆಯಬೇಕು. ಆಯಾ ತಹಸೀಲ್ದಾರರು ಹಾಗೂ ತಾಪಂ ಇಒಗಳು ಆಯಾ ತಾಲೂಕಿನಲ್ಲಿ ಸಭೆ ನಡೆಸಬೇಕು. ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡವಾಗಿ ಕೆಲಸ ಮಾಡಿ ಕಾರ್ಯನಿರ್ವಹಿಸಬೇಕು. ಜಿಲ್ಲೆಯ ಎಲ್ಲ ಶಾಲಾ ಕಾಲೇಜುಗಳ ಆಡಳಿತ ಮಂಡಳಿಯ ಮುಖ್ಯಸ್ಥರ ಸಭೆ ನಡೆಸಬೇಕು.

ಜಿಲ್ಲೆಯ ಎಲ್ಲ ಸಾಹಿತಿಗಳು, ಕಲಾವಿದರು, ಕವಿಗಳು, ವಕೀಲರು, ಮಹಿಳಾ ಸಂಘಗಳು, ಆಟೋ ಹಾಗೂ ವಿವಿಧ ವಾಹನ ಚಾಲಕರು, ಯುವ ಸಂಘಟನೆಗಳು ಮತ್ತು ನಾಗರಿಕ ಸಮಿತಿಗಳು ಸೇರಿದಂತೆ ಬೇರೆಲ್ಲ ಜನ ಸಮುದಾಯಗಳ ಸಭೆಗಳು ಆಗಬೇಕು. ಎಲ್ಲ ಶಾಲೆಗಳ ಶಿಕ್ಷಕರ ಹಾಗೂ ಕಾಲೇಜು ಉಪನ್ಯಾಸಕರ ಸಭೆಗಳು ಆಗಬೇಕು ಎಂದು ಸಚಿವರು ಶಾಸಕರು ಸಲಹೆ ಮಾಡಿದರು. ವಾಲ್ಮೀಕಿ ವಿಶ್ವವಿದ್ಯಾಲಯ ಸೇರಿದಂತೆ ಮಹತ್ವದ ಬೇರೆ ಬೇರೆ ವಿದ್ಯಾ ಸಂಸ್ಥೆಗಳಲ್ಲಿ ಸಹ ಬೇರೆ ಬೇರೆ ಕಾರ್ಯಕ್ರಮಗಳ ಆಯೋಜನೆ ಮಾಡಲು ಸಲಹೆ ಮಾಡಿದರು.

ಉತ್ಸವದ ಲೋಗೋ ವೀಕ್ಷಣೆ: ಸಭೆಯಲ್ಲಿ ಮೊದಲಿಗೆ ರಾಯಚೂರು ಉತ್ಸವದ ಲೋಗೊ ವೀಕ್ಷಣೆ ನಡೆಯಿತು. ಮುಖ್ಯ ಕಾರ್ಯಕ್ರಮದ ವೇದಿಕೆ ಹಾಗೂ ಹೆಸರಾಂತ ಕಲಾವಿದರು ಭಾಗಿಯಾಗುವ ಬೃಹತ್ ವೇದಿಕೆಗಳ ಪ್ರಾತ್ಯಕ್ಷಿಕೆಯ ವೀಕ್ಷಣೆಯ ನಡೆಯಿತು.

ಈ ವೇಳೆ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಮಾತನಾಡಿ, ಹತ್ತಾರು ವರ್ಷಗಳ ನಂತರ ಉತ್ಸವ ನಡೆಯುತ್ತಿದೆ. ಹಾಗಾಗಿ ಎಲ್ಲರನ್ನು ಒಳಗೊಂಡು ಉತ್ಸವ ನಡೆಯಬೇಕು. ಅಧಿಕಾರಿಗಳು ಉತ್ಸವದ ಕಾರ್ಯಗಳನ್ನು ಹಗರುವಾಗಿ ತೆಗೆದುಕೊಳ್ಳಬಾರದು. ಇದು ರಾಯಚೂರು ಸಿಟಿ ಉತ್ಸವ ಅಲ್ಲ; ಜಿಲ್ಲಾ ಉತ್ಸವವಾಗಿದೆ.

ಹಾಗಾಗಿ ಎಲ್ಲರೂ ಪಕ್ಷಬೇಧ ಮರೆತು ಒಗ್ಗೂಡಿ ಉತ್ಸವ ಮಾಡೋಣ ಎಂದು ಸಲಹೆ ಮಾಡಿದರು.ಉತ್ಸವ ಬೇರೆ ಬೇರೆ ರೀತಿ ನಡೆಯುತ್ತದೆ. ಕ್ರೀಡಾ ಚಟುವಟಿಕೆ ಈಗ ಆರಂಭವಾಗಿವೆ. ರಾಜ್ಯಮಟ್ಟದ ವಾಲಿಬಾಲ್, ಕಬ್ಬಡ್ಡಿ ಪಂದ್ಯ ನಡೆಯಲಿವೆ. ಸೈಕ್ಲಿಂಗ್ ಮ್ಯಾರಾಥಾನ್, ಸೈಕ್ಲಿಂಗ್ ಓಟ, ಕುಸ್ತಿ ಪಂದ್ಯ, ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಗಳು ನಡೆಯಲಿವೆ. ಜನವರಿ 29ರಂದು ಬೆಳಗ್ಗೆ ಮೆರವಣಿಗೆ, ಸಂಜೆ 5ರಿಂದ ಉತ್ಸವದ ಉದ್ಘಾಟನೆ ನಡೆಯಲಿದೆ.

# ಸಹಿ ಸಂಗ್ರಹ ಸ್ವಚ್ಛತಾ ಓಟಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯು ವಿಶೇಷವಾಗಿ ಆಯೋಜಿಸಿರುವ ವಿವಿಧ ಐಇಸಿ ಚಟುವಟಿಕೆಗಳ ಕಾರ್ಯಕ್ರಮಕ್ಕೆ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಯಚೂರು ಮಹಾನಗರ ಪಾಲಿಕೆಯಿಂದ ರಾಯಚೂರು ನಗರದ ಸ್ವಚ್ಛತಾ ಅಭಿಯಾನದ ಸಹಿ ಸಂಗ್ರಹ ಅಭಿಯಾನಕ್ಕೆ ಸಚಿವರು ಹಾಗೂ ಶಾಸಕರು ಸಹಿ ಮಾಡಿ ಚಾಲನೆ ನೀಡಿದರು.ರಾಯಚೂರ ನಗರ ಶುಚಿತ್ವಕ್ಕಾಗಿ ಜನವರಿ 12ರಂದು ಆಯೋಜಿಸಿರುವ ಸ್ವಚ್ಛತಾ ಓಟದ ಅಂಗವಾಗಿ ರೂಪಿಸಲಾಗಿದ್ದ ಸೆಲ್ಫಿ ಸ್ಟ್ಯಾಂಡನಲ್ಲಿ ಸಚಿವರು ಹಾಗೂ ಶಾಸಕರು ಭಾವಚಿತ್ರ ತೆಗೆಯಿಸಿಕೊಂಡರು. ಇದೆ ವೇಳೆ ವೇದಿಕೆಯ ಕಾರ್ಯಕ್ರಮ ನಡೆಯಿತು.




ಸಚಿವರು ಹಾಗೂ ಶಾಸಕರು ಮತ್ತು ಅಧಿಕಾರಿಗಳು ಸ್ವಚ್ಛತಾ ಓಟ ಸಂದೇಶದ ಕ್ಯಾಪ್ ಟಿ–ಶರ್ಟ್ ಬಿಡುಗಡೆ ಮಾಡಿದರು. 2026ರ ನೂತನ ಕ್ಯಾಲೆಂಡರ್ ಗಳನ್ನು ಸಹ ಲೋಕಾರ್ಪಣೆ ಮಾಡಿದರು. ಇದೆ ವೇಳೆ ಸ್ವಚ್ಛತಾ ಓಟದ ಪೋಸ್ಟರಗಳನ್ನು ಸಹ ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್, ಬಸನಗೌಡ ದದ್ದಲ್, ಹಂಪನಗೌಡ ಬಾದರ್ಲಿ, ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷ ಗಿರಿ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಪಾಲಿಕೆಯ ವಲಯ ಆಯುಕ್ತರಾದ ಮಲ್ಲಿಕಾರ್ಜುನ ಬಿ.ಎಂ., ಪಾಲಿಕೆಯ ಅಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ ಇತರರು ಇದ್ದರು.

# ಸ್ವಚ್ಛತಾ ವಾಹನಗಳಿಗೆ ಸಚಿವರಿಂದ ಚಾಲನೆ




• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ನಗರ ಸ್ವಚ್ಛತೆಗೆ ಖರೀದಿಸಿದ ಸ್ವೀಪಿಂಗ್ ಯಂತ್ರ, ಒಳಚರಂಡಿ ನಿರ್ವಹಣೆಯ ರೆಹಿಕಲ್ ಮೌಂಟೆಡ್ ರೋಬೋಟ್ ಯಂತ್ರಕ್ಕೆ ಹಾಗೂ ಸ್ವಚ್ಛ ಭಾರತ ಮಿಷನ್ 2.0 ಅಡಿಯಲ್ಲಿ ವಿವಿಧ ಐಇಸಿ ಚಟುವಟಿಕೆಗಳಿಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್

ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.

ನಗರದ ನೂತನ ಜಿಲ್ಲಾಧಿಕಾರಿಗಳ ಕಚೇ–ರಿಯ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಯಚರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್. ಶಿವರಾಜ ಪಾಟೀಲ್,

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ

ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಶಾಸಕರಾದ ಎ.ವಸಂತಕುಮಾರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷ ಗಿರಿ,

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ,

ಪಾಲಿಕೆಯ ಸಮಿತಿ ಕಾರ್ಯದರ್ಶಿ ಕೃಷ್ಣ ಶಾವಂತಗೇರಿ, ಪಾಲಿಕೆಯ ಅಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ ಇತರರು ಇದ್ದರು.

# ಅಧ್ಯಕ್ಷ ಉಪಾಧ್ಯಕ್ಷ ಕಾರ್ಯದರ್ಶಿಯಾಗಿ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು :

ತಾಲೂಕಿನ ಬಹುಜನ ಸಮಾಜ ಪಾರ್ಟಿ, ನೂತನವಾಗಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾಧ್ಯಕ್ಷರಾದ ಚಂದ್ರಶೇಖರ್ ತಿಳಿಸಿದ್ದಾರೆ

ನಗರದ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕರೆಯಲಾಗಿದೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ತಾಲೂಕಿನ ನೂತನ ಅಧ್ಯಕ್ಷರಾಗಿ ಕೆಎರ್. ಸಿ ಇಲಾಖೆಯ ನಿವೃತ್ತ ಅಧಿಕಾರಿ ಕೃಷ್ಣ ಎಂ ಬೀಜಗನಹಳ್ಳಿ ಉಪಾಧ್ಯಕ್ಷರಾಗಿ ಚಂದ್ರೇಗೌಡ ಮೂಕನ ಹಳ್ಳಿ ಪ್ರಧಾನ ಕಾರ್ಯದರ್ಶಿಯಾಗಿ ಜಯರಾಮ್ ನೆಲ್ಲೂರು ಪಾಲ ತಾಲೂಕು ಉಸ್ತುವಾರಿಯಾಗಿ ಮಂಜುನಾಥ್ ಹಳೇಬೀಡು ಖಜಾಂಚಿ ಲೋಕೇಶ್ ಜಿಲ್ಲಾ ಕಾರ್ಯದರ್ಶಿಯಾಗಿ. ಕೃಷ್ಣಪ್ಪ ಕಚೇರಿಯ ಕಾರ್ಯದರ್ಶಿಯಾಗಿ ನರಸಿಂಹ ಹಳೇಬೀಡು ನಗರದ ಅಧ್ಯಕ್ಷರಾಗಿ ಮುಬಾರಕ್ ರವರಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯಸ್ಥಳೀಯ. ಸಂಸ್ಥೆ ಮುಂಬರುವ ಚುನಾವಣೆಗೆ ನಮ್ಮ ಪಕ್ಷದ ಸಿದ್ಧಾಂತಗಳನ್ನು ಒಪ್ಪಿಕೊಂಡು ಬಿಎಸ್ಪಿ ಪಕ್ಷಕ್ಕೆ ಬರುವವರಿಗೆ ನಾವು ಆಹ್ವಾನಿಸುತ್ತೇವೆ ಅವರಿಗೆ ಚುನಾವಣೆಯನ್ನು ಸ್ಪರ್ಧಿಸಲು ಅವಕಾಶವನ್ನು ಮಾಡಿಕೊಡುತ್ತೇವೆ ಎಂದು ತಿಳಿಸಿದ್ದಾರೆ. ಬಿ ಎಸ್ ಪಿ ಪಕ್ಷ ಯಾವುದೇ ಉದ್ಯಮಿಗಳಿಂದ. ಹಾಗೂ ಬಂಡವಾಳ ಶಾಹಿಗಳು ಹಣ ಪಡೆದೆ ಅಧಿಕಾರಕ್ಕೆ ಬಂದಿಲ್ಲ ತಮ್ಮ ಸ್ವಂತ ಬಲದಿಂದ ಅಧಿಕಾರ ಮಾಡಿರುವ ನಮ್ಮ ಬಿ ಎಸ್ ಪಿ ಪಕ್ಷ ಅಧಿಕಾರ ಮಾಡಿದ್ದೇವೆ ಎಂದು ತಿಳಿಸಿದರು.

ಬಿ ಎಸ್ ಪಿ ಪಕ್ಷದ ನಾಯಕರಾದ ಮಾಯಾವತಿ ರವರ ಹುಟ್ಟುಹಬ್ಬಕ್ಕೆ ತಾಲೂಕಿನಲ್ಲಿ ಮನೆಮನೆಗಳಿಗೆ ಭೇಟಿ ನೀಡಿ ದೇಣಿಯನ್ನು ಸಂಗ್ರಹಿಸಲಾಗುವುದು ಹಾಗೂ ನಮ್ಮ ಪಕ್ಷದ ನಾಯಕರಾದ ಮಾಯಾವತಿ ರವರ 69ನೆಯ ಹುಟ್ಟುಹಬ್ಬವನ್ನು ಜನವರಿ 15 ರಂದು ಮೈಸೂರಿನ ಜಗನ್ ಮೋಹನ್ ಪ್ಯಾಲೇಸ್ ಆಚರಿಸಲಾಗಿದೆ. ಸುದ್ದಿಗೋಷ್ಠಿಯಲ್ಲಿ ಬಿಎಸ್ಪಿ ಯ ರಾಜ್ಯ ಕಾರ್ಯದರ್ಶಿ ಭರತ್ ಗೌಡ ಜಿಲ್ಲಾ ಉಸ್ತುವಾರಿ ಬಸವಣ್ಣ ದುಂಡಿಗೆರೆ. ತಾಲೂಕಿನ. ಅಧ್ಯಕ್ಷರು ಕೃಷ್ಣ ಎಂ ಉಪಾಧ್ಯಕ್ಷರಾದ ಚಂದ್ರೇಗೌಡ ಜಿಲ್ಲಾ ಕಾರ್ಯದರ್ಶಿ ರಾಜೇಶ್ ಹಾಗೂ ಇನ್ನಿತರು ಹಾಜರಿದ್ದರು.

# ದೇವಿ ಜಾತ್ರೆಯಲ್ಲಿ ಎಮ್ ಎಲ್ ಸಿ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸೂಗೂರ:

ತಾಲೂಕಿನ ರೊಡಲಬಂಡಾ ದೇವರ ಗಡ್ಡಿ ಗ್ರಾಮದ ಆರಾಧ್ಯ ದೈವ ತಾಯಿ ಜಗನ್ಮಾತೆ ಗಡ್ಡಿ ಗದ್ದೆಮ್ಮ ದೇವಿ ಜಾತ್ರೆಯಲ್ಲಿ ವಿಧಾನಪರಿಷತ್ ಸದಸ್ಯರು ಶರಣಗೌಡ ಪಾಟೀಲ್ ಬಯ್ಯಾಪುರ ಸಾಹೇಬರು ಭಾಗವಹಿಸಿ ತಾಯಿಯ ಆಶೀರ್ವಾದ ಪಡೆದರು.



ಈ ಸಂದರ್ಭದಲ್ಲಿ ಶ್ರೀ ಆಲು ಗುರಿಕಾರ, ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷರಾದ ಶ್ರೀ ಗುಂಡಪ್ಪ ನಾಯಕ, ಶ್ರೀ ಬಸವರಾಜಗೌಡ ಬಸಾಪುರ್, ಖಿಂಕಅಒಖ ಅಧ್ಯಕ್ಷರಾದ ಶ್ರೀ ಶಶಿಧರ ಪಾಟೀಲ್, ಚಂದ್ರಶೇಖರ ಪಾಟೀಲ್, ರಾಮಣ್ಣ ವಂದಲಿ, ಜಗದೀಶಗೌಡ, ಪ್ರಕಾಶ್ ಕುರಿ, ಚನ್ನಾರೆಡ್ಡಿ ಬಿರಾದರ್ ಹಾಗೂ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.

# 25 ವಸಂತಗಳನ್ನು ಪೂರೈಸಿದ ಪ್ರಯುಕ್ತ ಬೆಳ್ಳಿ ಸಂಭ್ರಮ ಉದ್ಘಾಟನೆ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸೂಗೂರ:

ಪಟ್ಟಣದ ಬಸವೇಶ್ವರ ಸ್ವತಂತ್ರ ಕಲಾ ಮತ್ತು ವಿಜ್ಞಾನ ಹಾಗೂ ವಾಣಿಜ್ಯ ಪದವಿ ಪೂರ್ವ**ಮಹಾವಿದ್ಯಾಲಯದ 25 ವಸಂತಗಳನ್ನು ಪೂರೈಸಿದ ಪ್ರಯುಕ್ತ ಬೆಳ್ಳಿ ಸಂಭ್ರಮ ಕಾರ್ಯಕ್ರಮ ಮತ್ತು ಸರ್ದಾರ ವಲ್ಲಭಭಾಯಿ ಪಟೇಲ್ ಬಾಲಕರ ವಸತಿ ನಿಲಯದ ನೂತನ ಕಟ್ಟಡವನ್ನ ಸಣ್ಣ ಕೈಗಾರಿಕೆ ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪ ಗೌಡ ದರ್ಶನಾಪುರ ಮಾಜಿ ಸಚಿವರು ಹಾಗೂ ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಸನ್ಮಾನ್ಯ ಅಮರೇಗೌಡ ಪಾಟೀಲ್ ಬಯ್ಯಾಪುರ ಸಾಹೇಬರು ಅವರೊಂದಿಗೆ ವಿಧಾನಪರಿಷತ್ ಸದಸ್ಯರು ಶರಣಗೌಡ ಪಾಟೀಲ್ ಬಯ್ಯಾಪುರ ಉದ್ಘಾಟಿಸಿದ್ದರು

ಈ ಸಂದರ್ಭದಲ್ಲಿ ಶಾಸಕರಾದ ಮಾನಪ್ಪ ಡಿ. ವಜ್ಜಲ್. ಸದಸ್ಯರು ಶಶಿಲ್ ಜಿ.ನಮೋಶಿ ಆಡಳಿತಾಧಿಕಾರಿಗಳು ಮತ್ತು ವೀರಶೈವ ವಿದ್ಯಾವರ್ಧಕ ಸಂಘ.(ರಿ) ಲಿಂಗಸಗೂರು ಬಸವಂತರಾಯ ಕುರಿ, ಭೂಪನಗೌಡ ಕರಡಕಲ್, ಹಾಗೂ ಕಾಂಗ್ರೆಸ್ ಮುಖಂಡರು ಶಿಕ್ಷಕರ.ವಿದ್ಯಾರ್ಥಿಗಳು. ಹಾಗೂ ಸಾರ್ವಜನಿಕರು ಉಪಸ್ಥಿತಿರಿದ್ದರು.

# ವಾಲ್ಮೀಕಿ ಪುತ್ತಳಿ ಅನಾವರಣ ತಾತ್ಕಾಲಿಕ ಮುಂದೂಡಲಾಗಿದೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ನಗರದ ಅಹಂಬಾವಿ ಪ್ರದೇಶದ ಗಂಗಾವತಿ ಶಾಸಕ ಗಾಲಿ ಜನಾರ್ಧನ್ ರೆಡ್ಡಿ ಅವರ ನಿವಾಸದ ಬಳಿ ಗುರುವಾರ ರಾತ್ರಿ ಸಂಭವಿಸಿದ ಎರಡು ಗುಂಪಿನ ಮಧ್ಯೆ ಘರ್ಷಣೆ, ಗುಂಡಿನ ದಾಳಿ ಹಿನ್ನೆಲೆಯಲ್ಲಿ ಜ.3 ರಂದು ನಗರದ ಎಸ್ಪಿ ವೃತ್ತದ ಬಳಿ ನಡೆಯಬೇಕಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಅವರ ಪುತ್ತಳಿ ಅನಾವರಣ ಕಾರ್ಯಕ್ರಮವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಈ ಕಾರ್ಯಕ್ರಮಕ್ಕೆ ಸಂಬಂಧಿಸಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಮಾಜಿ ಸಚಿವ, ಶಾಸಕ ಬಿ.ನಾಗೇಂದ್ರ, ಸಸದ ಈ.ತುಕಾರಾಂ, ಶಾಸಕರಾದ ಜೇ.ಎನ್.ಗಣೇಶ್, ಬೀ.ಎಂ.ನಾಗರಾಜ್, ಅನ್ನಪೂರ್ಣ ತುಕಾರಾಂ, ಸೇರಿದಂತೆ ಸಮಾಜದ ಎಲ್ಲ ಬಾಂಧವರು ಸಿದ್ಧತೆ ಬಹುತೇಕ ಪೂರ್ಣಗೊಳಿಸಿದ್ದರು. ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದ ಪುರಿ ಸ್ವಾಮೀಜಿ, ಸಚಿವರಾದ ಸತೀಶ್ ಜಾರಕಿಹೊಳಿ, ಜಮೀರ್ ಅಹ್ಮದ್ ಖಾನ್, ಮಾಜಿ ಸಚಿವ ಎಂ.ರಾಜಣ್ಣ ಸೇರಿದಂತೆ ಅನೇಕ ಜನ ಘಟಾನುಘಟಿ ನಾಯಕರು ಕಾರ್ಯಕ್ರಮಕ್ಕೆ ಬರಲು ಸಮಯ ನಿಗದಿಯಾಗಿತ್ತು. ನಗರ ಸಂಪೂರ್ಣ ಕೇಸರಿಮಯ, ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ವೇದಿಕೆ ಸಿದ್ಧತೆ ಬಹುತೇಕ ಪೂರ್ಣಗೊಂಡಿತ್ತು. ಕಾಂಗ್ರೆಸ್ ಹಾಗೂ ಬಿಜೆಪಿ ಕಾರ್ಯಕರ್ತರ ಮಧ್ಯೆ ನಡೆದ ಘರ್ಷಣೆ, ಗುಂಡಿನ ದಾಳಿ ಹಿನ್ನೆಲೆಯಲ್ಲಿ ಮುಂಜಾಗ್ರತ ಕ್ರಮವಾಗಿ ತಾತ್ಕಾಲಿಕವಾಗಿ ಕಾರ್ಯಕ್ರಮವನ್ನು ಮುಂದೂಡಲಾಗಿದೆ. ಘಟನೆ ಸ್ಥಳದಲ್ಲಿ 200 ಮೀಟರ್ ವ್ಯಾಪ್ತಿಯಲ್ಲಿ 144 ಸೆಕ್ಷನ್ ವಿಧಿಸಲಾಗಿದ್ದು, ಸ್ಥಳದಲ್ಲಿ ಪೋಲೀಸ್ ರನ್ನು ನಿಯೋಜಿಸಲಾಗಿದೆ.

# ಅಲೆಮಾರಿ ಬುಡಕಟ್ಟು ಸಮಾಜದ ಅಸ್ತಿತ್ವಕ್ಕೆ ಶಿಕ್ಷಣವೇ ಶಕ್ತಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಬುಡಕಟ್ಟು ಮಹಾಸಭಾ (ನೋಂದಾಯಿತ) ರಾಯಚೂರು ಜಿಲ್ಲಾ ಘಟಕದ ವತಿಯಿಂದ ನಗರದ ಎಲ್.ಬಿ.ಎಸ್.ನಗರದಲ್ಲಿನ ಸಿಂಧೋಳ್ ಸಮಾಜ ಓಣಿಯಲ್ಲಿ ಭಾನುವಾರ ಮಹತ್ವದ ಸಭೆ ನಡೆಯಿತು.ಸಭೆಗೆ ಸಂಸ್ಥಾಪಕ ಗೌರವಾಧ್ಯಕ್ಷ ಡಾ. ಸಿ.ಎಸ್. ದ್ವಾರಕನಾಥ್ (ಹಿರಿಯ ವಕೀಲರು ಹಾಗೂ ಮಾಜಿ ಅಧ್ಯಕ್ಷರು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ಬೆಂಗಳೂರು) ಮುಖ್ಯ ಅತಿಥಿಯಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಈ ಸಂದರ್ಭದಲ್ಲಿ ಸಮಾಜದ ವತಿಯಿಂದ ಸನ್ಮಾನಿಸಲಾಯಿತು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಅಧ್ಯಕ್ಷ ರಂಗಮುನಿದಾಸ ಅವರು, ಸ್ವಾತಂತ್ರ್ಯ ನಂತರವೂ ಗುರುತಿಸದ ಅಲೆಮಾರಿ ಹಾಗೂ ಬುಡಕಟ್ಟು ಜನಾಂಗಗಳನ್ನು ರಾಜ್ಯದ



ಮೂಲೆಮೂಲೆಗಳಲ್ಲಿ ಸಂಚರಿಸಿ ಗುರುತಿಸಿ ಸರ್ಕಾರದ ಮುಂದೆ ಪಟ್ಟಿ ಮಂಡಿಸಿದ ಶ್ರೇಯಸ್ಸು ಡಾ. ಸಿ.ಎಸ್. ದ್ವಾರಕನಾಥ್ ಅವರಿಗೆ ಸಲ್ಲುತ್ತದೆ ಎಂದು ಹೇಳಿದರು. ಅಲೆಮಾರಿ ಬುಡಕಟ್ಟು ಸಮಾಜದ ಅಸ್ತಿತ್ವಕ್ಕೆ ಅವರು ನೀಡಿದ ಕೊಡುಗೆ ಇತಿಹಾಸಾತ್ಮಕವಾಗಿದೆ ಎಂದರು.

ಪ್ರಧಾನ ಕಾರ್ಯದರ್ಶಿ ಹುಸೇನಪ್ಪ ಬಿ. ವಿಭೂತಿ ಮಾತನಾಡಿ, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಅಲೆಮಾರಿ ಬುಡಕಟ್ಟು ಸಮಾಜದ ಸ್ಥಿತಿಗತಿ ಮತ್ತು ನೋವುಗಳನ್ನು ಸರ್ಕಾರದ ಗಮನಕ್ಕೆ ತಂದು ಮಾನ್ಯತೆ ದೊರಕಿಸಲು ನಡೆದ ಹೋರಾಟವನ್ನು ಸ್ಮರಿಸಿದರು. ಮುಖ್ಯ ಅತಿಥಿ ಡಾ. ಸಿ.ಎಸ್. ದ್ವಾರಕನಾಥ್ ಮಾತನಾಡಿ, ಅಲೆಮಾರಿ ಹಾಗೂ ಬುಡಕಟ್ಟು ಜನಾಂಗಗಳ ಅಭಿವೃದ್ಧಿಗೆ ವಸತಿ, ಭೂಮಿ ಮತ್ತು ಶಿಕ್ಷಣ ಅನಿವಾರ್ಯ. ಸಮಾಜ ಸಂಘಟಿತರಾಗಿ ಪ್ರತಿಯೊಂದು ಹೋರಾಟಕ್ಕೂ ಸಿದ್ಧರಾಗಬೇಕು. ಪ್ರತಿಯೊಂದು ಕುಟುಂಬವೂ ತಮ್ಮ ಮಕ್ಕಳಿಗೆ ಶಿಕ್ಷಣ ನೀಡಿ, ಐಎಎಸ್‌ಕೆಎಎಸ್‌ಐಪಿಎಸ್ ಹುದ್ದೆಗಳತ್ತ ಕೊಂಡೊಯ್ಯುವ ಗುರಿ ಹೊಂದಬೇಕು ಎಂದು ಕರೆ ನೀಡಿದರು. "ನಮ್ಮನ್ನು ರಕ್ಷಿಸುವುದು ದೇವರು ಅಲ್ಲ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನ. ಸಂವಿಧಾನದ ಅಡಿಯಲ್ಲಿ ಹಕ್ಕುಗಳನ್ನು ಪಡೆದುಕೊಳ್ಳಲು ಶಿಕ್ಷಣವೇ ಮುಖ್ಯ ಶಕ್ತಿ. ಮೌಢ್ಯ ತೊರೆದು ಹೆಣ್ಣು ಮಕ್ಕಳಿಗೂ ಸಮಾನ ಶಿಕ್ಷಣ ನೀಡಬೇಕು" ಎಂದು ಅವರು ಹೇಳಿದರು.

ಸಭೆಯಲ್ಲಿ ಸಿಂಧೋಳ್ ಸಮಾಜದ ಹಿರಿಯರು, ಯುವಕರು, ಮಹಿಳೆಯರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಸಿಂಹಾದ್ರಿ (ಕಾರ್ಯಾಧ್ಯಕ್ಷರು), ಶ್ರೀನಿವಾಸ (ಉಪಾಧ್ಯಕ್ಷರು), ಮಲ್ಲೇಶ ನಾಯಕ, ಡೊಕ್ಕ ಜಂಬಣ್ಣ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ತರಬೇತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ಇಲ್ಲಿನ ಪ್ರವಾಸೋದ್ಯಮ ಇಲಾಖೆಯಿಂದ 2024–25ನೇ ಸಾಲಿನಲ್ಲಿ ಜಿಲ್ಲೆಯ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿದ ವಿದ್ಯಾವಂತ ನಿರುದ್ಯೋಗಿ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ ಅತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ, ಆಸಕ್ತ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟಪಂಗಡ ಅಭ್ಯರ್ಥಿಗಳು ಜನವರಿ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ: ಪ್ರವಾಸೋದ್ಯಮ ಇಲಾಖೆ, ಗಣೇಶ ಗುಡಿ ಹತ್ತಿರ, ನಿಜಲಿಂಗಪ್ಪ ಕಾಲೋನಿ, ರಾಯಚೂರು–584101, ದೂರವಾಣಿ ಸಂಖ್ಯೆ: 08532–200677ಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರಾದ ನಜೀರಅಮದ ಕನವಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಸ್ಲಿಂಮರು ಮಾಡುವ ಧಾರ್ಮಿಕ ಸಭೆ ಸರ್ವಜನರ ಏಳಿಗೆಗಾಗಿ: ಅರುಣ್ ಕುಮಾರ್ ಪಾಟೀಲ್



• ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು:

ತಾಲೂಕಿನ ಜನೆವರಿ 3 ರಂದು ರಾಜ್ಯದ ವಿವಿಧೆಡೆ ಮುಸ್ಲಿಮರು ಒಂದೇಡೆ ಸೇರಿ ನಡೆಸುವ ಧಾರ್ಮಿಕ ಸಭೆ ಸರ್ವಜನಾಂಗದ ಏಳಿಗೆಗಾಗಿ ಎಂದು ಕೆ ಕೆ ಆರ್ ಟಿ ಸಿ ವಿಭಾಗಿ ಅಧ್ಯಕ್ಷ ಅರುಣ್ ಕುಮಾರ್ ಪಾಟೀಲ್ ಹೇಳಿದರು.

ಅವರು ಲಿಂಗಸುಗೂರು ಪಟ್ಟಣದ ಕಲುಬುರ್ಗಿ ರಸ್ತೆಯ ಪಕ್ಕದಲ್ಲಿ ಮುಸ್ಲಿಂ ಸಮಾಜದಿಂದ ಹಮ್ಮಿಕೊಳ್ಳಾಗಿದ್ದ ಇಜತೆಮಾ ಸ್ಥಳಕ್ಕೆ ಭೇಟಿ ನೀಡಿ ಧಾರ್ಮಿಕ ಸಭೆ ಹಮ್ಮಿಕೊಂಡಿರುವುದು ಸಂತಸವಾಗಿದ್ದು ರಾಯಚೂರು ಹಾಗೂ ಯಾದಗಿರಿ ಜಿಲ್ಲೆಯ ಮುಸ್ಲಿಮ್ ಬಾಂಧವರು ಸೇರಿ ಇಂತಹ ಬೃಹತ್ ಪ್ರಮಾಣದ ವೇದಿಕೆಯಲ್ಲಿ ರೈತಾಪಿ ವರ್ಗ ಸೇರಿದಂತೆ ಸರ್ವರ ಶಾಂತಿಯನ್ನು ಬಯಸಿ ಅಲ್ಲಾಹ್ನನಲ್ಲಿ ಪ್ರಾರ್ಥನೆ ಮಾಡುತ್ತಿರುವುದು ಸಂತಸದ ಸಂಗತಿ ಆಗಿದೆ. ಎಂದು ಅವರು ಹೇಳಿದರು ಈಸಂದರ್ಭದಲ್ಲಿ ಕೆ ಕೆ ಆರ್ ಟಿ ಅಧ್ಯಕ್ಷರಿಗೆ ಮುಸ್ಲಿಂ ಸಮುದಾಯದವರು ಸನ್ಮಾನಿ ಗೌರವಿಸಲಾಯಿತು .

# ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನದ ಸಾಂಸ್ಕೃತಿಕ ಕಾರ್ಯಕ್ರಮ ಸಂಪನ್ನ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ:

ತಾಲೂಕಿನ ಅಗಸೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಿರಿಯ ಪ್ರಾಥಮಿಕ ಶಾಲೆ ಹೊನ್ನಳ್ಳಿಯ ಶಾಲಾ ಆವರಣದಲ್ಲಿ ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ ಕಾರವಾರರವರು ಗಾಯನ, ನರ್ತನ, ರಂಗೋಲಿ ಹಾಗೂ ಹಗ್ಗಜಗ್ಗಾಟ ಸ್ಪರ್ಧೆ ಮತ್ತು ಸಂಗೀತ ರಸಮಂಜರಿ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ಕಾಂಗ್ರೆಸ್ ಯುವ ನಾಯಕ ಗೋಪಾಲಕೃಷ್ಣ ನಾಯಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ ಕಾರವಾರ ಸಂಘಟನೆ ಹಿಂದುಳಿದ ಗ್ರಾಮಗಳಲ್ಲಿ ವಿದ್ಯಾರ್ಥಿಗಳು ಹಾಗೂ ನಾಗರಿಕರ ಪ್ರತಿಭೆ ಹೊರಹೊಮ್ಮಿಸುವ ಕಾರ್ಯಕ್ರಮ ಏರ್ಪಡಿಸಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ, ಜನರಿಗೆ ಸ್ಫೂರ್ತಿ ನೀಡಿ ಅಂತರಂಗದಲ್ಲಿ ಹುದುಗಿರುವ ಪ್ರತಿಭೆಯನ್ನು ಹೊರಹಾಕುವ ಅವಕಾಶ ಕಲ್ಪಿಸಿಕೊಟ್ಟಿದ್ದು ಮೆಚ್ಚುವಂತದ್ದು. ಪಟ್ಟಣ ಪ್ರದೇಶದಲ್ಲಿ ಕಾರ್ಯಕ್ರಮಗಳು ನಡೆಯುತ್ತಲೇ ಇರುತ್ತವೆ. ಆದರೆ ಇಲ್ಲಿಯ ಗ್ರಾಮೀಣ ಭಾಗದ ಜನರಿಗೆ ಇಂತಹ ರಸದೌತಣವನ್ನು ನೀಡಲು ಹಾಕಿಕೊಂಡ ಕಾರ್ಯಕ್ರಮ ಶ್ಲಾಘನೀಯವಾದದು.



ಇಂತಹ ಕಾರ್ಯಕ್ರಮಗಳಿಗೆ ನನ್ನ ಸಂಪೂರ್ಣ ತನು–ಮನ–ಧನದ ಸಹಕಾರವಿದೆ ಎಂದು ನುಡಿದರು.

ಅಗಸೂರು ಗ್ರಾ.ಪಂ. ಅಧ್ಯಕ್ಷೆ ನಿರ್ಮಲಾ ನಾಯಕ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಪಾರಿತೋಷಕ ಉದ್ಘಾಟನೆ ಮಾಡಿ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಮಹಾದೇವ ಗೌಡ ಅಧ್ಯಕ್ಷರು ಎಸ್‌ಡಿಎಂಸಿ ಹಿ.ಪ್ರಾ.ಶಾಲೆ ಹೊನ್ನಳ್ಳಿ, ಯಶ್ವಂತ ಗೌಡ ಉಪಾಧ್ಯಕ್ಷರು ಗ್ರಾ.ಪಂ.ಅಗಸೂರು, ಕುಸುಮಾ ನಾಯಕ ಮುಖ್ಯಾಧ್ಯಾಪಕರು, ಶಿಕ್ಷಕರಾದ ಶೈಲಜಾ ನಾಯಕ, ಸಣ್ಣಪ್ಪ ನಾಯಕ, ಗ್ರಾ.ಪಂ.ಸದಸ್ಯರಾದ ಶ್ವೇತಾ ಗೌಡ, ಆನಂದು ಗೌಡ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಊರಿನ ಪ್ರಮುಖ ಹಾಗೂ ಕೃಷಿಕ, ಯಕ್ಷಗಾನ ಕಲಾವಿದ ನಾಗೇಶ ಮಾಣಿ ಗೌಡರನ್ನು ಸನ್ಮಾನಿಸಲಾಯಿತು. ಗಾಯನ, ನರ್ತನ, ರಂಗೋಲಿ ಹಾಗೂ ಹಗ್ಗಜಗ್ಗಾಟ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಪ್ರತಿಷ್ಠಾನದ ಅಧ್ಯಕ್ಷ ಡಾ. ಪ್ರಕಾಶ ನಾಯ್ಕ ಸ್ವಾಗತಿಸಿದರು. ಸಂಚಾಲಕ ಪ್ರವೀಣ ನಾಯಕ ಪ್ರಾಸ್ತಾವಿಕ ಮಾತನಾಡಿದರು.

ಯಕ್ಷಗಾನ ಕಲಾವಿದ ಮಂಜು ಗೌಡ ನಿರೂಪಿಸಿದರು. ಪ್ರತಿಷ್ಠಾನದ ಸದಸ್ಯ ಗಣಪತಿ ಪಟಗಾರ ಹಾಗೂ ಮೋಹನ ಗೌಡ ಮೇಲು ಉಸ್ತುವರಿಯನ್ನು ನಿರ್ವಹಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ಸಂಗೀತ ಕಲಾ ತಂಡದವರಿಂದ ರಸಮಂಜರಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ವೃಕ್ಷಮಾತೆ ಫೌಂಡೇಶನ್ ಹೊನ್ನಳ್ಳಿಯ ಚಂದ್ರಹಾಸ ಗೌಡ ಹಾಗೂ ಸಂತೋಷ ಗೌಡರು ಗಣ್ಯರು ಹಾಗೂ ಕಲಾವಿದರಿಗೆ ಊಟದ ವ್ಯವಸ್ಥೆ ಮಾಡಿದ್ದರು. ಕಾರ್ಯಕ್ರಮಕ್ಕೆ ಸಹಕರಿಸಿದ ಎಲ್ಲರನ್ನು ಪ್ರಕಾಶ ನಾಯ್ಕ ವಂದಿಸಿದರು.

# ಸಕಾಲದಲ್ಲಿ ಮಾಹಿತಿ ನೀಡಿ, ದಂಡದಿಂದ ಮುಕ್ತರಾಗಿ :ಆಯುಕ್ತರ

ಮಲ್ಲಮ್ಮ ನುಡಿ ವಾರ್ತೆ,ಬಳ್ಳಾರಿ: ವೈಯಕ್ತಿಕ ಮಾಹಿತಿ ಹೊರತುಪಡಿಸಿ, ಸರ್ಕಾರದ ಯೋಜನೆಗಳು, ಸೌಲಭ್ಯಗಳ ಹಿತಾಸಕ್ತಿಗೆ ಸಂಬಂಧಿಸಿದಂತೆ ಮಾಹಿತಿ ಪಡೆಯುವುದು ಸಾರ್ವಜನಿಕರ ಮೂಲಭೂತ ಹಕ್ಕಾಗಿದ್ದು, ಅರ್ಜಿ ಸಲ್ಲಿಸಿದ ಸಾರ್ವಜನಿಕರಿಗೆ ಅಧಿಕಾರಿಗಳು ಸಕಾಲದಲ್ಲಿ ಮಾಹಿತಿ ನೀಡುವ ಮೂಲಕ ದಂಡದಿಂದ ಮುಕ್ತರಾಗಬೇಕು ಎಂದು ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ಕಲಬುರಗಿ ಪೀಠದ ಬಿ.ವೆಂಕಟ್ ಸಿಂಗ್, ಬೆಂಗಳೂರು ಪೀಠದ ರುದ್ರಣ್ಣ ಹರ್ತಿಕೋಟೆ, ರಾಜಶೇಖರ್.ಎಸ್ ಅವರು ಸಲಹೆ ನೀಡಿದರು. ಕರ್ನಾಟಕ ಮಾಹಿತಿ ಆಯೋಗದ ನಿರ್ದೇಶನದಂತೆ ಜಿಲ್ಲಾಡಳಿತ ವತಿಯಿಂದ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿ–ಸಿಬ್ಬಂದಿಗೆ ಶನಿವಾರ ಏರ್ಪಡಿಸಿದ್ದ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಜಿಲ್ಲಾ ಮಟ್ಟದ ಕಾರ್ಯಾಗಾರ ಮತ್ತು ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾಹಿತಿ ಅಧಿಕಾರಿಯು ಯಾವುದೇ ಸಮಂಜಸ ಕಾರಣವಿಲ್ಲದೇ ಮಾಹಿತಿಯನ್ನು ನೀಡದಿದ್ದಲ್ಲಿ ಅಥವಾ ದುರುದ್ಧೇಶದಿಂದ ತಪ್ಪಾದ ಮಾಹಿತಿ ನೀಡಿದ್ದಲ್ಲಿ ದಂಡ ಪಾವತಿಸಬೇಕಾಗುತ್ತದೆ, ಜೊತೆಗೆ ಶಿಸ್ತುಕ್ರಮ ಜರುಗಿಸಬಹುದಾಗಿದೆ. ಹಾಗಾಗಿ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ನಿಗಧಿತ ಕಾಲಾವಧಿಯೊಳಗೆ ಸಾರ್ವಜನಿಕರಿಗೆ ಮಾಹಿತಿ ನೀಡುವ ಮಾಹಿತಿ ಹೊಂದಬೇಕು ಎಂದು ರಾಜ್ಯ ಮಾಹಿತಿ ಆಯೋಗದ ಆಯುಕ್ತರುಗಳು ಪ್ರತಿಪಾದಿಸಿದರು.

ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ಕಲಬುರಗಿ ಪೀಠದ ಬಿ.ವೆಂಕಟ್ ಸಿಂಗ್ ಅವರು ಮಾತನಾಡಿ, 2005ರಲ್ಲಿ ದೇಶದಲ್ಲಿಯೇ ಕರ್ನಾಟಕ ರಾಜ್ಯದಲ್ಲಿ ಪ್ರಥಮ ಬಾರಿಗೆ ಮಾಹಿತಿ ಹಕ್ಕು ಕಾಯ್ದೆಯನ್ನು ಜಾರಿಗೊಳಿಸಿ, ಕರ್ನಾಟಕ ಮಾಹಿತಿ ಹಕ್ಕು ಆಯೋಗ ರಚಿಸಲಾಯಿತು ಎಂದು ತಿಳಿಸಿದರು.

ಕಳೆದ ಸಾಲಿನ ಫೆಬ್ರವರಿ ಮಾಹೆಯಲ್ಲಿ 6 ಜನರನ್ನು ರಾಜ್ಯದ ವಿವಿಧ ಪೀಠಗಳಿಗೆ ಮಾಹಿತಿ ಆಯೋಗದ ಆಯುಕ್ತರನ್ನು ನೇಮಕಗೊಳಿಸಿ ರಾಜ್ಯ ಸರ್ಕಾರ ಆದೇಶಿಸಿತು. ರಾಜ್ಯದಲ್ಲಿ ಬಾಕಿ ಇದ್ದ 55 ಸಾವಿರ ಪ್ರಕರಣಗಳಲ್ಲಿ 20 ಸಾವಿರ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿ, ಪ್ರಸ್ತುತ 35 ಸಾವಿರ ಪ್ರಕರಣಗಳು ಬಾಕಿ ಇವೆ ಎಂದು ಆಯುಕ್ತ ಬಿ.ವೆಂಕಟ ಸಿಂಗ್ ಅವರು ವಿವರಿಸಿದರು. ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳ ವ್ಯಾಪ್ತಿಗೆ ಕಲಬುರಗಿ ಪೀಠವು ಕಾರ್ಯನಿರ್ವಹಿಸುತ್ತಿದೆ. ಈ ಭಾಗದಲ್ಲಿ ಮಾಹಿತಿ ಕೋರಿ ಸಲ್ಲಿಕೆಯಾದ ಅರ್ಜಿಗಳನ್ನು ಇಲ್ಲಿ ವಿಚಾರಣೆ ನಡೆಸಲಾಗುತ್ತದೆ. ಕಕ ಭಾಗದ ಕಲಬುರಗಿ ಪೀಠದಲ್ಲಿ 2010 ರಿಂದ 2022 ರವರೆಗೆ ಬಾಕಿ ಇದ್ದ 6,600 ಪ್ರಕರಣಗಳನ್ನೂ 2025 ರ ಡಿ.31 ಕ್ಕೆ ಇತ್ಯರ್ಥಗೊಳಿಸಲಾಗಿದೆ. ಇದೇ ಜ.05 ರಿಂದ 2023 ರಿಂದ ಬಾಕಿ ಇರುವ ಪ್ರಕರಣಗಳನ್ನು ಅಂತ್ಯ ಹಾಡಲು ಉದ್ದೇಶಿಸಲಾಗಿದೆ ಎಂದರು.

# ಮನೆಗಳ ಶಂಕುಸ್ಥಾಪನೆ : ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್



ಮಲ್ಲಮ್ಮ ನುಡಿ ವಾರ್ತೆ,ಬಳ್ಳಾರಿ: ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮದ ಸಿಇಪಿಎಂಐಜೆಡ್ ಯೋಜನೆಯಡಿ ಬಳ್ಳಾರಿ ತಾಲ್ಲೂಕಿನ ಗಣಿಬಾಧಿತ 10 ಗ್ರಾಮಗಳ ವಸತಿ ರಹಿತರಿಗೆ ಕರ್ನಾಟಕ ಪುನಶ್ಚೇತನ ಅಭಿವೃದ್ಧಿ ನಿಗಮದಿಂದ ಅನುಮೋದನೆಯಾದ ಮನೆಗಳ ಶಂಕುಸ್ಥಾಪನೆಯನ್ನು ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಬಳ್ಳಾರಿ ತಾಲ್ಲೂಕಿನ ಬೆಳಗಲ್ ಗ್ರಾಮದಲ್ಲಿ ಭಾನುವಾರ ನೆರವೇರಿಸಿದರು.

ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ ಹಾಗೂ ರಾಜೀವ ಗಾಂಧಿ ವಸತಿ ನಿಗಮ ನಿಯಮಿತದಡಿ ಅನುಷ್ಠಾನಗೊಳ್ಳುವ ಬಳ್ಳಾರಿ ತಾಲ್ಲೂಕಿನ ಗಣಿಬಾಧಿತ 10 ಗ್ರಾಮಗಳಲ್ಲಿ ಅನುಮೋದನೆಯಾದ ಒಟ್ಟು 862 ಮನೆಗಳ ಶಂಕುಸ್ಥಾಪನೆ ಸಚಿವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಡಾ.ಬಾಬು ಜಗಜೀವನ ರಾಮ್ ಚರ್ಮ ಕೈಗಾರಿಕಾ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಗೋನಾಳ್ ಎಂ.ರಾಜಶೇಖರಗೌಡ, ಬೆಳಗಲ್ಲು ಗ್ರಾಪಂ ಅಧ್ಯಕ್ಷೆ ಲಕ್ಷ್ಮೀಭಾಯಿ ಚಂದ್ರ ನಾಯ್ಕ್, ಉಪಾಧ್ಯಕ್ಷೆ ಉಮಾದೇವಿ, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ, ತಾಪಂ ಇಓ ಡಾ.ಶ್ರೀಧರ್ ಐ.ಬಾರಿಕರ ಸೇರಿದಂತೆ ಪಿಡಿಒ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಗುತ್ತಿಗೆದಾರರು, ಸಾರ್ವಜನಿಕರು ಇದ್ದರು.

# ಅಬಕಾರಿ ಸನ್ನದು ನೀಡಲು ಪಾರದರ್ಶಕ ನೀತಿ ಜಾರಿಗೆ: ಬಿ.ಫೌಜಿಯಾ ತರನ್ನುಮ್



- ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ಕಲಬುರಗಿಯ 15 ಸೇರಿದಂತೆ ರಾಜ್ಯದಾದ್ಯಂತ ಖಾಲಿ ಇರುವ ಸಿಎಲ್–2(ಎ) ಹಾಗೂ ಸಿಎಲ್–9(ಎ) ಸೇರಿದಂತೆ 569 ಮದ್ಯದ ಸನ್ನದುಗಳನ್ನು ಇ–ಹರಾಜು ಪ್ರಕ್ರಿಯೆ ಕುರಿತು ಶುಕ್ರವಾರ ಕಲಬುರಗಿ ನಗರದ ಹೆಚ್.ಕೆ.ಇ.ಶಿಕ್ಷಣ ಸಂಸ್ಥೆಯ ಸಿ.ಪಿ.ಎಂ. ಬಾಲಕರ ಹಾಸ್ಟೆಲ್ ಕ್ಯಾಂಪಸ್ ಆವರಣದಲ್ಲಿರುವ ಎಂ.ಆರ್. ಎಂ.ಸಿ. ಎಸ್.ಎ.ಸಿ (ಸ್ಟೂಡೆಂಟ್ ಎಕ್ಟಿವಿಟಿ ಸೆಂಟರ್) ನಲ್ಲಿ ತರಬೇತಿ ಆಯೋಜಿಸಲಾಗಿತ್ತು.

ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಇದೇ ಪ್ರಥಮ ಬಾರಿಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿನ ಘೋಷಣೆಯಂತೆ ಅಬಕಾರಿ ಇಲಾಖೆಯಿಂದ ರಾಜ್ಯದಾದ್ಯಂತ ಖಾಲಿ ಇರುವ 569 ಮದ್ಯದ ಸನ್ನದುಗಳನ್ನು ಪಾರದರ್ಶಕವಾಗಿ ಇ–ಹರಾಜು ಮೂಲಕ ಸನ್ನದುಗಳ ಹರಾಜು ಪ್ರಕ್ರಿಯೆ ನಡೆಸಲಾಗುತ್ತಿದ್ದು, ಕಲಬುರಗಿ ಜಿಲ್ಲೆಯ ಆಸಕ್ತ ಬಿಡ್ಡುದಾರರು ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ ಎಂದರು.

ಅಬಕಾರಿ ಇಲಾಖೆಯಿಂದ ಪ್ರಥಮ ಬಾರಿಗೆ ಇ–ಹರಾಜು ಮೂಲಕ ಲೈಸೆನ್ಸ್ ನೀಡುತ್ತಿರುವುದರಿಂದ ಹರಾಜು ಪ್ರಕ್ರಿಯೆ ಸವಿಸ್ತಾರವಾಗಿ ಮಾಹಿತಿ ನೀಡಲೆಂದೇ ತಾಂತ್ರಿಕ ತರಬೇತಿ ಇಂದಿಲ್ಲಿ ಆಯೋಜಿಸಿದ್ದು, ಜಿಲ್ಲೆಯ ಬಿಡ್ಡುದಾರರು ಇದರ ಲಾಭ ಪಡೆಯಬೇಕೆಂದರಲ್ಲದೆ ಹರಾಜು ಪ್ರಕ್ರಿಯೆ ಕುರಿತು ಏನೇ ಸಂದೇಹಗಳಿದ್ದಲ್ಲಿ ತಾಂತ್ರಿಕ ಅಧಿಕಾರಿಗಳಿಂದ ಕೇಳಿ ತಿಳಿಯಬೇಕೆಂದು ಡಿ.ಸಿ. ತಿಳಿಸಿದರು. ಭಾರತ ಸರ್ಕಾರದ ಸಂಸ್ಥೆಯಾದ ಎಂ.ಎಸ್.ಟಿ.ಸಿ ಲಿಮಿಟೆಡ್ ಸಂಸ್ಥೆಯ https://www.mstc-cecommerce.com ಪೋರ್ಟಲ್ ಮೂಲಕ ಕಲಬುರಗಿ ಜಿಲ್ಲೆಯ ಸನ್ನದುಗಳನ್ನು ಜನವರಿ 13 ರಂದು ಮತ್ತು ಯಾದಗಿರಿ ಜಿಲ್ಲೆಯ ಮದ್ಯದ ಸನ್ನದುಗಳನ್ನು ಜನವರಿ 14 ರಂದು ಇ–ಹರಾಜು ಪ್ರಕ್ರಿಯೆ ನಡೆಸಲಿದ್ದು, ಕಲಬುರಗಿ ಜಿಲ್ಲೆಯ 12 ಸಿ.ಎಲ್–2(ಎ) ಮತ್ತು 3 ಸಿಎಲ್–9(ಎ) ಸೇರಿ ಒಟ್ಟು 15 ಮದ್ಯದ ಸನ್ನದುಗಳನ್ನು ಹಾಗೂ ಯಾದಗಿರಿ ಜಿಲ್ಲೆಯಲ್ಲಿ 6 ಸಿ.ಎಲ್–2(ಎ) ಸನ್ನದುಗಳು ಹಂಚಿಕೆ ಮಾಡಲಾಗುತ್ತಿದೆ.

ಇನ್ನು ಎಂ.ಎಸ್.ಟಿ.ಸಿ. ಸಂಸ್ಥೆ ನಡೆಸುವ ಇ–ಹರಾಜು ಪ್ರಕ್ರಿಯೆ ಕುರಿತು ಸಂಸ್ಥೆಯ ತಾಂತ್ರಿಕ ಅಧಿಕಾರಿಗಳಾದ ಸತೀಶಕುಮಾರ, ಹಾಗೂ ಕೆ. ರವಿ ಹಾಗೂ ಅಬಕಾರಿ ಇಲಾಖೆಯ ಅಧಿಕಾರಿಗಳು ಹಾಜರಿದ್ದ ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳ ಸಾರ್ವಜನಿಕರಿಗೆ ಸಂಪೂರ್ಣ ಮಾಹಿತಿಯನ್ನು ನೀಡಿದರು.

ಅಬಕಾರಿ ಇಲಾಖೆಯ ಕಲಬುರಗಿ ಉಪ ಆಯುಕ್ತ ಸಂಗನಗೌಡ ಪಿ., ಯಾದಗಿರಿ ಉಪ ಆಯುಕ್ತೆ ಶಾರದಾ ಪಿ. ಕೋಲಾಕರ್, ಅಬಕಾರಿ ಅಧೀಕ್ಷಕರುಗಳಾದ ಹನಮಂತರಾಯ ವಜ್ರಮಟ್ಟಿ, ರಾಮನಗೌಡ ಮುದಿಗೌಡರ್, ಇಂದುಬಾಯಿ ಸೇರಿದಂತೆ ಇತರೆ ಅಬಕಾರಿ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿನೂತನ ಬಸ್ಸಗಳಿಗೆ ಸಿಎಂ ಸಮ್ಮುಖದಲ್ಲಿ ಚಾಲನೆ

- ಮಲ್ಲಮ್ಮ ನುಡಿ ವಾರ್ತೆ ರಾಯಚೂರು:

ರಾಜ್ಯದಲ್ಲೇ ಸಿಂಧನೂರು ತಾಲೂಕಿನ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಹೊಸ ಇತಿಹಾಸ ನಿರ್ಮಿಸಿದ್ದಾರೆ.




ಶಾಸಕರ ವಿಶೇಷ ಪ್ರಯತ್ನದಿಂದಾಗಿ ಇನ್ನುಂದೆ ಶಾಲಾ ಕಾಲೇಜುಗಳಿಗೆ ವಿದ್ಯಾರ್ಥಿಗಳು ಬಂದು ಹೋಗಲು ಅನುಕೂಲವಾಗುವಂತೆ ಸಿಂಧನೂರ ತಾಲೂಕಿನ ಪ್ರತಿ ಹಳ್ಳಿಹಳ್ಳಿಗಳ ರಸ್ತೆಗಳಿಗೆ ಹೊಸ 14 ಬಸ್ಸಗಳು ಇಳಿಯಲಿವೆ.

ರಾಯಚೂರು ಜಿಲ್ಲೆಯಲ್ಲಿಯೇ ಸಿಂಧನೂರ ತಾಲೂಕಿನಲ್ಲಿ ದಾಖಲೆಯ ಈ ಬಸ್ ಸೌಕರ್ಯಕ್ಕೆ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ ಅವರು ಜನವರಿ 3ರಂದು ಅಂಬಾಮಠದ ಅವರಣದಲ್ಲಿ ವಿದ್ಯುಕ್ತ ಚಾಲನೆ ನೀಡಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 5 ಕೋಟಿ ರೂ ಅನುದಾನದಲ್ಲಿ ತಿಳಿ ಹಸಿರು ಬಳಿ ಮಿಶ್ರಿತ 10 ಬಸ್ಸಗಳಿಗೆ ಸಾಂಕೇತಿಕವಾಗಿ ಹಸಿರು ನಿಶಾನೆ ತೋರಿದರು.

ಬಸ್ ಗಳಿಗೆ ಅಲಂಕಾರ: ಉದ್ಘಾಟನೆ ಹಿನ್ನೆಲೆಯಲ್ಲಿ ಅಂಬಾಮಠದ ಅಂಗಳದಲ್ಲಿ ನಿಲುಗಡೆಯಾಗಿದ್ದ ಎಲ್ಲ ಬಸಗಳಿಗೆ ಬಲೂನ್ ಕಟ್ಟಿ ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು.

ಈ ಸಂದರ್ಭದಲ್ಲಿ ಸಿಂಧನೂರ ಶಾಸಕರಾದ ಹಂಪನಗೌಡ ಬಾದರ್ಲಿ ಸೇರಿದಂತೆ, ಸಚಿವರಾದ ಡಾ.ಶರಣಪ್ರಕಾಶ ಪಾಟೀಲ, ಶಿವರಾಜ ತಂಗಡಗಿ, ಸತೀಶ ಜಾರಕಿಹೊಳಿ, ಸಂಸದರಾದ ರಾಜಶೇಖರ ಹಿಟ್ನಾಳ, ಶಾಸಕರಾದ ಬಸನಗೌಡ ದದ್ದಲ್, ಬಸನಗೌಡ ತುರವಿಹಾಳ, ಬಿಎಂ ನಾಗರಾಜ, ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಬಸನಗೌಡ ಬಾದರ್ಲಿ, ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಂ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಎಸ್ಪಿ ಅರುಣಾಂಕ್ಷು ಗಿರಿ, ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಬಿ ಸುಶೀಲಾ, ಮುಖ್ಯ ತಾಂತ್ರಿಕ ಶಿಲ್ಪಿಗಳಾದ ಸಂತೋಷಕುಮಾರ, ವಿಭಾಗೀಯ ನಿಯಂತ್ರಾಧಿಕಾರಿ ಚಂದ್ರಶೇಖರ, ವಿಭಾಗೀಯ ತಾಂತ್ರಿಕ ಶಿಲ್ಪಿಗಳಾದ ನಾಗರಾಜ ವಾರದ ಹಾಗೂ ಇನ್ನಿತರರು ಇದ್ದರು.

# ಹೆಸರು, ಉದ್ದು, ಸೂರ್ಯಕಾಂತಿ ಕಾಳು ಹಾಗೂ ಸೋಯಾಬಿನ್ ಮಾರಾಟ ಕಾಲಾವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,: ಪ್ರಸಕ್ತ 2025–26ನೇ ಸಾಲಿನ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನ ಎಫ್.ಎ.ಕ್ಯೂ. ಗುಣಮಟ್ಟದ ಹೆಸರು ಕಾಳು, ಉದ್ದಿನ ಕಾಳು, ಸೂರ್ಯಕಾಂತಿ ಹಾಗೂ ಸೋಯಾಬಿನ್ ಮಾರಾಟ ಮಾಡಲು ಈಗಾಗಲೇ ನಿಗದಿತ ಅವಧಿಯಲ್ಲಿ ನೊಂದಾಯಿಸಿಕೊಂಡಿರುವ ರೈತರು ಮಾರಾಟ ಮಾಡುವ ಕಾಲಾವಧಿ ವಿಸ್ತರಿಸಲಾಗಿದ್ದು, ಜಿಲ್ಲೆಯ ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ಹೆಸರು ಕಾಳು ಪ್ರತಿ ಕ್ವಿಂಟಾಲ್‌ಗೆ 8,768 ರೂ., ಉದ್ದಿನ ಕಾಳು ಪ್ರತಿ ಕ್ವಿಂಟಾಲ್‌ಗೆ 7,800 ರೂ. ಮತ್ತು ಸೂರ್ಯಕಾಂತಿ ಪ್ರತಿ ಕ್ವಿಂಟಾಲ್‌ಗೆ 7,721 ರೂ. ಗಳಂತೆ ಖರೀದಿಸಲಾಗುತ್ತಿದ್ದು, ಈ ಉತ್ಪನ್ನಗಳ ಮಾರಾಟ ಮಾಡಲು ಇದೇ ಜನವರಿ 22ರ ವರೆಗೆ ಹಾಗೂ ಸೋಯಾಬೀನ್ ಪ್ರತಿ ಕ್ವಿಂಟಾಲ್‌ಗೆ 5,328 ರೂ. ಗಳಂತೆ ಮಾರಾಟ ಮಾಡಲು ಜನವರಿ 26 ರವರೆಗೆ ಕಾಲಾವಧಿ ವಿಸ್ತರಿಸಲಾಗಿದೆ.

ಜಿಲ್ಲೆಯ ರೈತರು ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ (ಪಿ.ಎ.ಸಿ.ಎಸ್) (ಕಂಅಖ) ಹಾಗೂ (ಎಫ್.ಪಿ.ಓ.) ಈಕಔ ಗಳಿಗೆ ಭೇಟಿ ನೀಡಿ ತಾವು ಬೆಳೆದ ಹೆಸರು ಕಾಳು, ಉದ್ದಿನ ಕಾಳು, ಸೂರ್ಯಕಾಂತಿ ಹಾಗೂ ಸೋಯಾಬೀನ ನಿಗದಿತ ಅವಧಿಯಲ್ಲಿ ಮಾರಾಟ ಮಾಡಬೇಕು.

ಹೆಚ್ಚಿನ ಮಾಹಿತಿಗಾಗಿ ಉದ್ದಿನ ಕಾಳು ಮತ್ತು ಸೋಯಾಬೀನ್ ಮಾರಾಟಕ್ಕೆ ಕೆ.ಎಸ್.ಸಿ.ಎಮ್.ಎಫ್. ಮೊಬೈಲ್ ಸಂಖ್ಯೆ 9449864446, ಹೆಸರು ಕಾಳು ಮಾರಾಟಕ್ಕೆ ಕೆ.ಎಸ್.ಪಿ.ಎ.ಎಮ್.ಎಲ್. ಮೊಬೈಲ್ ಸಂಖ್ಯೆ 9964474444 ಹಾಗೂ ಸೂರ್ಯಕಾಂತಿ ಮಾರಾಟಕ್ಕೆ ಕೆ.ಓ.ಎಫ್. ಮೊಬೈಲ್ ಸಂಖ್ಯೆ. 9591812142 ಸಂಪರ್ಕಿಸಲು ಕೋರಿದೆ.

# ಅಪರಿಚಿತ ಮಹಿಳೆ ಮೃತ: ವಾರಸುದಾರರ ಪತ್ತೆಗಾಗಿ ಮನವಿ

- ಮಲ್ಲಮ್ಮ ನುಡಿ ವಾರ್ತೆ ಬೀದರ, :



ದಿನಾಂಕ: 14–10–2025 ರಂದು ಬೀದರ ರೈಲ್ವೆ ನಿಲ್ದಾಣದ ಟಿಕೇಟ್ ಕೌಂಟರ ಹತ್ತಿರ ಅನಾರೋಗ್ಯದಿಂದ ಬಳಲುತ್ತಿದ್ದ ಸುಮಾರು 50–60 ವರ್ಷ ವಯಸ್ಸಿನ ಅಪರಿಚಿತ ಮಹಿಳೆ (ವಾಹೀದಾ ಬೇಗಂ) ಆಕೆಗೆ ಚಿಕಿತ್ಸೆಗಾಗಿ ಬೀದರ ಜಿಲ್ಲಾ ಸರಕಾರಿ ಆಸ್ಪತ್ರೆಗೆ ಸೇರಿಕೆ ಮಾಡಿದ್ದು ಚಿಕಿತ್ಸೆ ಫಲಕಾರಿಯಾಗದೇ ದಿನಾಂಕ 02–01–2026 ರಂದು ಮೃತಪಟ್ಟಿರುತ್ತಾಳೆಂದು ಬೀದರ ರೈಲ್ವೆ ಪೊಲೀಸ್ ಠಾಣೆಯ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಈ ಬೀದರ ಬೀದರ ರೈಲ್ವೆ ಪೊಕೀಸ್ ಠಾಣೆಯಲ್ಲಿ ಯುಡಿಆರ್ ಸಂಖ್ಯೆ: 01/2026 ಕಲಂ 194 ಬಿಎನ್‌ಎಸ್‌ಎಸ್ ಪ್ರಕರಣ ದಾಖಲಾಗಿರುತ್ತದೆ.

ಮೃತ ಅಪರಿಚಿತ ಮಹಿಳೆ ಸುಮಾರು 5.5 ಅಡಿ ಎತ್ತರ ಇದ್ದು, ಸದೃಢ ಮೈಕಟ್ಟು, ಸಾದಗಪ್ಪು ಮೈಬಣ್ಣ ತಲೆಯಲ್ಲಿ ಬಿಳಿ–ಕಪ್ಪು ಕೂದಲು, ಚಿಕ್ಕ ಕಣ್ಣುಗಳು, ಸಣ್ಣ ಮೂಗು, ಗುಂಡು ಮುಖ ಹೊಂದಿರುವ ಇವಳು ಮೈಮೇಲೆ ಒಂದು ಬಿಳಿ ಬಣ್ಣದ ತುಂಬು ತೋಳಿನ ಅಂಗಿ, ಕೆಂಪು ಬಣ್ಣದ ಲಂಗಾ, ಒಂದು ನೀಲಿ ಬಣ್ಣದ ಹೂವಿನ ಚಿತ್ರವುಳ್ಳ ಬೇಡಶೀಟ್ ಇರುತ್ತದೆ.

ಈ ಮೃತ ಅಪರಿಚಿತ ಮಹಿಳೆಯ ವಾರಸುದಾರರ ಯಾರಾದರೂ ಪತ್ತೆ ಸುಳಿವು ಸಿಕ್ಕರೆ ಪೊಲೀಸ್ ಉಪ ನಿರೀಕ್ಷಕರು ರೈಲ್ವೆ ಪೊಲೀಸ್ ಠಾಣೆ ಬೀದರಗೆ ಹಾಗೂ ದೂರವಾಣಿ ನಂ. 08482 – 226389, ಮೊಬೈಲ್ ನಂ. 9480802133, 7019384645 ಗೆ ಸಂಪರ್ಕಿಸುವಂತೆ ಅವರು ತಿಳಿಸಿದ್ದಾರೆ.

# ಮೃತಪಟ್ಟ ಕುಟುಂಬಕ್ಕೆ ವೈಯಕ್ತಿಕ ಸಹಾಯ ಮಾಡಿದ ಜಮೀರ್ ಅಹ್ಮದ್ ಖಾನ್

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:



ಘಟನೆಯಲ್ಲಿ ಮೃತಪಟ್ಟ ರಾಜಶೇಖರ್ ರೆಡ್ಡಿ ನಿವಾಸಕ್ಕೆ ಭೇಟಿ ನೀಡಿದ ಬಳ್ಳಾರಿ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಶನಿವಾರ ಸಾಯಂಕಾಲ ಬಳ್ಳಾರಿ ನಗರದ ಹುಸೇನ್ ನಗರದಲ್ಲಿ ಘಟನೆಯಲ್ಲಿ ಸಾವನಪ್ಪಿದ ಮನೆಗೆ ತೆರಳಿ ಅವರ ಕುಟುಂಬ ಸದಸ್ಯರನ್ನು ಭೇಟಿ ಮಾಡಿ ಸದಸ್ಯರಿಗೆ ಸಾಂತ್ವನ ಹೇಳಿ ವೈಯಕ್ತಿವಾಗಿ ಆರ್ಥಿಕ ಸಹಾಯ ಮಾಡಿದರು. ಈ ಸಂದರ್ಭದಲ್ಲಿ ಶಾಸಕರಾದ ನಾರಾ ಭರತ್ ರೆಡ್ಡಿ, ಕಂಪ್ಲಿ ಕ್ಷೇತ್ರದ ಶಾಸಕ ಗಣೇಶ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಲ್ಲಮ್ ಪ್ರಶಾಂತ್, ಸ್ಥಳೀಯ ಮಹಾನಗರ ಪಾಲಿಕ ಸದಸ್ಯ ವಿಕ್ಕಿ ಮುಂತಾದ ಕಾರ್ಯಕರ್ತರು ಉಪಸ್ಥಿತರಿದ್ದರು.



ಹುಣಸೂರು: ತಾಲೂಕು ಉಪ ವಿಭಾಗ ಧಿಕಾರಿಕಚೇರಿಯಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿ ವತಿಯಿಂದ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ದೀಪ ಬೆಳಗಿಸುವ ಮೂಲಕಉದ್ಘಾಟನಾಎಆರ್‌ಟಿಓ ನಯಾಜ್ ಪಾಷ ನೆರವೇರಿಸಿದರು ನಂತರ ಕಾರ್ಯಕ್ರಮದಲ್ಲಿ ರಸ್ತೆ ಸುರಕ್ಷಿತ ಸಪ್ತಹ ಅರಿವಿನ ಪೋಸ್ಟರ್ಗಳನ್ನು ಕಚೇರಿಯಲ್ಲಿ ಬಿಡುಗಡೆಗೊಳಿಸಿದರು ಮಾತನಾಡಿದ್ದಾರೆ ಸೂಪರಿಡೆಂಟ್ ಸತೀಶ್ ಕೆ ಡಿ. ಹಿರಿಯ ಮೋಟಾರ್ ವಾಹನ ನಿರೀಕ್ಷಕರಾದ ಮಹೇಶ್ ಡಿತಾಲೂಕಿನ ಲಾರಿ ಮಾಲೀಕರ ಸಂಘದ ಅಧ್ಯಕ್ಷರ. ಮೊಹಮ್ಮದ್ ರಫಿ ಹಾಗೂ ಚಾಲಕರು .ಅನೀಲ್.ಶಾರದದೇವಿ. ಮಹದೇವ್.ಶಿವಣ್ಣ. ನಟರಾಜ್. ಸಂತೋಷ್. ಲಾರಿ ಮಾಲೀಕರು ಮುಂತಾದವರು ಹಾಜರಿದ್ದರು.

# ಪೂರ್ವಭಾವಿ ಸಿದ್ಧತಾ ಸಭೆ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಜಿಲ್ಲಾಡಳಿತದಿಂದ ಜ.14 ರಂದು ಜಿಲ್ಲಾ ಕೇಂದ್ರದಲ್ಲಿ ಶಿವಯೋಗಿ ಸಿದ್ದರಾಮ ಜಯಂತಿ ಆಚರಣೆ ಕುರಿತು ಚರ್ಚಿಸಲು ಜ.05 ರಂದು ಸಂಜೆ 04 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಆಯೋಜಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಅವರು ಅಧ್ಯಕ್ಷತೆ ವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಆವೈಜ್ಞಾನಿಕ ಜೆಜೆಎಂ ಕಾಮಗಾರಿ ತೊಂದರೆ



ಗ್ರಾಮದ ಜೆಜೆಎಂ ಕಾಮಗಾರಿ ಸಮಸ್ಯೆ ಕುರಿತು ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು ಯಾವುದೇ ಪ್ರಯೋಜನವಾಗಿಲ್ಲ
ಬಸವರಾಜ ಕಿಲ್ಲಾರಹಟ್ಟಿ ಗ್ರಾಮಸ್ಥ

- ಮಲ್ಲಮ್ಮ ನುಡಿ ವಾರ್ತೆ ಮುದಗಲ್ :

ಸಮೀಪದ ಉಪ್ಪಾರನಂದಿಹಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕಿಲ್ಲಾರಹಟ್ಟಿ ಗ್ರಾಮದಲ್ಲಿ ಜೆಜೆಎಂ ಕಾಮಗಾರಿ ಅವೈಜ್ಞಾನಿಕವಾಗಿರುವುದರಿಂದ ಸಾರ್ವಜನಿಕರು ತುಂಬಾ ತೊಂದರೆ ಅನುಭವಿಸುವಂಥಾಗಿದೆ.

ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ಕಿಲ್ಲಾರಹಟ್ಟಿ ಗ್ರಾಮದ ಮನೆಗಳಿಗೆ ಕುಡಿಯುವ ನೀರು ಸಂಪರ್ಕ ಕಲ್ಪಿಸುವ ಈ ಕಾಮಗಾರಿಯ ಉದ್ದೇಶವಾಗಿದೆ ಆದರೆ ಗ್ರಾಮದಲ್ಲಿ ಗುತ್ತಿಗೆದಾರ ಅರ್ಧ ಮರ್ಧ ಕಾಮಗಾರಿ ಮಾಡಿರುವುದರಿಂದ ಸಾರ್ವಜನಿಕರು,ಮಹಿಳೆಯರು, ಮಕ್ಕಳು, ವೃದ್ದರು ರಸ್ತೆಯಲ್ಲಿ ಸಂಚಾರ ಮಾಡಲು ತೊಂದರೆಯಾಗಿದೆ ಎಂದು ಆರೋಪಿಸಿದರು

ಗ್ರಾಮದ ಓಣಿಗಳಲ್ಲಿ ಪೈಪ್ ಲೈನ್ ಗಳ ಹಾಕಲು ತಗ್ಗುಗಳು ತೆಗೆದಿದ್ದಾರೆ ಆದರೆ ಸರಿಯಾದ ಸಮಯಕ್ಕೆ ಪೈಪ್ ಹಾಕದ ಹಿನ್ನಲೆ ತಗ್ಗುಗಳಲ್ಲಿ ನೀರು ನಿಂತಿವೆ ಹಾಗೂ ರಾತ್ರಿ ವೇಳೆ ಈ ರಸ್ತೆಯಲ್ಲಿ ಸಂಚಾರ ಮಾಡಲು ಆಗುತ್ತಿಲ್ಲ ಈ ಸಮಸ್ಯೆ ಕುರಿತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು

ಯಾವುದೇ ಪ್ರಯೋಜನವಾಗಿಲ್ಲವೆಂದು ಗ್ರಾಮಸ್ಥರು ದೂರಿದರು.

ಈ ಕೂಡಲೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಗಮನಹರಿಸಿ ಜೆಜೆಎಂ ಕಾಮಗಾರಿ ಪೂರ್ಣಗೊಳಿಸಿ ಕಿಲ್ಲಾರಹಟ್ಟಿ ಗ್ರಾಮದ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದರು.

# ಸಾವಿತ್ರಿ ಫುಲೆ ದೇಶಕ್ಕೆ ಮಾದರಿ: ಜಾನಕಿ

- ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ: ಬಿ.ಸಿ. ಚೈತನ್ಯ ಸಮಿತಿ ಕರ್ನಾಟಕ ರಾಜ್ಯ ಅಧ್ಯಕ್ಷೆ ಜಾನಕಿ ಮೋಹನ್, ಬಳ್ಳಾರಿ ಜಿಲ್ಲಾ ಅಧ್ಯಕ್ಷೆ ಸುಜಾತಾ ರವಿಚಂದ್ರ . ಬಳ್ಳಾರಿ ಸುದ್ದಿ. ರಾಷ್ಟ್ರೀಯ ಬಿ.ಸಿ. ಚೈತನ್ಯ ಸಮಿತಿ ಕರ್ನಾಟಕ ರಾಜ್ಯ ಮಹಿಳಾ ಅಧ್ಯಕ್ಷೆ ಎಂ. ಜಾನಕಿ ಮೋಹನ್, ಬಳ್ಳಾರಿ ಜಿಲ್ಲಾ ಅಧ್ಯಕ್ಷೆ ಸುಜಾತಾ ರವಿಚಂದ್ರ ಅವರು ಬಿ.ಸಿ. ಚೈತನ್ಯ ಸಮಿತಿ ರಾಷ್ಟ್ರೀಯ ಸಂಸ್ಥಾಪಕ ಅಧ್ಯಕ್ಷ ಬಿ.ಸಿ. ರಮಣ, ರಾಷ್ಟ್ರೀಯ ಉಪಾಧ್ಯಕ್ಷ ಗಿರಿ ಯಾದವ್ ಮತ್ತು ರಾಷ್ಟ್ರೀಯ ಕಾರ್ಯದರ್ಶಿ ವೆಂಕಟ ರಮಣ ಅವರಿಂದ ಅಧಿಕಾರ ಸ್ವೀಕರಿಸಿದರು. ಬೆಂಗಳೂರಿನ ಎಂಎನ್ ಕನ್ನಡ ಸುದ್ದಿ ವಾಹಿನಿ ಕಚೇರಿಯಲ್ಲಿ ಶ್ರೀಮತಿ ಸಾವಿತ್ರಿಬಾಯಿ ಫುಲೆ ಅವರ 195 ನೇ ಜನ್ಮ ದಿನಾಚರಣೆಯ ಸಂದರ್ಭದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಐದು ಮಹಿಳೆಯರನ್ನು ಗುರುತಿಸಿ ಗೌರವಿಸಿದ ನಂತರ ಬಿ.ಸಿ. ಚೈತನ್ಯ ಸಮಿತಿ ಸೂಚನೆಗಳನ್ನು ನೀಡಿ ಜವಾಬ್ದಾರಿಗಳನ್ನು ಹಸ್ತಾಂತರಿಸಿತು. ಕರ್ನಾಟಕ ರಾಜ್ಯ ಮಹಿಳಾ ಅಧ್ಯಕ್ಷೆ ಜಾನಕಿ ಮೋಹನ್ ಈ ಸಂದರ್ಭದಲ್ಲಿ ಮಾತನಾಡಿದರು. ದೇಶದ ಪ್ರತಿಯೊಬ್ಬರೂ ಸಾವಿತ್ರಿಬಾಯಿ ಫುಲೆ ಅವರ ಜನ್ಮದಿನಾಚರಣೆಯನ್ನು ಆಚರಿಸಬೇಕು. ಸಾವಿತ್ರಿ ಫುಲೆ ದೇಶಕ್ಕೆ ಮಾದರಿಯಾಗಿದ್ದಾರೆ ಮತ್ತು ಅವರ ಜನ್ಮದಿನಾಚರಣೆಯ ಉತ್ಸಾಹದಲ್ಲಿ, ಅವರು ಬಿ.ಸಿ.ಗಳ ಕಲ್ಯಾಣಕ್ಕಾಗಿ ಮಹಿಳಾ ಅಧ್ಯಕ್ಷೆಯಾಗಿ ತಮಗೆ ವಹಿಸಲಾಗಿರುವ ಜವಾಬ್ದಾರಿಗಳನ್ನು ಸರಿಯಾಗಿ ನಿರ್ವಹಿಸುತ್ತಾರೆ ಎಂದು ಹೇಳಿದರು. ಬಳ್ಳಾರಿ ಜಿಲ್ಲಾಧ್ಯಕ್ಷೆ ಸುಜಾತ ಮಾತನಾಡಿ, ಃಅ ಗಳು ಎಲ್ಲಾ ಕ್ಷೇತ್ರಗಳಲ್ಲಿ ಹಿಂದುಳಿದಿದ್ದು, ಅವರಿಗಾಗಿ ರಾಷ್ಟ್ರವ್ಯಾಪಿ ಆಂದೋಲನವನ್ನು ಆರಂಭಿಸಲಾಗುವುದು ಮತ್ತು ಈ ಕಾರ್ಯಕ್ರಮವು ಜಿಲ್ಲೆಯ ಮಹಿಳೆಯರಿಗೆ ಸ್ಫೂರ್ತಿ ನೀಡುತ್ತದೆ. ಃಅ ಚೈತನ್ಯ ಸಮಿತಿ ರಾಷ್ಟ್ರೀಯ ಕಾರ್ಯದರ್ಶಿ ಜ್ಯೋತಿ ಕುಮಾರ್, ಬೆಂಗಳೂರು ಯು. ಕೃಷ್ಣಮೋಹನ್, ಬಳ್ಳಾರಿ ರವೀಂದ್ರ, ಮನೋಜ್, ದಿವ್ಯಾ ಯಾದವ್, ಶರಣಮ್ಮ, ನಿರೂಪಕಿ ದಿವ್ಯಾ, ಪ್ರಜ್ವಲ್, ಚಿರಂಜೀವಿ ಸುಪ್ರೀತ್, ಗಾಯತ್ರಿ, ಸತ್ಯ ಪ್ರಕಾಶ್ ಃಅ ಚೈತನ್ಯ ಸಮಿತಿ ರಾಷ್ಟ್ರೀಯ, ರಾಜ್ಯ ಮತ್ತು ಜಿಲ್ಲಾ ಪದಾಧಿಕಾರಿಗಳು ಭಾಗವಹಿಸಿದ್ದರು.

# ಸಚಿವರ ಪರಿಷ್ಕೃತ ಪ್ರವಾಸ

ಕಲಬುರಗಿ: ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಅವರು ಜನವರಿ 5 ರಂದು ಸೋಮವಾರ ಬೆಳಿಗ್ಗೆ 6.10 ಗಂಟೆಗೆ ಕಲಬುರಗಿಯಿಂದ ವಂದೇ ಭಾರತ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಕಾಲ್ನಡಿಗೆಗೆ ಒತ್ತು ನೀಡಿ ನ್ಯಾಯಾಧೀಶರಾದ ಗೌರವಾನ್ವಿತ ಎಸಿ.ಬಿ.ರೆಹಮಾನ




• **ಮಲ್ಲಮ್ಮ ನುಡಿ ವಾರ್ತೆ ಬೀದರ:**

ವಾಹನಗಳ ಬಳಸುವುದು ಕಡಿಮೆ ಮಾಡಿ ಕಾಲ್ನಡಿಗೆಗೆ ಒತ್ತು ನೀಡಿ ಎಂದು ನ್ಯಾಯಾಧೀಶರಾದ ಗೌರವಾನ್ವಿತ ಎಸಿ.ಬಿ.ರೆಹಮಾನ ನುಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಜಿಲ್ಲಾಡಳಿತ ಬೀದರ, ಜಿಲ್ಲಾ ಪೊಲೀಸ್ ಇಲಾಖೆ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ,ಸಾರ್ವಜನಿಕ ಶಿಕ್ಷಣ ಇಲಾಖೆ , ಮೋಟಾರು ವಾಹನಗಳ ತರಬೇತಿ ಶಾಲೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ 2025ರ ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಎಸಿ.ಬಿ. ರೆಹಮಾನ ಅವರು ನಗರದ ನ್ಯಾಯಾಲಯದ ಆವರಣದಲ್ಲಿ ಚಾಲನೆ ನೀಡಿದರು.

ಬಳಿಕ ಮಾತನಾಡಿ ಅರ್ಧ,ಒಂದು ಕಿಮೀ ಹೋಗಲು ಸಹ ಇಂದು ನಾವು ಬೈಕ, ವಾಹನಗಳನ್ನು ಬಳಕೆ ಮಾಡುತ್ತಿದೆವೆ. ಅದರ ಬದಲು ಕಾಲ್ನಡಿಗೆಗೆ ಒತ್ತು ನೀಡಬೇಕು. ಇಂದು ಹಳ್ಳಿ ಹಳ್ಳಿಗಳಿಗೂ ಕಾರು ಬೈಕು ಬಂದಿವೆ. ಮನೆಯ ಪ್ರತಿಯೊಬ್ಬರ ಬಳಿ ಒಂದೊಂದು ಬೈಕ ವಾಹನಗಳಿವೆ. ಆದ್ದರಿಂದ ಜನತೆ ಮನೆಯಿಂದ ಹೊರಗೆ ಬರಲು ಸಹ ವಾಹನಗಳನ್ನು ಬಳಕೆ ಮಾಡುತ್ತಿದ್ದಾರೆ. ಇದರಿಂದಾಗಿ ವಾಹನ ಚಲಾಯಿಸುವಾಗ ಸುರಕ್ಷತೆಗೆ ಆದ್ಯತೆ ನೀಡಬೇಕು. ನಿತ್ಯ ಎಲ್ಲೆಡೆ ನಡೆಯುವ ರಸ್ತೆ ಅಪಘಾತದಿಂದ ಸಾಕಷ್ಟು ಜನ ಸಾಯುತ್ತಿದ್ದಾರೆ. ಆದಷ್ಟು ನಮ್ಮನ್ನು ನಾವು ಕಾಪಾಡಿಕೊಳ್ಳಬೇಕು. ಬೈಕ್ ಸವಾರರು ಕಡ್ಡಾಯ ಹೆಲ್ಮೆಟ್ ಧರಿಸಬೇಕು. ಪೊಲೀಸರು ನೋಡುತ್ತಾರೆ ಎಂಬ ಕಾರಣಕ್ಕೆ ಹೆಲ್ಮೇಟ್ ಧರಿಸುವ ಬದಲು ಜೀವ ಉಳಿಸಿಕೊಳ್ಳಲು ಬಳಸಬೇಕೆಂದರು. ಅಪಘಾತ ಆಕಸ್ಮಿಕ, ಇದರಿಂದ ಪಾರಾಗಲು ಹೆಲ್ಮೇಟ್ – ಸೀಟ ಬೆಲ್ಟ ಬಳಕೆ ಅಗತ್ಯ ಎಂದು ಪ್ರತಿಪಾದನೆ ಮಾಡಿದರು. ರಸ್ತೆಯ ಮೇಲೆ ವಾಹನಗಳನ್ನು ಬಳಸುವ ಎಲ್ಲರೂ ಹೆಲ್ಮೇಟ್ ಧರಿಸಿ ಸೀಟ್ ಬೆಲ್ಟ್ ಹಾಕಿ ಕಾನೂನೂ ಪಾಲನೆ ಮಾಡುವುದರಿಂದ ಮುಂದೆ ಆಗುವ ಸಾವು ನೋವು ತಡೆಯಬಹುದು. ರಸ್ತೆ ಸುರಕ್ಷತೆ ಬಗ್ಗೆ ಎಲ್ಲರೂ ಎಚ್ಚರ ವಹಿಸಬೇಕೆಂದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ

ಜಿ.ಕೆ.ಬಿರಾದಾರ ಮಾತನಾಡಿ ಅಪಘಾತಗಳನ್ನು ಕಡಿಮೆ ಮಾಡುವುದೇ ನಮ್ಮ ಈ ಕಾರ್ಯಕ್ರಮದ ಉದ್ದೇಶವಾಗಿದೆ ದೇಶದಲ್ಲಿ ಪ್ರತಿ ವರ್ಷ ಅಪಘಾತದಲ್ಲಿ 1 ಲಕ್ಷ 50 ಸಾವಿರ ಜನರು ಸಾಯುತ್ತಿದ್ದಾರೆ.ಪ್ರತಿ ದಿನ 400 ಜನರು ಸಾಯುತ್ತಿದ್ದಾರೆ. ವರ್ಷಕ್ಕೆ 10 ಲಕ್ಷ ಜನ ಗಾಯಾಳುಗಳಾಗುತ್ತಿದ್ದಾರೆ ಆದ್ದರಿಂದ ರಸ್ತೆ ನಿಯಮ ಪಾಲನೆಮಾಡಿದರೆ ಅಪಘಾತ ತಡೆದು ಜೀವ ಉಳಿಯುವುದು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಅರ್ಜುನ ಬನಸೋಡೆ ಮಾತನಾಡಿ

ರಸ್ತೆಅಪಘಾತಗಳನ್ನು ತಡೆಯಬೇಕಿದೆ ಯುವಕರೇ ಹೆಚ್ಚು ರಸ್ತೆ ಅಪಘಾತದಿಂದ ಸಾಯುತ್ತಿದ್ದಾರೆ ಹೀಗಾಗಿ ರಸ್ತೆ ಸುರಕ್ಷತಾ ನಿಯಮ ಅರಿತು ಜನತೆ ಬೈಕ್ ವಾಹನ ಚಲಾಯಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಶನ್ಮುಕಯ್ಯ .ಮೋಟಾರುವಾಹನ ನಿರೀಕ್ಷಕ ಹುಸೇನ್ ಸಾಬ್ ನದಾಫ್.ಸಾರಿಗೆ ಕಚೇರಿ ಅಧೀಕ್ಷಕ ಮಲ್ಲಿಕಾರ್ಜುನ ಎಂ.ರಾಜ್ಯ ವಾಹನ ತರಬೇತಿ ಶಾಲೆಯ ಸಂಘಟನಾ ಕಾರ್ಯದರ್ಶಿ ಶಿವರಾಜ ಜಮಾದಾರ. ಜಿಲ್ಲಾ ಮೋಟಾರು ವಾಹನ ತರಬೇತಿ ಶಾಲೆ ಸಂಘದ ಅಧ್ಯಕ್ಷ ಪ್ರಕಾಶ್ ಗುಮ್ಮೆ.ಆಕಾಶ ಸಜ್ಜನ ವಿಕಾಸ ಕಾಂಬಳೆ. ಅಂಬಿಕಾ. ಹಾಗೂ ಆಟೋ ಚಾಲಕರು,ನ್ಯಾಯಾಲಯದ ಮತ್ತು ಸಾರಿಗೆ ಇಲಾಖೆಯ ಸಿಬ್ಬಂದಿ ಇದ್ದರು.

ಇದೇ ವೇಳೆ ನ್ಯಾಯಾಧೀಶರಿಂದ ರಸ್ತೆ ಸುರಕ್ಷತೆ ಕುರಿತ ಕರ ಪತ್ರ ಬಿಡುಗಡೆ ಮಾಡಲಾಯಿತು.

# ಭಾರತದ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಫುಲೆ ಜನ್ಮ ದಿನಾಚರಣೆ



• **ಮಲ್ಲಮ್ಮ ನುಡಿ ವಾರ್ತೆ ಹುಣಸಗಿ:**

ಶ್ರೀ ಬಸವೇಶ್ವರ ಶಿಕ್ಷಣ ಮತ್ತು ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ವಜ್ಜಲ್ ಶಾಂತಗೌಡ ಪಾಟೀಲ್ ಮೆಮೊರಿಯಲ್ ಕೈಗಾರಿಕಾ ತರಬೇತಿ ಸಂಸ್ಥೆ ಹಾಗೂ ಸ್ವಾಮಿ ವಿವೇಕಾನಂದ ಪದವಿ ಮಹಾ ವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡು ಸಾವಿತ್ರಿಬಾಯಿ ಫುಲೆ ಜನ್ಮ ದಿನಾಚರಣೆ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರ ಮೂಲಕ ಆಚರಿಸಲಾಯಿತು.

ಈ ವೇಳೆ ಉಪನ್ಯಾಸಕ ಬಸವರಾಜ ಅಗ್ನಿ ಮಾತನಾಡಿ, ಸಾವಿತ್ರಿಬಾಯಿ ಫುಲೆ ಅವರ ಜನ್ಮ ದಿನ ಮಾತ್ರವಲ್ಲ ಇದು ಭಾರತದಲ್ಲಿ ನ್ಯಾಯ, ಸಮಾನತೆ ಮತ್ತು ಶಿಕ್ಷಣದ ಹುಟ್ಟುಹಬ್ಬ. ಅವರು ಭಾರತದ ಮೊದಲ ಮಹಿಳಾ ಶಿಕ್ಷಕಿ, ಸಮಾಜ ಸುಧಾರಾಕಿ,

ಮತ್ತು ಮಹಿಳಾ ಹಕ್ಕುಗಳ ಹೋರಾಟಗಾರ್ತಿ. 1848ರಲ್ಲಿ ಪುಣೆಯಲ್ಲಿ ಮೊದಲ ಮಹಿಳಾ ಶಾಲೆಯನ್ನು ಪ್ರಾರಂಭಿಸಿದರು ಅದರ ಮೂಲಕ ಮಹಿಳಾ ಶಿಕ್ಷಣಕ್ಕೆ ಸಾವಿತ್ರಿಬಾಯಿ ಫುಲೆ ಕೊಡುಗೆ ಅಪಾರ ಎಂದು ಹೇಳಿದರು.

ಸುರೇಶ ಕೀರಣಗಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ಉಪನ್ಯಾಸಕಿ ಸರಸ್ವತಿ ಸ್ವಾಗತಿಸಿದರು. ಉಪನ್ಯಾಸಕ ಪ್ರಕಾಶ ಪಾಟೀಲ್ ವಂದಿಸಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯರಾದ ಬಸವರಾಜ ಮರೋಳ,ಉಪನ್ಯಾಸಕರಾದ ಮಲ್ಲಿಕಾರ್ಜುನ, ಸೋಮಶೇಖರ ಸುತಾರ, ಮಾನ್ಯಪ್ಪ, ಹುಣಸಗಿ ಗೃಹ ರಕ್ಷಕ ದಳದ ಅಧಿಕಾರಿ ಆಶಿಕ್ ಸೇರಿದಂತೆ ಇತರರಿದ್ದರು.

# ಜೆಸ್ಕಾಂ ಗ್ರಾಮೀಣ: ಜನವರಿ 6ರಂದು ವಿದ್ಯುತ್ ವ್ಯತ್ಯಯ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಕಲ್ಮಲಾ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಾಗೂ ಪಿಜಿಸಿಐಎಲ್ 765 ಕೆವಿ ಮಾರ್ಗ ಸ್ಥಳಾಂತರಿಸುವ ಕಾರ್ಯ ಹಮ್ಮಿಕೊಂಡಿರುವುದರಿಂದ ಜನವರಿ 6ರ ಬೆಳಿಗ್ಗೆ 10 ಗಂಟೆಯಿಂದ

ಸಾಯಂಕಾಲ 4ಗಂಟೆವರೆಗೆ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ

ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮೀರ ಮಲ್ಲಿಕಾರ್ಜುನ ಲಕ್ಷ್ಮೀ ರಾಷ್ಟ್ರಮಟ್ಟಕ್ಕೆ ಆಯ್ಕೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ನಗರದ ಬಸವೇಶ್ವರ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ಮೂವರು ವಿದ್ಯಾರ್ಥಿಗಳು ರಾಜ್ಯಮಟ್ಟದ ವಿವಿಧ ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಗಳಿಸಿ ರಾಷ್ಟಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಸಮೀರ್ ಬಾಡಗಂಡಿ 500 ಮೀಟರ್ ಟ್ರಾಕ್ ಸೈಕ್ಲಿಂಗ್‌ನಲ್ಲಿ ಪ್ರಥಮ ಸ್ಥಾನ ಪಡೆದು ರಾಂಚಿಯಲ್ಲಿ ನಡೆಯುವ ರಾಷ್ಟಮಟ್ಟದ ಸ್ಪರ್ಧೆಯಲ್ಲಿ ಪಾಲ್ಗೊಳ್ಳಲಿದ್ದಾನೆ. ಮಲ್ಲಿಕಾರ್ಜುನ ಚಿಂಚಲಿ 14 ವಯೋಮಾನದ 38 ಕೆಜಿಯ ಕುಸ್ತಿ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ದೆಹಲಿಯಲ್ಲಿ ನಡೆಯುವ ರಾಷ್ಟಮಟ್ಟದ ಸ್ಪರ್ಧೆಗೆ



ಆಯ್ಕೆಯಾಗಿದ್ದಾನೆ.

ಲಕ್ಷ್ಮೀ ಭಂಟನೂರ ಸೈಕ್ಲಿಂಗ್ ಅಸೋಸಿಯೇಷನ್ ರೋಡ್ ಸೈಕ್ಲಿಂಗ್‌ನಲ್ಲಿ ಪ್ರಥಮ ಸ್ಥಾನ ಪಡೆದು ಉತ್ತರಖಂಡದಲ್ಲಿ ನಡೆದ ರಾಷ್ಟಮಟ್ಟದಲ್ಲಿ ಭಾಗವಹಿಸಿದ್ದಾಳೆ. ಸಾಧನೆ ತೋರಿದ ಮೂವರು ವಿದ್ಯಾರ್ಥಿಗಳನ್ನು ಬಿವಿವಿ ಸಂಘದ ಆಡಳಿತ ಕಛೇರಿಯ ಆವರಣದಲ್ಲಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಸನ್ಮಾನಿಸಿ ಅಭಿನಂದಿಸಿದರು.

# ಯೋಜನಾ ಸಮಿತಿ ಚುನಾವಣೆ ಅಧಿಸೂಚನೆ ಪ್ರಕಟ

• **ಮಲ್ಲಮ್ಮ ನುಡಿ ವಾರ್ತೆ ಸಿರವಾರ:**

ರಾಯಚೂರು ಜಿಲ್ಲಾ ಯೋಜನಾ ಸಮಿತಿ ಸದಸ್ಯರ ಚುನಾವಣೆಗೆ ಅಧಿಸೂಚನೆ ಹೊರಡಿಸಿದ್ದು ಸಿರವಾರ ಪಟ್ಟಣ ಪಂಚಾಯತ ಸದಸ್ಯರು ನಾಮಪತ್ರ ಸಲ್ಲಿಸಬೇಕು ಎಂದು ಸಿರವಾರ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಸುರೇಶ ಶೆಟ್ಟಿ ಅವರು ತಿಳಿಸಿದ್ದಾರೆ.

ಪ್ರಸ್ತುತ ನಗರ ಸ್ಥಳೀಯ ಸಂಸ್ಥೆಗಳಿಂದ 06 ಸದಸ್ಯರನ್ನು (ಪುರಸಭೆ, ಮಸ್ಕಿ ಮತ್ತು ಪಟ್ಟಣ ಪಂಚಾಯತ್, ಕವಿತಾಳ, ತುರವಿಹಾಳ, ಬಳಗಾನೂರು ಮತ್ತು ಸಿರವಾರ ಮತಕ್ಷೇತ್ರ ಒಳಗೊಂಡಂತೆ) ಆಯ್ಕೆ ಮಾಡಬೇಕಾಗಿರುತ್ತದೆ. ಈ ಕುರಿತು ನಾಮಪತ್ರ ಸಲ್ಲಿಸುವ ದಿನಾಂಕ ಜ01 ರಿಂದ ಜ.12 ರೊಳಗಾಗಿ ನಾಮಪತ್ರ ಸಲ್ಲಿಸುವುದು, ನಾಮಪತ್ರ ಪರಿಶೀಲನೆ ಜನವರಿ 13 ಹಾಗು ನಾಮಪತ್ರ ಹಿಂತೆದುಕೊಳ್ಳುವುದು ಜ.16 ಹಾಗೂ ಜ.22 ರಂದು ಚುನಾವಣೆ ಜರುಗಿಸಲಾಗುವುದು ಎಂದು ಸಿರವಾರ ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಸುರೇಶ ಶೆಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪತ್ರಕರ್ತ ಗುಳೇದಗುಡ್ಡ ಕುಟುಂಬಕ್ಕೆ ನೆರವು



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ನಿಪ್ಪಾಣಿ ಶಾಸಕಿ ಶಶಿಕಲಾ ಜೊಲ್ಲೆ ನೇತೃತ್ವದ ಜೊಲ್ಲೆ ಗ್ರುಪ್‌ನ ಅಂಗಸಂಸ್ಥೆ ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ ಸಂಘದ (ಯಕ್ಸಂಬಾ) ಕಮತಗಿ ಶಾಖೆಯ ಸಲಹಾ ಸಮಿತಿ ಸದಸ್ಯರಾಗಿದ್ದ ಪತ್ರಕರ್ತ ಪ್ರಕಾಶ ಗುಳೇದಗುಡ್ಡ ಇತ್ತೀಚಿಗೆ ನಿಧನ ಹೊಂದಿದ್ದು, ಸಂಘದ ಮರಣೋತ್ತರ ನಿಧಿಯಿಂದ ಅವರ ಕುಟುಂಬಕ್ಕೆ 10 ಲಕ್ಷ ರೂ.ಗಳ ನೆರವು ನೀಡಲಾಗಿದೆ.

ಮೃತ ಪ್ರಕಾಶ ಗುಳೇದಗುಡ್ಡ ಅವರ ಪತ್ನಿ ಮಂಜವ್ವ ಗುಳೇದಗುಡ್ಡ ಅವರಿಗೆ 10ಲಕ್ಷ ರೂ. ಗಳ ಮರೋಣೋತ್ತರ ನಿಧಿಯನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ಶಾಖೆಯ ಸಲಹಾ ಸಮಿತಿ ಸದಸ್ಯ ನಿಂಗಪ್ಪ ಸಣ್ಣಬಸಪ್ಪ ತೆಗ್ಗಿ, ಶ್ರೇಣಿಕ ಜೀನದತ್ತ ಕೊಲ್ಹಾರ, ಮಹೇಶ್ ಶಿವಶಂಕರಪ್ಪ ಅಚನೂರ್, ಹಿರಿಯರಾದ ರುದ್ರಪ್ಪ ಅಂಗಡಿ,ಮನೋಹರ ಅಂಬಲಗಿ, ಗಂಗಾಧರ ಕ್ಯಾದಿಗೇರಿ, ಶಿವರಾಯಪ್ಪ ಬಿಸನಾಳ, ಸಾಗರ ವಸ್ತ್ರದ ಹಾಗೂ ಶಾಖಾ ವ್ಯವಸ್ಥಾಪಕರು ಮತ್ತು ಸಿಬ್ಬಂದಿ ವರ್ಗದವರು ಇದ್ದರು.

# ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನ

• **ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಅಲೆಮಾರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಾಮಾಜಿಕ, ಶೈಕ್ಷಣಿಕ, ಮತ್ತು ಆರ್ಥಿಕ, ಸ್ಥಿತಿಗತಿ ಉತ್ತಮ ಪಡಿಸಲು ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ರಚಿಸಲಾಗಿದ್ದು, ಈ ಸಮಿತಿಗೆ 05 ಜನ ಸಮುದಾಯದ ಪ್ರತಿನಿಧಿಗಳನ್ನು ನಾಮ ನಿರ್ದೇಶನಕ್ಕೆ ಅಲೆಮಾರಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜಾತಿಯ ಆಸಕ್ತಿಯುಳ್ಳ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಮಿತಿಗೆ ನಾಮನಿರ್ದೇಶಿತ ಸದಸ್ಯರಾಗಲು ಇಚ್ಛಿಸಿದಲ್ಲಿ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕಚೇರಿ ರಾಯಚೂರುನಲ್ಲಿ ಅರ್ಜಿಯನ್ನು ಜನವರಿ 12ರಿಂದ ಪಡೆದು ಭರ್ತಿ ಮಾಡಿ ಜನವರಿ 31ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಷ್ಟ್ರಕ್ಕಾಗಿ ಮಧ್ಯಸ್ಥಿಕೆ :ವಿಶೇಷ ಅಭಿಯಾನ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**



ಜಿಲ್ಲಾ ಹಾಗೂ ಅಧಿನ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಲು ಜಿಲ್ಲೆಯಾದ್ಯಂತ ರಾಷ್ಟ್ರಕ್ಕಾಗಿ 2ನೇ ಮಧ್ಯಸ್ಥಿಕೆಯ ವಿಶೇಷ ಅಭಿಯಾನವನ್ನು ಪ್ರಾರಂಭಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಎನ್.ವಿ.ವಿಜಯ್ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು, ಈ ಅಭಿಯಾನದಲ್ಲಿ ಬಾಕಿ ಇರುವ ಪ್ರಕರಣಗಳಾದ ವೈವಾಹಿಕ ಹಾಗೂ ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು, ಮೋಟಾರು ಅಪಘಾತ, ಚೆಕ್ ಅಮಾನ್ಯ ಪ್ರಕರಣಗಳು, ವಾಣಿಜ್ಯ, ಸೇವಾ ಪ್ರಕರಣಗಳು, ರಾಜಿಯಾಗಬಲ್ಲ ಅಪರಾಧಿಕ ಪ್ರಕರಣಗಳು,ಗ್ರಾಹಕರ ವ್ಯಾಜ್ಯ ಪ್ರಕರಣಗಳು ಡಿ.ಆರ್.ಟಿ, ಪಾಲುದಾರಿಕೆ, ಭೂಸ್ವಾಧೀನ ಪ್ರಕರಣಗಳು ಹಾಗೂ ಇತರೆ ಸಿವಿಲ್ ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಇತ್ಯರ್ಥಪಡಿಸಲಾಗುತ್ತದೆ.

ನ್ಯಾಯಾಲಯದ ಪ್ರಕರಣಗಳನ್ನು ಮಧ್ಯಸ್ಥಿಕೆ ಕೇಂದ್ರಕ್ಕೆ ಸೂಚಿಸಿಕೊಂಡಲ್ಲಿ ಅಂತಹ ಪ್ರಕರಣಗಳಲ್ಲಿ ಉಭಯ ಪಕ್ಷಗಾರರನ್ನು ಕರೆದು- ಕೊಂಡು ಜಿಲ್ಲಾ ನ್ಯಾಯಾಲಯದ ಸಮುಚ್ಚಯದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲೂಕು ನ್ಯಾಯಾಲಯಗಳ ಆವರಣಗಳಲ್ಲಿರುವ ಮಧ್ಯಸ್ಥಿಕೆ ಕೇಂದ್ರಗಳಲ್ಲಿ ರಾಜೀ ಸಂಧಾನ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

### ಜ.24 ಲೋಕ ಅದಾಲತ್

**ನ್ಯಾಯಾಲಯಗಳಲ್ಲಿ ಬಾಕಿ ಇರುವ ಭೂಸ್ವಾಧೀನ ಪ್ರಕರಣ ಮತ್ತು ಭೂಸ್ವಾಧೀನ ದರಕಾಸ್ತು ಪ್ರಕರಣಗಳಿಗೆ ಸಂಬಂಧಿಸಿದಂತೆ, ಜನವರಿ 24 ರಂದು ವಿಶೇಷ ಲೋಕ ಅದಾಲತ್ ಶಿಬಿರ ಹಮ್ಮಿಕೊಳ್ಳಲಾಗಿದೆ. ಈ ಶಿಬಿರದಲ್ಲಿ ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿರುವ ಮತ್ತು ಇತ್ಯರ್ಥವಾಗಿ ದರಕಾಸ್ತು ಹಂತದಲ್ಲಿರುವ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗುತ್ತಿದ್ದು ಇದರ ಸದುಪಯೋಗವನ್ನು ಕಕ್ಷಿದಾರರು ಪಡೆದುಕೊಳ್ಳಬಹುದಾಗಿದೆ.**

# ಕರಡು ಮತದಾರರ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಕೆಗೆ ಅವಕಾಶ




• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆಗೆ ಸಂಬಂಧಿಸಿದಂತೆ ಕರಡು ಮತದಾರರ ಪಟ್ಟಿಯನ್ನು ಶನಿವಾರ ಪ್ರಕಟಣೆ ಮಾಡಲಾಗಿದ್ದು, ಹಕ್ಕುಗಳು ಮತ್ತು ಆಕ್ಷೇಪಣೆಗಳನ್ನು ಜನವರಿ 24 ವರೆಗೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಕರಡು ಮತದಾರರ ಪಟ್ಟಿ ಪ್ರಕಟಣೆ ಕುರಿತು ವಿವಿಧ ರಾಜಕೀಯ ಪಕ್ಷಗಳ ಮುಖಂಡರ ಜೊತೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಗೆ ಒಳಪಡುವ ಕರಡು ಮತದಾರರ ಪಟ್ಟಿಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ, ತಹಶೀಲ್ದಾರ ಕಚೇರಿ ಹಾಗೂ ಬಾಗಲಕೋಟೆ ಮತಕ್ಷೇತ್ರ ವ್ಯಾಪ್ತಿಗೆ ಒಳಪಡುವ ಎಲ್ಲ ಮತಗಟ್ಟೆಗಳಲ್ಲಿ ಹಾಗೂ ಜಾಲತಾಣ http://ceo.karnataka.gov.in/en ದಲ್ಲಿ ಪ್ರಕಟಿಸಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಹಾಗೂ ವಿವರಗಳು ಸರಿಯಾಗಿ ಇರುವದರ ಬಗ್ಗೆ ಪರಿಶೀಲಿಸಿಕೊಳ್ಳಬಹುದಾಗಿದೆ. ಕರಡು ಮತದಾರರ ಪಟ್ಟಿಯ ಕುರಿತು ಹಕ್ಕು ಮತ್ತು ಆಕ್ಷೇಪಣೆಗಳು ಇದ್ದಲ್ಲಿ ಜನವರಿ 24 ರೊಳಗಾಗಿ ಆಕ್ಷೇಪಣೆ ಸಲ್ಲಿಸಲು ಅವಕಾಶವಿರುತ್ತದೆ.ಜನವರಿ 11 ಮತ್ತು 18 ರಂದು ಮತಗಟ್ಟೆಗಳಲ್ಲಿ ವಿಶೇಷ ನೋಂದಣಿ ಅಭಿಯಾನ ಸಹ ಹಮ್ಮಿಕೊಳ್ಳಲಾಗಿದೆ. ಹೊಸ ಮತದಾರ ನೋಂದಣಿಗೆ ಫಾರಂ–6, ಅನಿವಾಸಿ ಭಾರತೀಯ ಮತದಾರರ ಹೆಸರು ಸೇರ್ಪಡೆಗೆ ಫಾರಂ–6ಎ, ಆಕ್ಷೇಪಣೆ, ಹೆಸರು ತೆಗೆದು ಹಾಕಲು ಫಾರಂ–7 ಹಾಗೂ ವಾಸಸ್ಥಳ ಬದಲಾವಣೆ, ವಿವರ ತಿದ್ದುಪಡಿ, ಎಫಿಕ್ ಬದಲಾವಣೆ, ಪಿಡಬ್ಲೂಡಿ ಗುರುತು ಮಾಡಲು ಫಾರಂ–8ರಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಬಾಗಲಕೋಟೆ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಕರಡು ಮತದಾರರ ಪಟ್ಟಿಯಂತೆ ಒಟ್ಟು 2,55,503 ಮತದಾರರಿದ್ದು, ಅದರಲ್ಲಿ 1,25,316 ಪುರುಷ, 1,30,164 ಮಹಿಳಾ ಹಾಗೂ 23 ಇತರೆ ಮತದಾರರು ಇದ್ದಾರೆ. ಸೇವಾ ಮತದಾರರು 390 ಇದ್ದು, 18 ರಿಂದ 19 ವರ್ಷದೊಳಗಿನ 5,183 ಮತದಾರರು, ಪಿಡಬ್ಲೂಡಿ ಮತದಾರರು 2,554 ಹಾಗೂ 85 ವರ್ಷ ಮೇಲ್ಪಟ್ಟ 2800 ಮತದಾರರು ಇದ್ದಾರೆ. ಒಟ್ಟು ಮತಗಟ್ಟೆ ಸಂಖ್ಯೆ 319 ಇವೆ.

ಓಟರ್ ಸರ್ವಿಸ್ ಪೋರ್ಟಲ್, ಓಟರ್ ಹೆಲ್ಪಲೈನ್ ಮೊಬೈಲ್ ಆಪ್ ಮೂಲಕ ಆನ್‌ಲೈನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದರು. ಜನಪ್ರತಿನಿಧಿಗಳ ಕಾಯ್ದೆ, 1950ರ ಸೆಕ್ಷನ್ 24(ಎ) ಅನ್ವಯ, ಮತದಾರರ ನೋಂದಣಿ ಅಧಿಕಾರಿ (ಇಆರ್‌ಓ) ಅವರ ಯಾವುದೇ ತೀರ್ಪಿನ ವಿರುದ್ಧ ಜಿಲ್ಲಾಧಿಕಾರಿಗಳಿಗೆ ಮೇಲ್ಮನವಿ ಸಲ್ಲಿಸಬಹುದಾಗಿದೆ. ಮೊದಲ ಮೇಲ್ಮನವಿ ಅಧಿಕಾರಿಯ ತೀರ್ಪಿನ ವಿರುದ್ಧ ಸೆಕ್ಷನ್ 24(ಬಿ) ಅಡಿಯಲ್ಲಿ ಎರಡನೇ ಮೇಲ್ಮನವಿ ಸಲ್ಲಿಸಲು ಅವಕಾಶವಿದ್ದು, ಆ ಮೇಲ್ಮನವಿ ನೋಂದಣಿ ಅಧಿಕಾರಿಗಳ ನಿಯಮಗಳು, 1960 ರ ನಿಯಮ 27ರಲ್ಲಿ ನಿರ್ದಿಷ್ಟಪಡಿಸಿದ ವಿಧಾನದಲ್ಲಿ ಮುಖ್ಯ ಚುನಾವಣಾಧಿಕಾರಿಗಳಿಗೆ ಸಲ್ಲಿಸಬೇಕಾಗುತ್ತದೆ ಎಂದು ತಿಳಿಸಿದರು.

ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳಲ್ಲಿ ದೋಷರಹಿತ ಹಾಗೂ ಆರೋಗ್ಯಕರ ಮತದಾರರ ಪಟ್ಟಿಯ ಸಿದ್ದತೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಹಕ್ಕುಗಳು ಮತ್ತು ಆಕ್ಷೇಪಣೆಗಳ ಅವಧಿಯಲ್ಲಿ ಸಾರ್ವಜನಿಕರು ನಿಗದಿತ ನಮೂನೆಗಳಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು. ಮತದಾರರ ಪಟ್ಟಿ, ಮತದಾರರ ಗುರುತಿನ ಚೀಟಿ ಹಾಗೂ ಅರ್ಜಿಗಳ ಸಲ್ಲಿಕೆ ಮಾಹಿತಿಗಾಗಿ ಜಿಲ್ಲಾ ಚುನಾವಣಾಧಿಕಾರಿಗಳು, ಮತದಾರರ ನೋಂದಣಿ ಅಧಿಕಾರಿ, ಸಹಾಯಕ ಮತದಾರರ ನೋಂದಣಿ ಅಧಿಕಾರಿಗಳು ಹಾಗೂ ಮತಗಟ್ಟೆ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ. ಮತದಾನದ ದಿನ ಮತದಾರರ ಪಟ್ಟಿಯಲ್ಲಿ ಯಾವುದೇ ಬದಲಾವಣೆ ಮಾಡಲು ಯಾವುದೇ ಕಾನೂನಿನಡಿ ಅವಕಾಶ ಇರುವುದಿಲ್ಲ. ಸಾರ್ವಜನಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳನ್ನು ಪರಿಶೀಲಿಸಿ ದೃಢಪಡಿಸಿಕೊಳ್ಳುವಂತೆ ಮನವಿ ಮಾಡಿಕೊಂಡರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ವಿವಿಧ ರಾಜಕೀಯ ಪಕ್ಷಗಳ ಮುಖಂಡರಾದ ಯಮನಪ್ಪ ಶಿರೂರ, ಶ್ರೀಧರ ನಾಗರಬೆಟ್ಟ, ಅಬ್ದುಲ್‌ರಜಾಕ ಬೆನ್ನೂರ, ಎಸ್.ಎನ್.ರಾಂಪೂರ, ಸುರೇಶ ಕೊಣ್ಣೂರ, ಹನಮಂತ ಮಾದರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮುಖ್ಯ : ಕುರೇರ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**

ಭಯವಿಲ್ಲದೇ ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿದಲ್ಲಿ ಉತ್ತಮ ಅಂಕ ಪಡೆಯಲು ಸಾಧ್ಯವಾಗುತ್ತದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯ ಪೂರ್ವ ಸಿದ್ದತೆ–ಗಾಗಿ ವಿದ್ಯಾರ್ಥಿಗಳನ್ನು ಶಾಲಾ ಹಂತದಲ್ಲಿ ಶೈಕ್ಷಣಿಕವಾಗಿ ಪ್ರೇರೇಪಿಸುವ ನಿಟ್ಟಿನಲ್ಲಿ ಇತ್ತೀಚೆಗೆ ಹಮ್ಮಿಕೊಂಡ ಶೈಕ್ಷಣಿಕ ಕಾರ್ಯಾಗಾರದಲ್ಲಿ ವಿಡಿಯೋ ವರ್ಚ್ಯೂವಲ್ ಮೂಲಕ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು ಭಯ, ಆತಂಕವನ್ನು ಬಿಟ್ಟು ಮನಸ್ಸು ಗಟ್ಟಿಗೊಳಿಸಿಕೊಳ್ಳಬೇಕು ಎಂದರು.

ವಿದ್ಯಾರ್ಥಿಗಳು ಗುರಿ, ಕನಸು ಇಟ್ಟುಕೊಂಡು ಉತ್ತರ ಕೊಡುವ ರೀತಿಯಲ್ಲಿ ಪರೀಕ್ಷೆಗೆ ತಯಾರಾಗಬೇಕಾಗುತ್ತದೆ.

ಪರೀಕ್ಷೆ ಎಂದರೆ ಭಯ ಇರಬೇಕು ಆದರೆ ಅದನ್ನು ಸರಿಪಡಿಸಿಕೊಂಡು ತಯಾರಿ ಮುಂದುವರಿಸಬೇಕು. ಎಸ್.ಎಸ್.ಎಲ್.ಸಿ ಪರೀಕ್ಷೆ ಜೀವನದ ಮೊದಲ ಹೆಜ್ಜೆಯಾಗಿದ್ದು, ನಂಬಿಕೆ ಇಟ್ಟುಕೊಂಡು ಪರೀಕ್ಷೆಗೆ ತಯಾರಾಗಬೇಕು. ಪರೀಕ್ಷೆಯಲ್ಲಿ ಅಂಕಗಳು ಗುರುತು ಮಾತ್ರ ಆದರೆ ನೀವು ಪಟ್ಟ ಪರಿಶ್ರಮ ಖಂಡಿತವಾಗಿಯೂ ಯಶಸ್ಸು ಸಿಗುತ್ತದೆ ಎಂದರು.

ಸಮಯಪರಿಪಾಲನೆ ಮುಖ್ಯವಾಗಿದ್ದು, ಶಿಸ್ತು ಬೆಳೆಸಿಕೊಂಡು ಸಮಯದ ಸದುಪಯೋಗ ಪಡಿಸಿಕೊಳ್ಳಲು ಮುಂದಾಗಬೇಕು. ವಿಷಯಗಳನ್ನು ಏಕಾಗ್ರತೆಯಿಂದ ಅರ್ಥವಾಗುವ ರೀತಿಯಲ್ಲಿ ಅಭ್ಯಾಸ ಮಾಡಬೇಕು. ಎಷ್ಟು ಸಮಯ ಓದಿದ್ದೇನೆ ಎಂಬುದು ಮುಖ್ಯವಲ್ಲ. ಎಷ್ಟು ಓದಿ ತಿಳಿದುಕೊಂಡಿದ್ದೇನೆ ಎಂಬುದು ಮುಖ್ಯವಾಗುತ್ತದೆ. ಓದಿರುವ ಶಬ್ದಗಳು ನೆನಪಿನಲ್ಲಿಟ್ಟುಕೊಂಡಾಗ ಆ ಶಬ್ದಗಳ ಮೂಲಕ ಇಡೀ ಚಿತ್ರಣ ತಮ್ಮ ಕಣ್ಣ ಮುಂದೆ ಬರುವಂತಾಗಬೇಕು. ಆ ರೀತಿಯಲ್ಲಿ ಅಭ್ಯಾಸ ಮಾಡಬೇಕು ಎಂದು ಕುರೇರ ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ವರ್ಚ್ಯೂವಲ್ ಮೂಲಕ ಹಮ್ಮಿಕೊಂಡ ಶೈಕ್ಷಣಿಕ ಕಾರ್ಯಾಗಾರದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಜಿ.ಮನ್ನಿಕೇರಿ, ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಎಸ್.ಎಸ್. ಹಾಲವರ ಸೇರಿದಂತೆ ಆಯಾ ಶಾಲಾ ಮುಖ್ಯೋಪಾಧ್ಯಾಯರು ಭಾಗವಹಿಸಿದ್ದರು.

# ಅಭಿವೃದ್ಧಿ ಜೊತೆಗೆ ಗ್ಯಾರಂಟಿ ಯೋಜನೆ ಮುಂದುವರಿಸುತ್ತೇವೆ: ಸಿಎಂ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಏನೇ ತೊಂದರೆಯಾದರೂ, ಎಷ್ಟೇ ಖರ್ಚಾದರು ಸಹ ತುಂಗಭದ್ರಾ ಡ್ಯಾಮಗೆ ಬರುವ ಜೂನ್ ಒಳಗಡೆ ಹೊಸ ಕ್ರಸ್ಟ್ ಗೇಟ್ ಅಳವಡಿಸಿ, ಮುಂದಿನ ಮುಂಗಾರು ಬೆಳೆಗೆ ನೀರು ಹರಿಸಿ ರೈತರಿಗೆ ನೀಡಿದ ಮಾತು ಉಳಿಸಿಕೊಳ್ಳುತ್ತೇವೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಹೇಳಿದರು.

ತಾಲೂಕಾಡಳಿತ, ತಾಲೂಕು ಪಂಚಾಯತ್ ಹಾಗೂ ಧಾರ್ಮಿಕ ದತ್ತಿ ಇಲಾಖೆಯ ಅಂಬಾದೇವಿ ವ್ಯವಸ್ಥಾಪನಾ ಸಮಿತಿಯ ಆಶ್ರಯದಲ್ಲಿ ಸಿಂಧನೂರ ತಾಲೂಕಿನ ಅಂಬಾಮಠದ ಆವರಣದಲ್ಲಿ ಜನವರಿ 3ರಂದು ನಡೆದ ಅಂಬಾದೇವಿ ಮಹಾರಥೋತ್ಸವ ಮತ್ತು ಜಂಬೂ ಸವಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.





ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ ಮುಖ್ಯಮಂತ್ರಿಗಳು, 431 ಕೋಟಿ ರೂ ವೆಚ್ಚದಲ್ಲಿ ಪಾಪಯ್ಯ ಟನೇಲ್ ಕಾರ್ಯ ಮತ್ತು 33 ಗೇಟ್ ಅಳವಡಿಸುವ ಕಾರ್ಯ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಸಿಂಧನೂರ ಕ್ಷೇತ್ರದ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ನೀಡಿದ ಅನುದಾನವನ್ನು ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಸದ್ಬಳಕೆ ಮಾಡುತ್ತಿರುವುದು ಸಂತಷದ ಸಂಗತಿಯಾಗಿದೆ. ಸಿಂಧನೂರ ಕ್ಷೇತ್ರದ ಕುಡಿಯುವ ನೀರಿನ ಕೆರೆಗಳ ನಿರ್ಮಾಣ ಅಭಿವೃದ್ಧಿಗೆ 13.42 ಕೋಟಿ ರೂ., ಸಾಲಗುಂದ ಏತ ನೀರಾವರಿ ಯೋಜನೆಗೆ 71 ಕೋಟಿ ರೂ., ಒಳಬಳ್ಳಾರಿ ಏತ ನೀರಾವರಿ ಯೋಜನೆಗೆ 43.10 ಕೋಟಿ ರೂ., ಮುಳ್ಳೂರ ಗ್ರಾಮದ ಹತ್ತಿರ ಬ್ರಿಜ್ ಕಂ ಬ್ಯಾರೇಜ್ ಯೋಜನೆಗೆ 29 ಕೋಟಿ ರೂ ವೆಚ್ಚ ಮಾಡಿ ಈ ಭಾಗದ ಅನ್ನದಾತರಿಗೆ ಅನುಕೂಲ ಕಲ್ಪಿಸುತ್ತಿದ್ದೇವೆ ಎಂದು ತಿಳಿಸಿದರು.42 ಲಕ್ಷ ಹೆಕ್ಟೇರ್ ಪ್ರದೇಶಕ್ಕೆ ನೀರು ಹರಿಸುವ ಪ್ರಯತ್ನದಲ್ಲಿ ಈಗಾಗಲೇ 30 ಲಕ್ಷ ಪ್ರದೇಶಕ್ಕೆ ನೀರು ಕೊಟ್ಟಿದ್ದೇವೆ. ಉಳಿದ 12 ಲಕ್ಷ ಹೆಕ್ಟೇರ ಪ್ರದೇಶಕ್ಕೆ ಸಹ ನೀರು ಹರಿಸುವ ಕಾರ್ಯ ನಡೆಯುತ್ತಿದೆ ಎಂದರು.

ರಾಜ್ಯ ಸರ್ಕಾರದ ಖಜಾನೆಯಲ್ಲಿ ಹಣ ಇಲ್ಲ ಎನ್ನುವುದು ಅಪ್ಪಟ ಸುಳ್ಳು. ನಾವು ಹಿಂದೆ ಬಿದ್ದಿಲ್ಲ. ಅಭಿವೃದ್ಧಿ ಕಾರ್ಯಗಳು ಹಾಗೂ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕಾರ್ಯ ಎರಡೂ ನಡೆಯುತ್ತಿವೆ.

ಅನ್ನಭಾಗ್ಯ, ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಯುವನಿಧಿ ಪಂಚ ಗ್ಯಾರಂಟಿ ಯೋಜನೆಗಳಿಗೆ ಇದುವರೆಗೆ ರಾಜ್ಯ ಸರ್ಕಾರವು 1,12,000 ಕೋಟಿ ರೂ ಖರ್ಚು ಮಾಡಿದ್ದೇವೆ. ಪ್ರಸಕ್ತ 2026ನೇ ಸಾಲಿನಲ್ಲೂ ಸಹ ಮತ್ತೆ 52 ಸಾವಿರ ಕೋಟಿ ರೂ ಖರ್ಚು ಮಾಡುತ್ತಿದ್ದೇವೆ ಎಂದು ತಿಳಿಸಿದರು.

ರಾಜಸ್ಥಾನ ರಾಜ್ಯ ಬಿಟ್ಟರೆ ಕರ್ನಾಟಕ ರಾಜ್ಯವು ಹೆಚ್ಚು ಒಣಭೂಮಿ ಇರುವ ಎರಡನೇ ರಾಜ್ಯವಾಗಿದೆ. ಇದು ನಮ್ಮ ಗಮನಕ್ಕಿದೆ. ಈ ಕಾರಣದಿಂದಾಗಿ ಸಿಂಧನೂರ, ರಾಯಚೂರು ಸೇರಿದಂತೆ ಎಲ್ಲಾ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ಒತ್ತು ನೀಡಿ ನೀರಾವರಿ ಪ್ರದೇಶದ ವಿಸ್ತೀರ್ಣಕ್ಕೆ, ಹಸೀರಿಕರಣಕ್ಕೆ ಒತ್ತು ಕೊಡುವ ಉದ್ದೇಶ ಹೊಂದಿದ್ದೇವೆ ಹೊಂದಿದ್ದೇವೆ ಎಂದರು.

ಕೃಷ್ಣ ಮೇಲ್ದಂಡೆ ಮೂರನೇ ಹಂತದ ಯೋಜನೆಯ ಅನುಷ್ಠಾನಕ್ಕೆ ಕೇಂದ್ರ ಸರ್ಕಾರವು ಇದುವರೆಗೆ ಗೆಜೆಟ್ ನೋಟಿಫಿಕೇಶನ್ ಮಾಡುತ್ತಿಲ್ಲ. 172 ಟಿಎಂಸಿ ನೀರು ಬಳಸಿಕೊಳ್ಳಲು ಯಾವುದೇ ಅಭ್ಯಂತರ ಇಲ್ಲ ಎಂಬುದಾಗಿ 2013ರಲ್ಲಿಯೇ ನ್ಯಾಯ ನಮ್ಮ ಪರವಾಗಿದೆ ಎಂದು ತಿಳಿಸಿದರು.

**ಬಾಕಿ ಅನುದಾನ ಬಿಡುಗಡೆ:** ಶ್ರೀ ಸೋಮಲಾಪುರದ ಅಂಬಾಮಠದ ದೇವಸ್ಥಾನಕ್ಕೆ ನಿಗದಿಪಡಿಸಿದ 6.30 ಕೋಟಿ ರೂ ಪೈಕಿ ಇದುವರೆಗೆ 2 ಕೋಟಿ ರೂ ವೆಚ್ಚ ಮಾಡಲಾಗಿದೆ. ಬಾಕಿ ಅನುದಾನವನ್ನು ಸಹ ಬಿಡುಗಡೆ ಮಾಡಿ ಅಂಬಾಮಠದ ಸಮಗ್ರ ಅಭಿವೃದ್ಧಿಗೆ ನಾವು ಬದ್ಧರಾಗಿದ್ದೇವೆ ಎಂದು ತಿಳಿಸಿದರು.

ಮಹಾತ್ಮ ಗಾಂಧೀಜಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸ್ವರೂಪವನ್ನು ಕೇಂದ್ರ ಸರ್ಕಾರವು ಸಂಪೂರ್ಣ ಬದಲಿಸಿ, ಜನ ಸಾಮಾನ್ಯರಿಗೆ ಅನ್ಯಾಯ ಮಾಡುತ್ತಿದೆ ಎಂದು ಮುಖ್ಯಮಂತ್ರಿಗಳು ಅಸಮಧಾನ ವ್ಯಕ್ತಪಡಿಸಿದರು.

**ಶಾಸಕರಿಗೆ ಅಭಿನಂದನೆ:** ಸಿಂಧನೂರು ತಾಲೂಕಿನ ಸಮಸ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಯೋಚಿಸಿ, ಕೆಕೆಆರ್ ಡಿಬಿಯಿಂದ 14 ಬಸ್ ಗಳ ಸೌಕರ್ಯ ಕಲ್ಪಿಸುವಲ್ಲಿ ಶ್ರಮಿಸಿದ ಸಿಂಧನೂರ ಶಾಸಕರಾದ ಹಂಪನಗೌಡ ಬಾದರ್ಲಿ ಅವರಿಗೆ ವಿದ್ಯಾರ್ಥಿಗಳ ಪರವಾಗಿ ಅಭಿನಂದನೆ ತಿಳಿಸುತ್ತೇನೆ ಎಂದು ಮುಖ್ಯಮಂತ್ರಿಗಳು ಸಂತಷ ವ್ಯಕ್ತಪಡಿಸಿದರು.

**ಅಂಬಾದೇವಿ ದರ್ಶನದಿಂದ ಸಂತಷ:** ಸೋಮಲಾಪುರದ ಸಿದ್ಧಪರ್ವತಕ್ಕೆ ಆಗಮಿಸಿ ಶ್ರೀ ಅಂಬಾದೇವಿ ಮಹೋತ್ಸವ ಮತ್ತು ಜಂಬೂ ಸವಾರಿಗೆ ಸಂತೋಷದಿಂದ ಚಾಲನೆ ನೀಡಿದ್ದೇನೆ. ಶ್ರೀ ಅಂಬಾದೇವಿಯ ದರ್ಶನ ಪಡೆದಿರುವುದು ನನ್ನ ಪುಣ್ಯ ಎಂದೇ ಭಾವಿಸಿದ್ದೇನೆ ಎಂದು ತಿಳಿಸಿದ ಮುಖ್ಯಮಂತ್ರಿಗಳು, ನೆರೆದಿದ್ದ ಎಲ್ಲ ಜನತೆಗೆ ಎಲ್ಲ ಭಕ್ತರಿಗೆ ತಾಯಿ ಅಂಬಾದೇವಿ ಒಳ್ಳೆಯದು ಮಾಡಲಿ ಎಂದು ತಾವು ಪ್ರಾರ್ಥಿಸುವುದಾಗಿ ತಿಳಿಸಿದರು.

ಕರ್ನಾಟಕ ರಾಜ್ಯ ಮೂಲಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಅಧ್ಯಕ್ಷತೆ ವಹಿಸಿದ್ದರು.

ಸಮಾರಂಭದಲ್ಲಿ ಸಚಿವರಾದ ಸತೀಶ ಜಾರಕಿಹೊಳಿ, ರಾಮಲಿಂಗಾರೆಡ್ಡಿ, ಡಾ.ಶರಣಪ್ರಕಾಶ ಪಾಟೀಲ, ಶಿವರಾಜ ತಂಗಡಗಿ, ಸಾರಿಗೆ ಸಂಸ್ಥೆಯ ಅಧ್ಯಕ್ಷರಾದ ಅರುಣಕುಮಾರ ಪಾಟೀಲ, ಸಂಸದರಾದ ರಾಜಶೇಖರ ಹಿಟ್ನಾಳ, ಶಾಸಕರಾದ ಬಸನಗೌಡ ತುರವಿಹಾಳ, ಬಸನಗೌಡ ದದ್ದಲ್, ಬಿ.ಎಂ ನಾಗರಾಜ, ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಬಸವನಗೌಡ ಬಾದರ್ಲಿ, ಜಹೀರಾ ನಸೀಮ್, ನಿತೀಶ್ ಕೆ., ಎಸ್ಪಿ ಅರುಣಾಂಕ್ಷು ಗಿರಿ, ಬಿ ಸುಶೀಲಾ, ಬಸವಣೆಪ್ಪ ಕಲಶೆಟ್ಟಿ, ಅರುಣ ದೇಸಾಯಿ, ಚಂದ್ರಶೇಖರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ವೆಂಕನಗೌಡ ಬಾದರ್ಲಿ, ರಂಗನಗೌಡ ಹಾಗೂ ಇನ್ನಿತರ ಗಣ್ಯರು ಉಪಸ್ಥಿತರಿದ್ದರು.



ಬಾಗಲಕೋಟೆ ಜಿಲ್ಲೆಯ ಬಾದಾಮಿ ಬನಶಂಕರಿ ದೇವಿಯ ಮಹಾ ರಥೋತ್ಸವ ಬಣದ ಹುಣ್ಣಿಮೆ ಶನಿವಾರ ವಿಜೃಂಭಣೆಯಿಂದ ಜರುಗಿತು. ಸಹಸ್ರಾರು ಜನ ಭಕ್ತರು ಉತ್ಸವದಲ್ಲಿ ಪಾಲ್ಗೊಂಡಿದ್ದರು.

# ಕಾವ್ಯ ಹೆಣ್ಣಿಗೆ ಸ್ವಾಯತ್ತ ಜಗತ್ತನ್ನು ರೂಪಿಸಿಕೊಳ್ಳುವ ಮಾರ್ಗ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಕನ್ನಡ ಕಾವ್ಯ ಯಾವ ದಿಕ್ಕಿನೆಡೆಗೆ ಹೋಗುತ್ತಿದೆ, ಹೋಗಬೇಕು ಎಂಬುದನ್ನು ಕವಿ ಮತ್ತೆ ಮತ್ತೆ ಕೇಳಿಕೊಳ್ಳಬೇಕು. ಕವಿ ಎಂಥ ಹುಡುಕಾಟದ ಪಾಲುದಾರ ಆಗಬೇಕು ಎಂಬ ಎಚ್ಚರಿಕೆಯ ಪ್ರಜ್ಞೆಯ ಜಾಗೃತಿ ಮುಖ್ಯವಾಗಿ ಬೇಕು ಎಂದರು.

ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾಧ್ಯಕ್ಷೆಯಾದ ಡಾ.ಮುಮ್ತಾಜ್ ಬೇಗಂ ಅವರು ಗಂಗಾವತಿಯಲ್ಲಿ ಅಯೋಜಿಸಲಾಗಿದ್ದ ಒದು ಹೊತ್ತಿಗೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ, ಮನುಷ್ಯನ ಆಕ್ರಂಧನದ ಪರಿಣಾಮಗಳೇನು? ವಿಚಿತ್ರವಾದ ಹುಡುಕಾಟ, ನಿಗೂಢ, ಆಲಿಸುವಿಕೆ, ಕಾಯುವಿಕೆ, ಮಾಗುವ ಗುಣ ಏನನ್ನು ಸೂಚಿಸುತ್ತವೆ ಎನ್ನುವ ಅಂಶಗಳನ್ನು ಸೂಕ್ಷ್ಮವಾಗಿ ಗ್ರಹಿಸಬೇಕು. ಹೆಣ್ಣಿಗೆ ಕಾವ್ಯ ಒಂದು ಸ್ವಾಯತ್ತ ಜಗತ್ತನ್ನು ನಿರ್ಭಿಡೆಯಾಗಿ ಕಟ್ಟಿಕೊಳ್ಳಲು ಇರುವ ಮಾರ್ಗವಾಗಿದೆ. ಮಹಿಳೆಯರು ಬರೆಯುತ್ತಿರುವ ವರ್ತಮಾನದ ಕವಿತೆಗಳಲ್ಲಿ ಮುಕ್ತತೆ ಹೆಚ್ಚು ಕಾಣುತ್ತೇವೆ. ನಿವೇದನಾತ್ಮಕ ನಿರೂಪಣಾ ವಿಧಾನವನ್ನು ದಾಟಿ ಹೆಣ್ಣಿನ ಒಳಲೋಕದ ಆವರಣವನ್ನು ತಲುಪುತ್ತಿರುವ ಕವಿತೆಗಳನ್ನು ಕಾಣುತ್ತೇವೆ ಎಂದರು.

ರವಿವಾರ ನಗರದ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ಸಹಯೋಗದಲ್ಲಿ ಕರ್ನಾಟಕ ಲೇಖಕಿಯರ ಸಂಘ. (ರಿ )ಕೊಪ್ಪಳ ಜಿಲ್ಲಾ ಶಾಖೆ ಕೊಪ್ಪಳ ಇವರ ಓದು ಹೊತ್ತಿಗೆ ಅಭಿಯಾನ ಕಾರ್ಯಕ್ರಮದಲ್ಲಿ ಜಯಶ್ರೀ ಹಕ್ಕಂಡಿಯವರ ಮಿಣುಕು ದೀಪಗಳು ಹಾಗೂ ಉಲಿದಷ್ಟೇ ದನಿ ಪುಸ್ತಕಗಳ ಕುರಿತು ಅವಲೋಕನ ಮಾಡಲಾಯಿತು.



ಜಯಶ್ರೀ ಹಕ್ಕಂಡಿಯವರ ಎರಡು ಕೃತಿಗಳ ಕುರಿತು ನಾಗರತ್ನ ಎಚ್. ಮಾತನಾಡಿ ಉಲಿದಷ್ಟೇ ದನಿ ಹಾಗೂ ಮಿಣುಕು ದೀಪಗಳು ಕೃತಿಗಳು ಉತ್ತಮ ಸಂದೇಶವನ್ನು ನೀಡುತ್ತವೆ ಅಷ್ಟೇ ಅಲ್ಲದೆ ಜಂಜಡದ ಬದುಕಿನ ತಾಕಲಾಟಗಳು, ವಾತ್ಸಲ್ಯ, ಪ್ರೇಮದ ನೆಲೆಗಳು, ಗಾಂಧಿ ತತ್ವ ಚಿಂತನೆಗಳು ಇತ್ಯಾದಿ ಗಂಭೀರವಾಗಿ ಮೂಡಿ ಬಂದಿದೆ. ಸಾಹಿತ್ಯ ಸಮಾಜದ ಹಾಗೂ ಹೋಗುಗಳನ್ನು ಹೇಳುತ್ತಾ ಅದರಲ್ಲಿ ಉಂಟಾದ ಓರೆ ಕೋರೆಗಳನ್ನು ಖಂಡಿಸುತ್ತಾ ಮೌಲ್ಯಗಳ ಜೀವಂತಿಕೆಯನ್ನು ಇಲ್ಲಿ ಮುಖ್ಯವಾಗಿ ಬಿಂಬಿಸಲಾಗಿದೆ ಎಂದರು.

ಶ್ರೀಮತಿ ನೀಲಮ್ಮ ಪ್ರಾಸ್ತಾವಿಕವಾಗಿ ಮಾತನಾಡಿ, ಹೆಣ್ಣುಮಕ್ಕಳ ಓದಿಗೆ ಅವಕಾಶ ಇಲ್ಲದ ದಿನಗಳನ್ನು ನೋಡಿದ್ದೇವೆ. ಓದಲು ಅನೂಕೂಲ ಇದೆ, ಓದು ಇಂದಿನ ಅಗತ್ಯಗಳಲ್ಲಿ ಮಹತ್ವದ ಅಂಶವಾಗಿದೆ. ಮೊಬೈಲ್ ಬಳಕೆಯಿಂದ ಓದಿನ ಕ್ರಮ ಬದಲಾಗಿದೆ. ಅಂಗೈಯಲ್ಲಿ ಜಗತ್ತನ್ನು ಕಾಣುತ್ತಿದ್ದಾಗಲು ಪುಸ್ತಕದ ಓದು ಕೊಡುವ ಹಿತವನ್ನು ಇನ್ನಾವುದೇ ಓದಿನ

# ಗುರುಕುಲದಲ್ಲಿ ವಿದ್ಯಾರ್ಥಿಗಳಿಗೆ ಗೋಲ್ಡ್ ಛಾನ್ಸ್

• ಪರಶುರಾಮ ಕರಣಂ, ಭಾಲ್ಕಿ

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಪ್ರತಿ ವರ್ಷದಂತೆ ಭಾನುವಾರ 2026–27ನೇ ಸಾಲಿನ ಮೊದಲ ಹಂತದ ಗುರುಕುಲ ಗೋಲ್ಡನ್ ಸ್ಕಾಲರ್ ಶಿಪ್ ಪ್ರವೇಶ ಪರೀಕ್ಷೆ ಸುಸೂತ್ರವಾಗಿ ನಡೆದವು.



2026ರ ಜನವರಿ ಅಂತ್ಯದವರೆಗೂ ಐದು ಹಂತದಲ್ಲಿ ಪರೀಕ್ಷೆ ನಡೆಯಲಿದ್ದು ಮೊದಲ ಹಂತದ ಪರೀಕ್ಷೆಗೆ ರಾಜ್ಯ ಸೇರಿ ನೆರೆಯ ಮಹಾರಾಷ್ಟ್ರ ತೆಲಂಗಾಣ ರಾಜ್ಯದ ನಾನಾ ಕಡೆಗಳಿಂದ 1900 ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆಗೆ ಹೆಸರು ನೋಂದಾಯಿಸಿದ್ದರು. ಅದರಲ್ಲಿ ವಿವಿಧೆಡೆ ಪ್ರಸ್ತುತ ಎಸ್ಸೆಸ್ಸೆಲ್ಸಿಯಲ್ಲಿ ವ್ಯಾಸಂಗ ಮಾಡುತ್ತಿರುವ 1207 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿ ತಮ್ಮ ಅದೃಷ್ಟ ಪರೀಕ್ಷೆಗೊಳಾಗದರು. ರಾಜ್ಯದ ಬೀದರ್, ಕಲಬುರಗಿ, ಯಾದಗಿರಿ, ವಿಜಯಪುರ, ರಾಯಚೂರು, ಕೊಪ್ಪಳ, ಹುಬ್ಬಳ್ಳಿ, ಧಾರವಾಡ, ಬೆಳಗಾವಿ ಸೇರಿದಂತೆ ರಾಜ್ಯದ ಸುಮಾರು 25 ಜಿಲ್ಲೆಯ ವಿದ್ಯಾರ್ಥಿಗಳು ಸೇರಿ ನೆರೆ ರಾಜ್ಯದ ತೆಲಂಗಾಣ ರಾಜ್ಯದ ಜಹೀರಾಬಾದ್, ಹೈದರಾಬಾದ್ ಮತ್ತು ಮಹಾರಾಷ್ಟ್ರ ರಾಜ್ಯದ ನಾಂದೇಡ, ಲಾತೂರು, ಉದಗೀರ, ಸೋಲಾಪುರ ಸೇರಿದಂತೆ ಮುಂತಾದ ಕಡೆಗಳಿಂದ ವಿದ್ಯಾರ್ಥಿಗಳು ಆಗಮಿಸಿ ಪರೀಕ್ಷೆ ಬರೆದರು.

**1207 ಮಕ್ಕಳು ಪರೀಕ್ಷೆಗೆ ಹಾಜರು**

**100 ಮಕ್ಕಳಿಗೆ ಉಚಿತ ಶಿಕ್ಷಣ:** ಗುರುಕುಲ ಗೋಲ್ಡನ್ ಸ್ಕಾಲರ್ ಶಿಪ್ ಪ್ರವೇಶ ಪರೀಕ್ಷೆಯಲ್ಲಿ ಮೊದಲ 100 ರ್‍ಯಾಂಕ್ ಪಡೆಯುವ ವಿದ್ಯಾರ್ಥಿಗಳಿಗೆ ಉಚಿತ ಎರಡು ವರ್ಷ ಪಿಯುಸಿ ಶಿಕ್ಷಣ, ವಸತಿ, ಕೋಚಿಂಗ್ ಮತ್ತು ರಿಯಾಯಿತಿ ಫೀ ನಲ್ಲಿ ಶಿಕ್ಷಣ ಸಿಗಲಿದೆ.

ಮೊದಲ 25 ರ್‍ಯಾಂಕ್ ಪಡೆಯುವ ವಿದ್ಯಾರ್ಥಿಗಳು ಉಚಿತ ಶಿಕ್ಷಣ, ವಸತಿ ಮತ್ತು ಕೋಚಿಂಗ್ ಸೌಲಭ್ಯ ಪಡೆಯಲಿದ್ದಾರೆ. 75 ವಿದ್ಯಾರ್ಥಿಗಳು ಶೇ.50ರಷ್ಟು ರಿಯಾಯಿತಿಯಲ್ಲಿ ಶಿಕ್ಷಣ, ವಸತಿ, ಕೋಚಿಂಗ್ ಸೌಲಭ್ಯ ಪಡೆದು ಕೊಳ್ಳಲಿದ್ದಾರೆ.



ಗಡಿ ಭಾಗದ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತ ಮತ್ತು ರಿಯಾಯಿತಿ ಫೀ ನಲ್ಲಿ ಶಿಕ್ಷಣ, ವಸತಿ ಮತ್ತು ಕೋಚಿಂಗ್ ನೀಡುವ ಸದಾಶಯದೊಂದಿಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ರೂಪಿಸಿರುವ ಗುರುಕುಲ ಗೋಲ್ಡನ್ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆಗೆ ಸಾವಿರಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪರೀಕ್ಷೆ ಬರೆದಿರುವುದು ಸಂತಸ ತರಿಸಿದೆ.

– ಗುರುಬಸವ ಪಟ್ಟದ್ದೇವರು
ಪೀಠಾಧಿಪತಿಗಳು ಹಿರೇಮಠ ಸಂಸ್ಥಾನ ಭಾಲ್ಕಿ












Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)